ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೮

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಶುಕ್ರವಾರ, ದಿನಾಂಕ : ೨೫ನೇ ನವೆಂಬರ್, ೨೦೧೬**

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

---

## ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣವನ್ನು ಒಂದೇ ವ್ಯವಸ್ಥೆ ಅಡಿ ತರುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೧೭ (೫೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಬಜೆಟ್ ಘೋಷಣೆಯಾದಾಗ ಪ್ರೌಢಶಾಲೆ ಮತ್ತು ಪದವಿ ಪೂರ್ವ ಶಿಕ್ಷಣವನ್ನು ಒಂದೇ ಆಡಳಿತ ಮತ್ತು ಕಾರ್ಯ ವ್ಯವಸ್ಥೆಯಡಿ ತರಲು ಮೂರು ವರ್ಷದ ಕ್ರಿಯಾ ಯೋಜನೆ ರೂಪಿಸುವ ಬಗ್ಗೆ ಇಲ್ಲಿಯವರೆಗೆ ತೆಗೆದುಕೊಂಡ ಕ್ರಮ ಏನು ;

(ಆ) ಈ ನಿರ್ಣಯ ಕೈಗೊಳ್ಳಲು ಇರುವ ಹಿನ್ನಲೆ ಹಾಗೂ ಕಾರಣವೇನು;

(ಇ) ಈ ಹಿಂದೆ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಸಂರಚನೆ ಪರಿಷ್ಕರಿಸಲು ನೇಮಕಗೊಂಡಿದ್ದ ಪ್ರೊ: ಗೋವಿಂದ ಸಮಿತಿ ವರದಿ ನೀಡಿದೆಯೇ; ನೀಡಿದ್ದಲ್ಲಿ, ವರದಿಯ ಮುಖ್ಯಾಂಶಗಳೇನು? (ವರದಿಯ ಪ್ರತಿ ಒದಗಿಸುವುದು)

## ಶಿಕ್ಷಕರ ವರ್ಗಾವಣೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೧೮ (೫೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಕರ ವರ್ಗಾವಣೆ ಕಾಯ್ದೆಯಿಂದ ವರ್ಗಾವಣೆ ಬಯಸಿದ ಶಿಕ್ಷಕರಿಗೆ ಅವಕಾಶ ಸಿಗುತ್ತಿಲ್ಲವೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವರ್ಗಾವಣೆ ಕಾಯ್ದೆಯಲ್ಲಿ ಇನ್ನೂ ಹಲವು ಕೊರತೆಗಳು, ನ್ಯೂನತೆಗಳು ಹಾಗೂ ಲೋಪದೋಷಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವರ್ಗಾವಣೆ ಕಾಯ್ದೆಯ ಸಮಗ್ರ ತಿದ್ದುಪಡಿಯ ಅಗತ್ಯತೆ ಸರ್ಕಾರಕ್ಕೆ ಮನದಟ್ಟಾಗಿದೆಯೇ ;

(ಇ) ಈ ನಿಟ್ಟಿನಲ್ಲಿ ಸರ್ಕಾರದ ಚಿಂತನೆಯ ಕ್ರಮವೇನು ;

(ಈ) ಈ ಬಾರಿಯ ವರ್ಗಾವಣೆ ಪ್ರಕ್ರಿಯೆಯಲ್ಲಿ ಸಾಕಷ್ಟು ಸಮಸ್ಯೆಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ರೀತಿಯ ಸಮಸ್ಯೆಗಳು ಉಂಟಾಗಲು ಕಾರಣಗಳೇನು ?

## ಪ್ರಾಥಮಿಕ, ಪ್ರೌಢ, ಕಾಲೇಜುಗಳ ಸಿಬ್ಬಂದಿಗಳ ಬಡ್ತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೧೯ (೫೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕದಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ, ಪ್ರೌಢ ಶಾಲೆಯ ಶಿಕ್ಷಕರು ಪ್ರೌಢ ಶಾಲಾ ಮುಖ್ಯ ಗುರುಗಳಾಗಿ ಬಡ್ತಿ ಹೊಂದಿದಾಗ ೧೦ ವರ್ಷ, ೧೫ ವರ್ಷ, ೨೦ ವರ್ಷ, ೨೫ ವರ್ಷ, ೩೦ ವರ್ಷದ ವೇತನ ಬಡ್ತಿ ದೊರಕದೆ ಪದೋನ್ನತಿ ಹೊಂದಿದ ಮೊದಲಿನ ತತ್ಸಮಾನರು ಪಡೆಯುವ ಸಂಬಳಕ್ಕಿಂತ ಕಡಿಮೆ ಸಂಬಳ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಸಮಸ್ಯೆ ರಾಜ್ಯದ ಯಾವ ಯಾವ ಇಲಾಖೆಗಳಲ್ಲಿದೆ; ಪದೋನ್ನತಿ ಹೊಂದಿಯೂ ಮೂಲ ಹುದ್ದೆಯ ತತ್ಸಮಾನರಿಗಿಂತ ಕಡಿಮೆ ವೇತನ ಪಡೆಯುತ್ತಿರುವುದು ಅನ್ಯಾಯವಲ್ಲವೇ ; ಇದನ್ನು ಪಡಿಸಡಿಸಲು ಸರ್ಕಾರದ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪೨೦ (೫೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಇಲಾಖೆ ನಿಗಧಿ ಮಾಡಿರುವ ವಿದ್ಯಾರ್ಥಿ ಶಿಕ್ಷಕರ ಅನುಪಾತ ಎಷ್ಟು ;

(ಆ) ಈಗ ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವ ಪ್ರಕ್ರಿಯೆ ನಡೆಸಲಾಗುತ್ತಿದೆಯೇ ;

(ಇ) ಯಾವ ಹಂತದ ಅಧಿಕಾರಿಗಳಿಗೆ ಇದರ ಜವಾಬ್ದಾರಿ ವಹಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ವಿದ್ಯಾರ್ಥಿ ಶಿಕ್ಷಕರ ಅನುಪಾತವನ್ನು ಪ್ರೌಢ ಶಾಲೆಗೆ ವಿಷಯವಾರು ೪೦:೦೧ ಮಾಡುವುದಕ್ಕೆ ಸರ್ಕಾರದ ನಿಲುವು ಹಾಗೂ ಕ್ರಮಗಳೇನು ;

(ಉ) ಈಗ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಿ ವರ್ಗಾಯಿಸಿದ ನಂತರ ನಡೆಯುವ ವರ್ಗಾವಣೆ ಕೌನ್ಸ್‌ಲಿಂಗ್‌ನಲ್ಲಿ ಹೆಚ್ಚುವರಿಯಾದ ಶಿಕ್ಷಕರಿಗೂ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಕುರಿತು ಸರ್ಕಾರದ ನಿಲುವು ಹಾಗೂ ಕ್ರಮವೇನು?

## KEA ಯ "ಸಹಾಯಕ ಪ್ರಾಧ್ಯಾಪಕರ ಹುದ್ದೆ"ಗಳ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೨೧ (೭೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಧಿಸೂಚನೆಯ ದಿನಾಂಕ ಹಾಗೂ ಭರ್ತಿ ಮಾಡಿಕೊಳ್ಳುವ ಹುದ್ದೆಗಳ ಸಂಖ್ಯೆಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಹುದ್ದೆಗಳ ನೇಮಕಾತಿಯಲ್ಲಿ ೩೭೧ (ಜೆ) ಅಡಿಯಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಒಟ್ಟು ಹುದ್ದೆಗಳು ಹಾಗೂ ಮೀಸಲಾತಿ ಕಲ್ಪಿಸಲಾಗಿರುವ ಹುದ್ದೆಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ನೇಮಕಾತಿ ಪ್ರಕ್ರಿಯೆ ಗೊಂದಲ ಹಾಗೂ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬಳ್ಳಾರಿ ಶೈಕ್ಷಣಿಕ ಜಿಲ್ಲೆಯ ಬಿ.ಇ.ಓ ಮತ್ತು ಶಾಲಾ, ಕಾಲೇಜುಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೨೨ (೭೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಶೈಕ್ಷಣಿಕ ಜಿಲ್ಲೆಯ ಅಡಿಯಲ್ಲಿ ಬರುವ ಕ್ಷೇತ್ರ ಶಿಕ್ಷಣ ಅಧಿಕಾರಿ (ಬಿಇಓ) ಕಛೇರಿಗಳು ಯಾವುವು ; ಸದರಿ ಕ್ಷೇತ್ರ ಶಿಕ್ಷಣ ಅಧಿಕಾರಿ (ಬಿಇಓ) ಕಛೇರಿ ಅಡಿಯಲ್ಲಿ ಬರುವ ಶಾಲಾ, ಕಾಲೇಜುಗಳ ಸಂಖ್ಯೆ ಎಷ್ಟು; ಕ್ಷೇತ್ರ ಶಿಕ್ಷಣ ಅಧಿಕಾರಿ ಕಛೇರಿ ವ್ಯಾಪ್ತಿವಾರು ಹಾಗೂ ಜಿಲ್ಲಾ ಕೇಂದ್ರದಿಂದ ಇರುವ ದೂರದ ಪ್ರತ್ಯೇಕ ಮಾಹಿತಿ ನೀಡುವುದು ;

(ಆ) ಬಳ್ಳಾರಿ ನಗರದಿಂದ ಜಿಲ್ಲೆಯ ಪಶ್ಚಿಮ ಭಾಗದ ತಾಲ್ಲೂಕುಗಳಾದ ಹಡಗಲಿ, ಕೂಡ್ಲಿಗಿ, ಹಗರಿ ಬೊಮ್ಮನಹಳ್ಳಿ ತಾಲ್ಲೂಕುಗಳು ದೂರವಿದ್ದು, ಆ ಭಾಗದ ಸಂಸ್ಥೆಗಳು, ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಕಾರ್ಯಗಳಿಗೆ ಬಳ್ಳಾರಿ ನಗರಕ್ಕೆ ಅಲೆದಾಡುವುದರಿಂದ, ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

(ಇ) ಬಳ್ಳಾರಿ ಶೈಕ್ಷಣಿಕ ಜಿಲ್ಲೆ ವಿಭಜಿಸಿ ಹಡಗಲಿ, ಕೂಡ್ಲಿಗಿ (ಕೊಟ್ಟೂರು), ಹಗರಿ ಬೊಮ್ಮನಹಳ್ಳಿ, ತಾಲ್ಲೂಕುಗಳನ್ನೊಳಗೊಂಡ ಪ್ರತ್ಯೇಕ ಶೈಕ್ಷಣಿಕ ಜಿಲ್ಲೆ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸಂಪೂರ್ಣ ವಿವರ ನೀಡುವುದು)

(ಈ) ಬಳ್ಳಾರಿ ಜಿಲ್ಲೆಯ ಪಶ್ಚಿಮ ಭಾಗದ ತಾಲ್ಲೂಕಿನ ನಾಗರಿಕರು, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಾಗೂ ಆ ಭಾಗದ ಶೈಕ್ಷಣಿಕ ಪ್ರಗತಿಗಾಗಿ ಹಡಗಲಿ ಪಟ್ಟಣವನ್ನು , ಶೈಕ್ಷಣಿಕ ಜಿಲ್ಲಾ ಕೇಂದ್ರವನ್ನಾಗಿ ಘೋಷಣೆ ಮಾಡಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಹೊಸದಾಗಿ ಮಂಜೂರಾಗಿರುವ ಇಂಜಿನಿಯರ್ ಕಾಲೇಜುಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೨೩ (೬೮೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕು ಸೇರಿದಂತೆ ಹೊಸದಾಗಿ ಮಂಜೂರಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು ; (ಮಂಜೂರಾದ ವರ್ಷದೊಂದಿಗೆ ಕಾಲೇಜುವಾರು ವಿವರ ನೀಡುವುದು)

(ಆ) ಸದರಿ ಕಾಲೇಜುಗಳ ಕಟ್ಟಡಕ್ಕಾಗಿ ಅಂದಾಜು ಪಟ್ಟಿ ತಯಾರಿಸಲಾಗಿದೆಯೇ ; ಇದ್ದಲ್ಲಿ, ಸದರಿ ಕಟ್ಟಡಗಳಿಗಾಗಿ ತಗಲುವ ಒಟ್ಟು ಖರ್ಚು ಎಷ್ಟು ; (ಕಾಲೇಜುಗಳವಾರು ಸಂಪೂರ್ಣ ವಿವರ ನಿಡುವುದು)

(ಇ) ಸರ್ಕಾರದಿಂದ ಇಲ್ಲಿಯವರೆಗೆ ಸದರಿ ಕಟ್ಟಡಗಳ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನ ಹಾಗೂ ಖರ್ಚಾದ ಅನುದಾನ ಎಷ್ಟು ; (ಕಾಲೇಜುಗಳವಾರು ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳ ಹೊಸ ಕಟ್ಟಡಗಳ ಕಾಮಗಾರಿಯು ಅನುದಾನದ ಕೊರತೆಯಿಂದ ಬಹಳ ನಿಧಾನಗೊಂಡಿರುವುದು /ಸ್ಥಗಿತಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಮಗಾರಿಗಳನ್ನು ಚುರುಕುಗೊಳಿಸಿ ಕಟ್ಟಡಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

## ಪ್ರೌಢ ಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೨೪ (೫೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡುವ ಪ್ರಕ್ರಿಯೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ ಕಾರಣಗಳೇನು ಹಾಗೂ ಎಷ್ಟು ವರ್ಷಗಳಿಂದ ಈ ಪ್ರಕ್ರಿಯೆ ಸ್ಥಗಿತಗೊಂಡಿರುತ್ತದೆ; ಕಾರಣಗಳೊಂದಿಗೆ ಮಾಹಿತಿ ನೀಡುವುದು ;

(ಆ) ಸರ್ಕಾರ ಅವಶ್ಯಕವಿರುವ ಪದವಿ ಪಡೆದ ಸಹ ಶಿಕ್ಷಕರ ಕರಡು ಜೇಷ್ಠತಾ ಪಟ್ಟಿ ಹಾಗೂ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಣೆ ಮಾಡಿದೆಯೇ ; (ವಿವರ ನೀಡುವುದು)

(ಇ) ಪ್ರೌಢಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡಲು ಸರ್ಕಾರ ಮುಂದಾಗುವುದೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಜೇಷ್ಠತಾ ಪಟ್ಟಿ ಪ್ರಕಟಿಸಿ ತದನಂತರ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದಲ್ಲಿ ೧೯೮೭ ರಿಂದ ೧೯೯೫ ರವರೆಗೆ ಪ್ರಥಮದರ್ಜೆ ಕಾಲೇಜುಗಳ ಸ್ಥಾಪನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೨೫ (೬೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ – ಕರ್ನಾಟಕ ಹಾಗೂ ಹರಪನಹಳ್ಳಿ ಸೇರಿದಂತೆ ದಿನಾಂಕ: ೦೧.೦೬ ೧೯೮೭ ರಿಂದ ೩೧.೦೩.೧೯೯೫ ರವರೆಗೆ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳಾದ ಸಂಖ್ಯೆ ಎಷ್ಟು; ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ಸಾಮಾನ್ಯ ಆಡಳಿತ ಮಂಡಳಿವಾರು, ಜಿಲ್ಲಾವಾರು ವಿವರ ನೀಡುವುದು ;

(ಆ) ಸದರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವೇತನಾನುದಾನಕ್ಕೆ ಒಳಪಟ್ಟಿರುವ ಕಾಲೇಜುಗಳ ಸಂಖ್ಯೆ ಎಷ್ಟು ; (ವರ್ಗವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಹೈದರಾಬಾದ್– ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ೦೧.೦೬.೧೯೮೭ ರಿಂದ ೩೧.೦೩.೧೯೯೯ ರವರೆಗಿನ ಸಾಮಾನ್ಯ, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ಆಡಳಿತ ಮಂಡಳಿ ನಡೆಸುತ್ತಿರುವ ಪದವಿ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಲೇಜುವಾರು ಸಂಪೂರ್ಣ ವಿವರ ನೀಡುವುದು ;

(ಈ) ಈ ನಿಟ್ಟಿನಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲಾಗಿದೆಯೇ ; ಇದ್ದಲ್ಲಿ, ಸಚಿವ ಸಂಪುಟ ಉಪಸಮಿತಿಯ ವರದಿಯ ಮಾಹಿತಿಯನ್ನು ನೀಡುವುದು ಹಾಗೂ ಸರ್ಕಾರ ಕೈಗೊಂಡಿರುವ ಕ್ರಮದ ಮಾಹಿತಿ ನೀಡುವುದು ;

(ಉ) ಸದರಿ ಸಾಮಾನ್ಯ ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ಆಡಳಿತ ಮಂಡಳಿಯ ಪದವಿ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಮುಂದಾಗುವುದೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಮುಂದಾಗುವುದು ಎಂಬ ಮಾಹಿತಿ ನೀಡುವುದು?

## ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೪೨೬ (೭೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಯಾವ ಯಾವ ಹಳ್ಳಿಗೆ ಯಾವ ಯಾವ ಮೂಲಗಳಿಂದ ನೀರನ್ನು ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಸಲುವಾಗಿ ಕೈಗೊಂಡಿರುವ ಕಾಮಗಾರಿಗಳಾವುವು ; ಈ ಕಾಮಗಾರಿಗಳಿಗೆ ಖರ್ಚಾಗಿರುವ ಹಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೈಗೊಂಡ ಕಾಮಗಾರಿಗಳಲ್ಲಿ ಬಾಕಿ ಇರುವ ಕಾಮಗಾರಿಗಳೆಷ್ಟು ; ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಈ) ೨೦೧೬–೧೭ನೇ ಸಾಲಿಗೆ ಬಹುಗ್ರಾಮ ಕುಡಿಯುವ ನೀರನ್ನು ಒದಗಿಸಲು ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; ಈ ಯೋಜನೆಗೆ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಕಲ್ಲುಕ್ವಾರಿ ನಡೆಸಲು ಅನುಮತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೪೨೭ (೭೦೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಲ್ಲುಕ್ವಾರಿ ನಡೆಸಲು ಅನುಮತಿ ಕೋರಿ ಬಂದಿರುವ ಅರ್ಜಿ ಸಂಖ್ಯೆಗಳು ಸಂಖ್ಯೆ ಎಷ್ಟು ; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕ್ವಾರಿ ನಡೆಸಲು ಅನುಮತಿ ಕ್ಲಿಯರೆನ್ಸ್ ಸರ್ಟಿಫಿಕೇಟ್ ನೀಡುವ ಅಧಿಕಾರವನ್ನು ಸರ್ಕಾರ ಯಾರಿಗೆ ನೀಡಿದೆ ;

(ಇ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಕ್ವಾರಿ ನಡೆಸಲು ಅನುಮತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಹಾಲಿ ಇರುವ ಕಲ್ಲುಕ್ವಾರಿಗಳ ಸಂಖ್ಯೆ ಎಷ್ಟು ? (ಹೆಸರು ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

## ಸರ್ಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರುಗಳ ಮುಂಬಡ್ತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೨೮ (೭೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಪಿ.ಎಸ್.ಸಿ. ಮುಖಾಂತರ ೧೯೯೯ನೇ ಸಾಲಿನಲ್ಲಿ ನೇಮಕಗೊಂಡ ಪ್ರೌಢಶಾಲಾ ಮುಖ್ಯೋಪಾಧ್ಯಾಯರುಗಳ ಸಂಖ್ಯೆ ಎಷ್ಟು ;

(ಆ) ಇವರುಗಳಲ್ಲಿ ಒಟ್ಟು ಎಷ್ಟು ಜನ ಮುಖ್ಯೋಪಾಧ್ಯಾಯರುಗಳಿಗೆ ಬಡ್ತಿ ನೀಡಲಾಗಿದೆ ;

(ಇ) ಹಾಲಿ ಬಡ್ತಿ ನಿರೀಕ್ಷೆಯಲ್ಲಿರುವವರ ಒಟ್ಟು ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ ವಿಳಂಬ ನೀತಿ ಅನುಸರಿಸದೆ ಎಷ್ಟು ಅವಧಿಯೊಳಗಾಗಿ ಬಡ್ತಿ ನೀಡಲಾಗುವುದು ; (ವಿವರ ನೀಡುವುದು)

(ಈ) ಉಳಿದವರಿಗೆ ಎಷ್ಟು ಕಾಲಮಿತಿಯೊಳಗಾಗಿ ಬಡ್ತಿ ನೀಡಲಾಗುವುದು? (ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮೌಲಾನಾ ಅಜಾದ್ ಭವನದ ನಿರ್ಮಾಣದ ಯೋಜನೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೨೯ (೭೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಮೌಲಾನಾ ಅಜಾದ್ ಭವನ ನಿರ್ಮಾಣದ ಯೋಜನೆಯಲ್ಲಿ ಮೂರು ವರ್ಷಗಳಿಂದ ಎಷ್ಟು ಅನುದಾನ ಮಂಜೂರಾಗಿದೆ ; (ವಿವರ ನೀಡುವುದು)

(ಆ) ಈ ಯೋಜನೆಯಲ್ಲಿ ಮಂಜೂರಾದ ಮೌಲಾನಾ ಅಜಾದ್ ಭವನಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಪೈಕಿ ಮೌಲಾನಾ ಅಜಾದ್ ಭವನ ನಿರ್ಮಾಣ ಪೂರ್ಣಗೊಂಡಿರುವುದು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು ) ಅಪೂರ್ಣಗೊಂಡಿರುವ ಮೌಲನಾ ಅಜಾದ್ ಭವನ ಎಷ್ಟು ; ಇದಕ್ಕೆ ಕಾರಣಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೩೦ (೭೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪ ಸಂಖ್ಯಾತರ ಸಮುದಾಯ ಸಂಸ್ಥೆಗಳ ವತಿಯಿಂದ ನಡೆಸುತ್ತಿರುವ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳ ವಿವರ ನೀಡುವುದು ; (ಜಿಲ್ಲಾವಾರು/ಶಾಲಾವಾರು ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳ ಪೈಕಿ ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು/ಶಾಲಾವಾರು ವಿವರ ನೀಡುವುದು)

(ಇ) ಎಷ್ಟು ಹುದ್ದೆಗಳು ಖಾಲಿ ಇವೆ ; ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಪರವಾನಿಗೆ ಕೋರಿ ಅಲ್ಪಸಂಖ್ಯಾತರ ಶಾಲೆಗಳಿಂದ ಬಂದಿರವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಈ ಪೈಕಿ ಪುರಸ್ಕೃತವಾದ ಹಾಗೂ ತಿರಸ್ಕೃತವಾದ ಪ್ರಸ್ತಾವನೆಗಳು ಎಷ್ಟು ; ಈ ಪ್ರಸ್ತಾವನೆಗಳು ತಿರಸ್ಕೃತವಾಗಲು ಕಾರಣಗಳೇನು ? (ಜಿಲ್ಲಾವಾರು, ಸಂಸ್ಥೆವಾರು ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದ ಐ.ಡಿ.ಎಂ.ಐ. (IDMI) ಯೋಜನೆಯ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೩೧ (೭೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಪುರಸ್ಕೃತ ಐ.ಡಿ.ಎಂ.ಐ (IDMI) ಯೋಜನೆ ಪ್ರಸ್ತುತ ಚಾಲನೆಯಲ್ಲಿದೆಯೇ ;

(ಆ) ಕಳೆದ ೦೩ ವರ್ಷಗಳಲ್ಲಿ ಈ ಯೋಜನೆಯಡಿಯಲ್ಲಿ ಅಲ್ಪ ಸಂಖ್ಯಾತರ ಸಂಸ್ಥೆಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ಹಾಗೂ ಸಂಸ್ಥೆವಾರು ವಿವರ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಎಷ್ಟು ಅಲ್ಪಸಂಖ್ಯಾತರ ಸಂಸ್ಥೆಗಳಿಗೆ ಪ್ರಸ್ತಾವನೆಗಳು ಬಾಕಿ ಇವೆ ; ಬಾಕಿ ಇರಲು ಕಾರಣಗಳೇನು ; (ಜಿಲ್ಲಾವಾರು ಹಾಗೂ ಸಂಸ್ಥೆವಾರು ವಿವರ ನೀಡುವುದು)

(ಈ) ಈ ಯೋಜನೆಗಳ ಬಗ್ಗೆ ಅಲ್ಪಸಂಖ್ಯಾತರ ಸಮುದಾಯಕ್ಕೆ ಅರಿವು ಮೂಡಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿ ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೩೨ (೭೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪ ಸಂಖ್ಯಾತರ ಸಮುದಾಯದ ವತಿಯಿಂದ ನಡೆಸಲಾಗುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಅಲ್ಪ ಸಂಖ್ಯಾತರ ಶಾಲೆಗಳೆಂದು ಘೋಷಿಸುವ ಪ್ರಾಧಿಕಾರ (Authority) ಯಾವುದು ;

(ಆ) ಇದಕ್ಕಾಗಿ ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ;

(ಇ) ಅಲ್ಪ ಸಂಖ್ಯಾತರ ಸಮುದಾಯದಿಂದ ನಡೆಸುತ್ತಿರುವ ಶಾಲೆಗಳು ಎಷ್ಟು ; (ಜಿಲ್ಲಾವಾರು/ಶಾಲೆಗಳ ಮಾಹಿತಿ ನೀಡುವುದು)

(ಈ) ಈ ಪೈಕಿ ಎಷ್ಟು ಶಾಲೆಗಳಿಗೆ ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸಲು ಬಾಕಿ ಇರುವ ಪ್ರಸ್ತಾವನೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಊ) ಪ್ರಸ್ತಾವನೆಗಳು ಇತ್ಯರ್ಥವಾಗದೇ ಬಾಕಿ ಉಳಿಯಲು ಕಾರಣಗಳೇನು; ಬಾಕಿ ಉಳಿದಿರುವ ಪ್ರಸ್ತಾವನೆಗಳನ್ನು ಯಾವ ಕಾಲಮಿತಿಯೊಳಗೆ ಇತ್ಯರ್ಥಗೊಳಿಸಲಾಗುವುದು ?

## ಕರ್ನಾಟಕ ಅಲ್ಪಸಂಖ್ಯಾತರ ಇಲಾಖೆಯಲ್ಲಿ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೩೩ (೭೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ ನೇ ಸಾಲಿನಲ್ಲಿ ಕರ್ನಾಟಕದ ಅಲ್ಪಸಂಖ್ಯಾತರ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ಯೋಜನೆವಾರು ವಿವರ ನೀಡುವುದು)

(ಇ) ೨೦೧೬ನೇ ಅಕ್ಟೋಬರ್ ೩೦ರವರೆಗೆ ಎಷ್ಟು ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಈ) ಉಳಿದ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಳಕೆ ಮಾಡಿಕೊಳ್ಳಲಾಗುವುದು ; (ಯೋಜನೆವಾರು ವಿವರ ನೀಡುವುದು)

(ಉ) ಅಲ್ಪಸಂಖ್ಯಾತರಿಗೆ ಈ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಉದ್ಯೋಗ ಖಾತ್ರಿ ಯೋಜನೆಯಡಿ ತಪ್ಪು ಮಾಡಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೪ (೧೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಅಧಿಕಾರಿಗಳ ವಿರುದ್ಧ ದೂರುಗಳು ದಾಖಲಾಗಿವೆ ; ಆ ಪೈಕಿ ತನಿಖೆಗೊಳಪಟ್ಟ ಪ್ರಕರಣಗಳೆಷ್ಟು ;

(ಆ) ಬಾಕಿ ಇರುವ ಪ್ರಕರಣಗಳ ತನಿಖಾ ಪ್ರಗತಿ ಯಾವ ಹಂತದಲ್ಲಿದೆ; (ಪ್ರಕರಣವಾರು ೩ ವರ್ಷಗಳ ವಿವರ ನೀಡುವುದು)

(ಇ) ವಿಚಾರಣೆಯಲ್ಲಿ ತಪ್ಪಿತಸ್ಥರೆಂದು ಕಂಡು ಬಂದ ಅಧಿಕಾರಿಗಳ ವಿರುದ್ಧ ಕೈಗೊಂಡ ಶಿಸ್ತು ಕ್ರಮಗಳೇನು ?

## ೧೯೯೪–೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು.

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೫ (೧೩೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೪–೯೫ ನೇ ಸಾಲಿನವರೆಗೆ ಪ್ರಾರಂಭಿಸಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಡಳಿತ ಮಂಡಳಿಗಳು ನಡೆಸುತ್ತಿರುವ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ನಿರ್ಧರಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುವುದು ;

(ಇ) ೧೯೯೪-೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಸಾಮಾನ್ಯ ಆಡಳಿತ ಮಂಡಳಿಯ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ನಿರ್ಧರಿಸಿದೆಯೇ ;

(ಈ) ವಿಶೇಷ ಪ್ರಕರಣವೆಂದು ಸಾಮಾನ್ಯ ಆಡಳಿತ ಮಂಡಳಿಯ ಯಾವ ಯಾವ ಕಾಲೇಜುಗಳನ್ನು ಅನುದಾನಕೊಳ್ಳಪಡಿಸಲಾಗಿದೆ;

(ಉ) ಉಳಿದ ಸಾಮಾನ್ಯ ಆಡಳಿತ ಮಂಡಳಿಯ ಕಾಲೇಜುಗಳನ್ನು ಯಾವ ದಿನಾಂಕದಿಂದ ಅನುದಾನಕ್ಕೆ ಒಳಪಡಿಸಲಾಗುವುದು ?

## ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರಾಂಶುಪಾಲರ ನೇಮಕಾತಿಗೆ ಮಾರ್ಗಸೂಚಿ ಹೊರಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೪೩೬ (೧೩೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ತುಂಬಿಕೊಳ್ಳಲು ಸರ್ಕಾರ ಮಾರ್ಗಸೂಚಿ ಹೊರಡಿಸಿದೆಯೇ; ಈ ಮಾರ್ಗಸೂಚಿಗಳು ಯಾವ ದಿನಾಂಕದಿಂದ ಜಾರಿಗೆ ಬಂದಿವೆ;

(ಆ) ಮಾರ್ಗಸೂಚಿಗಳು ಇನ್ನೂ ಜಾರಿಗೆ ಬಂದಿರದಿದ್ದಲ್ಲಿ ಯಾವಾಗಿನಿಂದ ಜಾರಿಗೊಳಿಸಲಾಗುವುದು ;

(ಇ) ಮಾರ್ಗಸೂಚಿ ಜಾರಿಗೊಳಿಸದ್ದನ್ನೇ ನೆಪವಾಗಿರಿಸಿಕೊಂಡು ಆಡಳಿತ ಮಂಡಳಿಗಳು ಅಧ್ಯಾಪಕರ ಜೇಷ್ಠತೆಯನ್ನು ಕಡೆಗಣಿಸಿ ಪ್ರಾಂಶುಪಾಲರನ್ನು ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹ ಆಡಳಿತ ಮಂಡಳಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಪದವಿ ಕಾಲೇಜುಗಳಿಂದ ವಿಭಜಿತಗೊಂಡ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕದ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೭ (೧೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಕಾಲೇಜುಗಳಿಂದ ಪದವಿ ಪೂರ್ವ ಕಾಲೇಜುಗಳನ್ನು ಯಾವ ದಿನಾಂಕದಂದು ವಿಭಜನೆಗೊಳಿಸಲಾಯಿತು ; ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಅಂದಿನಿಂದ ಕೆಲಸ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; (ಧಾರವಾಡ, ಹಾವೇರಿ, ಗದಗ, ಕಾರವಾರ ಈ ಜಿಲ್ಲೆಯ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೧೦–೧೨ ವರ್ಷಗಳಿಂದ ಮೇಲ್ಕಾಣಿಸಿದ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲಸ ಮಾಡುತ್ತಾ ಬಂದಿರುವ ಉಪನ್ಯಾಸಕರುಗಳನ್ನು ಅನುದಾನಕ್ಕೆ ಒಳಪಡಿಸದಿರಲು ಕಾರಣಗಳೇನು ;

(ಇ) ಇಂತಹ ವಿಭಜಿತ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಾ ಬಂದಿರುವ ಶಿಕ್ಷಕರುಗಳಲ್ಲಿ ಮುಂದೆ ನಡೆಯಲಿರುವ ಹೊಸ ನೇಮಕಾತಿಗೆ ಮುಂಚೆ ಇವರನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ;

(ಈ) ಅಲ್ಲದೆ ೨೦೦೨ ರಿಂದ ಧಾರವಾಡ, ಕಾರವಾರ, ಹಾವೇರಿ, ಗದಗ ಜಿಲ್ಲೆಯ ಎಷ್ಟು ಕಾಲೇಜುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಉಳಿದಿರುತ್ತವೆ ; ಸದರಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

## ಕೇಂದ್ರಿಯ ಪಠ್ಯ ಕ್ರಮದ ಶಾಲೆಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಕಲಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೮ (೧೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೇಂದ್ರಿಯ ಪಠ್ಯ ಕ್ರಮವನ್ನು ಅನುಸರಿಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳನ್ನು ಶಿಕ್ಷಣ ಹಕ್ಕುಕಾಯ್ದೆಯಡಿ ರಾಜ್ಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಂಡು ಆದೇಶ ಹೊರಡಿಸುವಂತೆ ನ್ಯಾಯಾಲಯದ ಆದೇಶವಾಗಿರುವುದು ನಿಜವೆ ;

(ಇ) ಹಾಗಿದ್ದಲ್ಲಿ ಈ ಶಾಲೆಗಳನ್ನು ಶಿಕ್ಷಣ ಹಕ್ಕು ಕಾಯ್ದೆಯಡಿ ರಾಜ್ಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡಿಸಿ ಸರ್ಕಾರ ಆದೇಶ ಹೊರಡಿಸಿದೆಯೇ ;

(ಈ) ಹಾಗಿದ್ದಲ್ಲಿ ಈ ಶಾಲೆಗಳನ್ನು ಕನ್ನಡವನ್ನು ಒಂದು ಭಾಷೆಯನ್ನಾಗಿ ಕಡ್ಡಾಯವಾಗಿ ಬೋಧಿಸಲು ಸರ್ಕಾರ ಆದೇಶ ಹೊರಡಿಸಲಿದೆಯೇ;

(ಉ) ಹಾಗಿದ್ದಲ್ಲಿ, ಯಾವಾಗ ಈ ಆದೇಶ ಹೊರಡಿಸಲಾಗುವುದು?

## ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೯ (೫೩೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಪ್ರಸಕ್ತ ಎಷ್ಟು ಖಾಯಂ ಸಿಬ್ಬಂದಿಯವರು ಹಾಗೂ ತಾತ್ಕಾಲಿಕ ಸಿಬ್ಬಂದಿಯವರು ಕಾರ್ಯನಿರ್ವಹಿಸುತ್ತಿದ್ದಾರೆ ; (ವೃಂದವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಈ ಸಿಬ್ಬಂದಿಯನ್ನು ನೇಮಕಾತಿ ಮಾಡುವಾಗ ಸರ್ಕಾರ ನಿಯಮಗಳಂತೆ ನೇಮಕಾತಿ ಮಾಡಲಾಗಿದೆಯೇ ; ಯಾವ ಮಾನದಂಡ ಆಧಾರದ ಮೇಲೆ ಈ ನೇಮಕಾತಿಗಳನ್ನು ಮಾಡಲಾಗಿದೆ ;

(ಇ) ಒಂದೇ ಕೋಮಿಗೆ ಸೇರಿದ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಂಡಿದ್ದಾರೆಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ?

## ಗ್ರಾಮ ಪಂಚಾಯಿತಿಗಳಿಗೆ ಭೂ ಸ್ವಾಧೀನ ಪಡಿಸಿಕೊಳ್ಳುವ ಅಧಿಕಾರ ನೀಡುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೦ (೫೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಭೂ ಸ್ವಾದೀನ ಪಡಿಸಿಕೊಳ್ಳುವ ಅಧಿಕಾರವನ್ನು ನೀಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ನಿಯಮವನ್ನು ಯಾವಾಗಿನಿಂದ ಜಾರಿಗೆ ತರಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯಿತಿ ಸದಸ್ಯರುಗಳಿಗೆ ತಮ್ಮ ವಾರ್ಡ್‌ಗಳಲ್ಲಿ ಕಾಮಗಾರಿಗಳ ಅನುಷ್ಠಾನಕ್ಕಾಗಿ ಇತರೆ ಜನ ಪ್ರತಿನಿಧಿಗಳಿಗೆ ಇರುವಂತೆ ಕನಿಷ್ಠ ೧.೦೦ ಲಕ್ಷ ರೂಪಾಯಿ ಅನುದಾನವನ್ನು ಮಂಜೂರು ಮಾಡುವ ಅಧಿಕಾರ ನೀಡಲು ಸರ್ಕಾರವು ಉದ್ದೇಶಿಸಿದೆಯೇ; ಉದ್ದೇಶಿದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಯಾವ ಕ್ರಮವನ್ನು ಜರುಗಿಸಲು ಮುಂದಾಗಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ವಕ್ಫ್ ಆಸ್ತಿ ಪರಭಾರೆ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೧ (೫೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಒಟ್ಟು ಎಷ್ಟು ವಕ್ಫ್ ಆಸ್ತಿಗಳು ಇವೆ; (ವಿವರವಾದ ಮಾಹಿತಿ ನೀಡುವುದು)

(ಆ) ಬೇರೆ ಬೇರೆ ಸರ್ಕಾರಿ ಆಸ್ತಿಗಳನ್ನು ಹಿಂದಿನ ಜಿಲ್ಲಾಧಿಕಾರಿಗಳು ವಕ್ಫ್‌ಗೆ ಪರಭಾರೆ ನೀಡಿದ್ದಾರೆಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಸರ್ಕಾರಿ ಆಸ್ತಿಗಳನ್ನು ವಕ್ಫ್‌ಗೆ ನೀಡುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ ಯಾವ ನಿಯಮ ಹಾಗೂ ಅಂಶಗಳಡಿ ನೀಡಲಾಗಿದೆ; ಇದಕ್ಕೆ ಅನುಸರಿಸಿದ ಮಾನದಂಡಗಳೇನು ;

(ಇ) ಇವುಗಳನ್ನು ಮರಳಿ ಪಡೆಯುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಮರಳಿ ಪಡೆಯಲು ಸರ್ಕಾರ ಉದ್ದೇಶಿಸಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಗ್ರಾಮ ಸಭೆ ನಡೆಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೨ (೫೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಸಭೆಗಳನ್ನು ಸರ್ಕಾರದ ನಿರ್ದೇಶನಗಳಂತೆ ನಿಯಮಾನುಸಾರ ನಡೆಸಲಾಗುತ್ತಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಪ್ರತಿ ಗ್ರಾಮ ಸಭೆಗಳಲ್ಲಿ ಆರೋಗ್ಯ, ಆಹಾರ, ಕಂದಾಯ ವಿದ್ಯುತ್, ತೋಟಗಾರಿಕೆ ಇತರೆ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಯೋಜನೆಗಳನ್ನು ರೂಪಿಸಿ, ಸಂಬಂಧಿಸಿದ ಅಧಿಕಾರಿಗಳು ಗ್ರಾಮ

ಸಭೆಗಳನ್ನು ಭಾಗವಹಿಸಿದ ಅಲ್ಲಿನ ಸಮಸ್ಯೆಗಳನ್ನು ಬಗೆ ಹರಿಸಲು ಕ್ರಿಯಾ ಯೋಜನೆ ಹಾಕಿಕೊಳ್ಳಲಾಗಿದೆಯೇ ; ಹಾಕಿಕೊಂಡಿದ್ದಲ್ಲಿ, ಇದನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ವಿಶೇಷ ವರ್ಗಗಳ ವಸತಿ ಯೋಜನೆ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೪೩ (೫೫೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಸತಿ ಯೋಜನೆಯಲ್ಲಿ ವಿಶೇಷ ವರ್ಗಗಳಾದ ಅಲೆಮಾರಿ ಜನಾಂಗ, ಏಡ್ಸ್ ಪೀಡಿತರು, ದೇವದಾಸಿಯರು ಇತ್ಯಾದಿ ಫಲಾನುಭವಿಗಳ ಸಂಖ್ಯೆಯನ್ನು ವಸತಿಗಾಗಿ ಸರ್ವೆ ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರತಿ ಜಿಲ್ಲೆಯಲ್ಲಿ ಯಾವ ಯಾವ ವರ್ಗದ ಜನರಿಗೆ ಸೂರು ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಇ) ವಿಶೇಷ ವರ್ಗದ ಜನರಿಗಾಗಿ ಸ್ಥಳ ಲಭ್ಯತೆಯನ್ನು ಸಂಬಂಧಿಸಿದ ಅಧಿಕಾರಿಗಳು ಆದ್ಯತೆ ಮೇಲೆ ಗುರುತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಯಚೂರು–ಯಾದಗಿರಿ ಜಿಲ್ಲೆಗಳಲ್ಲಿ ವಿಶ್ವ ವಿದ್ಯಾಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೪ (೭೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕವಿತಾಳದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಪದವಿ ಪೂರ್ವ ಕಾಲೇಜು) ಪ್ರಾರಂಭಿಸಲು ಹಾಗೂ ಮಾನ್ವಿ ಪಟ್ಟಣದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು–ಯಾದಗಿರಿ ಜಿಲ್ಲೆಗಳಿಗೆ ವಿಶ್ವವಿದ್ಯಾಲಯ (University) ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ನಗರದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಟ್ಟಡದ ಕಾಮಗಾರಿ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇಂಜಿನೀಯರಿಂಗ್ ಕಾಲೇಜಿನ ಕಟ್ಟಡ ಪೂರ್ತಿ ಪ್ರಮಾಣದಲ್ಲಿ ನಿರ್ಮಾಣ ಮಾಡಲು (ಪೂರೈಸಲು) ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಾನ್ವಿ ತಾಲ್ಲೂಕಿನ ಪೋತ್ನಾಳ ಗ್ರಾಮದ ಹತ್ತಿರ ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣದ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೫ (೭೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಕುಡಿಯುವ ನೀರಿಗಾಗಿ ಖರ್ಚು ಮಾಡಿರುವ ಮೊತ್ತ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಗ್ರಾಮೀಣ ನೀರು ಸರಬರಾಜು ಯೋಜನೆ ಅಡಿಯಲ್ಲಿ ಬಾಕಿ ಉಳಿದಿರುವ ಯೋಜನೆಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ತಾಲ್ಲೂಕಿನ ಪೋತ್ನಾಳ ಗ್ರಾಮದ ಹತ್ತಿರ ಕುಡಿಯುವ ನೀರಿಗಾಗಿ ಗ್ರಾಮೀಣ ಕುಡಿಯುವ ನೀರು ಸರಬರಾಜು (RWS)ಯೋಜನೆ ಅಡಿಯಲ್ಲಿ ಕೆರೆ ನಿರ್ಮಾಣ ಮಾಡುವ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಹಟ್ಟಿ–ಚಿನ್ನದ ಗಣಿ ಕಂಪನಿಯಲ್ಲಿ ಕಾರ್ಮಿಕರ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೬ (೨೦೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಟ್ಟಿ–ಚಿನ್ನದ ಗಣಿ ಕಂಪನಿ ೨೦೧೬–೧೭ರಲ್ಲಿ ಉತ್ಪತ್ತಿ ಮಾಡಿರುವ ಬಂಗಾರ ಎಷ್ಟು; ಅದರ ಬೆಲೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಹಟ್ಟಿ–ಚಿನ್ನದ ಗಣಿ ಕಂಪನಿ ವ್ಯಾಪ್ತಿಯಲ್ಲಿ ಬರುವ ಬುದ್ದಿನಿ, ಹಟ್ಟಿ, ಗಣಿಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಾನ್ವಿ ಪಟ್ಟಣದಲ್ಲಿ ಬಸ್ ಡಿಪ್ಪೋ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೭ (೨೦೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ಬಸ್ ಘಟಕ (Bus Depot) ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ (Bus Depot) ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ತಾಲ್ಲೂಕಿನ ಸಿರವಾರ (Sirwar) ಪಟ್ಟಣದ ಬಸ್ ನಿಲ್ದಾಣ ಹಾಳಾಗಿ ಸಾರ್ವಜನಿಕರ ಸಂಚಾರಕ್ಕೆ ಹಾಗೂ ಬಸ್‌ಗಳ ಸಂಚಾರಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೮ (೭೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು, ಮಾನ್ವಿ ತಾಲ್ಲೂಕುಗಳಲ್ಲಿ ಹೊಸ ಪದವಿ–ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ಕೊಠಡಿಗಳ ನಿರ್ಮಾಣಕ್ಕೆ ಕೊಟ್ಟಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಶಿಕ್ಷಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಗುಣಮಟ್ಟದ ಶಿಕ್ಷಣವನ್ನು ನೀಡಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು; ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಗ್ರಾಮ ವಿಕಾಸ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೪೯ (೯೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಇಲಾಖೆಯು ಗ್ರಾಮ ವಿಕಾಸ ಯೋಜನೆಯನ್ನು ಜಾರಿಗೆ ತಂದಿದ್ದು ಯಾವಾಗ ; ಇದರ ರೂಪುರೇಷೆಗಳೇನು; ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಯೋಜನೆಯಲ್ಲಿ ೫ ಗ್ರಾಮಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ಮಾನ್ಯ ವಿಧಾನ ಸಭಾ ಸದಸ್ಯರಿಗೆ ಮಾತ್ರ ನೀಡಲಾಗಿದ್ದು, ಮಾನ್ಯ ವಿಧಾನ ಪರಿಷತ್ ಸದಸ್ಯರಿಗೆ ಯಾವುದೇ ಅಧಿಕಾರವನ್ನು ನೀಡದಿರುವುದು ನಿಜವೇ ;

(ಇ) ಸರ್ಕಾರವೇ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರ ನಡುವೆ ತಾರತಮ್ಯ ಮಾಡುತ್ತಿರುವುದು ಸರಿಯೇ ;

(ಈ) ಹಾಗಾದರೆ ವಿಧಾನ ಪರಿಷತ್ ಸದಸ್ಯರು ದ್ವಿತೀಯ ದರ್ಜೆ ಶಾಸಕರೇ ;

(ಉ) ಈ ತಾರತಮ್ಯವನ್ನು ಸರ್ಕಾರವು ಯಾವ ಕಾಲಮಿತಿಯೊಳಗೆ ಸರಿಪಡಿಸುವುದು ?

## ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ನೀಡುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೫೦ (೯೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣವನ್ನು ನೀಡುವ ಐ.ಸಿ.ಟಿ. ಫೇಸ್–೧ ಮತ್ತು ಫೇಸ್–೨ ಸಂಪೂರ್ಣ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಯೋಜನೆಯು ಸ್ಥಗಿತಗೊಳ್ಳಲು ಕಾರಣಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ಯೋಜನೆ ಸ್ಥಗಿತದಿಂದ ಲಕ್ಷಾಂತರ ರೂಗಳ ಗಣಕ ಯಂತ್ರಗಳು ಹಾಳಾಗುತ್ತಿರುವುದು ನಿಜವೇ ;

(ಈ) ಸ್ಥಗಿತಗೊಂಡಿರುವ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭ ಮಾಡಲಾಗುವುದು ;

(ಉ) ಈ ಯೋಜನೆಗಾಗಿ ಸರ್ಕಾರ ೨೦೧೫–೧೬ ಮತ್ತು ೨೦೧೬–೧೭ ನೇ ಸಾಲಿಗಾಗಿ ಎಷ್ಟು ಹಣ ಮೀಸಲಿಟ್ಟಿದೆ ?

## ನಿರ್ಮಿತಿ ಕೇಂದ್ರಗಳ ಧ್ಯೇಯೋದ್ದೇಶಗಳ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೫೧ (೯೯೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲಾ ನಿರ್ಮಿತಿ ಕೇಂದ್ರಗಳಿವೆ; ಇವುಗಳನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಇವುಗಳ ಧ್ಯೇಯೋದ್ದೇಶಗಳೇನು ; (ವಿವರ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು; (ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಸಂಬಳದೊಂದಿಗೆ ವಿವರವಾದ ಮಾಹಿತಿ ಕೊಡುವುದು)

(ಇ) ಇಲ್ಲಿನ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ; (ಹುದ್ದೆವಾರು ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಿಂದ ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರವು ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಪೂರ್ಣಗೊಳಿಸಿದೆ; (ಇಲಾಖೆ, ಕಾಮಗಾರಿ ವಿವರ, ಹಾಗೂ ಖರ್ಚು ಮಾಡಿದ ಮೊತ್ತದೊಂದಿಗೆ ಮಾಹಿತಿ ನೀಡುವುದು)

(ಉ) ಹಾಲಿ ಬಾಕಿ ಇರುವ ಕಾಮಗಾರಿಗಳು ಎಷ್ಟು; ಇವುಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; ಇಲ್ಲಿಯವರೆಗೆ ಬಾಕಿ ಉಳಿಸಿಕೊಳ್ಳಲು ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)

## NRDWP ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೫೨ (೭೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೧-೧೨ನೇ ಸಾಲಿನ NRDWP ಯೋಜನೆಯ Support Activity ಕಾರ್ಯಕ್ರಮದಡಿ ಎಷ್ಟು ಜನ ಗ್ರಾಮೀಣ ಪದವೀಧರರನ್ನು B.R.C/C.R.C. ಹುದ್ದೆಗೆ ಇಲಾಖಾ ಪರೀಕ್ಷೆ ನಡೆಸಿ ಆಯ್ಕೆ ಮಾಡಿಕೊಳ್ಳಲಾಯಿತು ; (ಜಿಲ್ಲಾವಾರು, ಮಾಹಿತಿ ನೀಡುವುದು)

(ಆ) ಆಯ್ಕೆಗೊಂಡ ಅಭ್ಯರ್ಥಿಗಳ ತಾಲ್ಲೂಕುವಾರು ಆಯ್ಕೆ ಪಟ್ಟಿಯ ಪ್ರತಿಯೊಂದಿಗೆ ಹಾಗೂ ವಿಳಾಸದೊಂದಿಗೆ ಸಂಪೂರ್ಣವಾದ ಜಿಲ್ಲಾವಾರು, ತಾಲ್ಲೂಕುವಾರು, ಹೋಬಳಿವಾರು ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿ ನೀರಿನ ಗುಣಮಟ್ಟ ಪರೀಕ್ಷಿಸುವ ಎಷ್ಟು ಹಾಲಿ ಸರ್ಕಾರಿ ಲ್ಯಾಬೋರೇಟರಿಗಳಿವೆ ; ಹೊಸದಾಗಿ ಎಷ್ಟು ಲ್ಯಾಬೋರೇಟರಿಗಳನ್ನು ಪ್ರಾರಂಭಿಸಲು ಸರ್ಕಾರ ಆದೇಶ ನೀಡಿದೆ ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ಬಾಗಲಕೋಟೆ ಜಿಲ್ಲೆಯಲ್ಲಿ ಕೈಗಾರಿಕೆ ಜಮೀನು ಸ್ವಾಧೀನದ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೫೩ (೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆ ಮಾಡುವ ಉದ್ದೇಶದಿಂದ ಸರ್ಕಾರವು ಎಷ್ಟು ಜಮೀನನ್ನು ಇಲ್ಲಿಯವರೆಗೆ ಸ್ವಾಧೀನಪಡಿಸಿಕೊಂಡಿದೆ ; (ವರ್ಷವಾರು ವಿವರವಾದ ಮಾಹಿತಿ ನೀಡುವುದು)

(ಆ) ಸ್ವಾಧೀನಪಡಿಸಿಕೊಂಡಿರುವ ಜಮೀನಿನಲ್ಲಿ ಇಲ್ಲಿಯವರೆಗೆ ಎಷ್ಟು ಕೈಗಾರಿಕಾ ನಿವೇಶನ/ವಸಹಾತು ಇತರೆಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಿದೆ; (ಬಡಾವಣೆವಾರು, ಹಂಚಿಕೆದಾರರವಾರು) ವಿವರವಾದ ಮಾಹಿತಿ ನೀಡುವುದು)

(ಇ) ಬಾಗಲಕೋಟೆ ಜಿಲ್ಲೆಯಲ್ಲಿ ಹಾಲಿ ಖಾಲಿ ಇರುವ ಕೈಗಾರಿಕಾ ನಿವೇಶನ/ವಸಾಹತು ಎಷ್ಟು; ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗಾಗಿ ಜಮೀನು ಕೋರಿ ಬಂದ ಅರ್ಜಿಗಳಲ್ಲಿ ಬಾಕಿ ಇರುವ ಅರ್ಜಿಗಳು ಎಷ್ಟು? (ವಿವರವಾಗಿ ಮಾಹಿತಿ ಕೊಡುವುದು)

**ವಕ್ಫ್ ಇಲಾಖೆಗೆ ಸಂಬಂಧಿಸಿದ ಆಸ್ತಿಗಳ ಕುರಿತು.**

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೪ (೭೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ವಕ್ಫ್ ಇಲಾಖೆಗೆ ಸಂಬಂಧಪಟ್ಟಂತೆ ಇರುವ ಆಸ್ತಿಗಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯ ಯಾವ ಯಾವ ಸ್ಥಳದಲ್ಲಿವೆ; (ಇದರ ವಿಸೀರ್ಣ, ಮೌಲ್ಯಗಳ ಚಂಕುಬಂದಿಗಳ ಸಮೇತ ವಿವರ ನೀಡುವುದು)

(ಇ) ದರ್ಗಾ/ಸ್ಮಶಾನ ಮತ್ತು ಮಸೀದಿಗಳ ಅಭಿವೃದ್ಧಿಗೆ ೨೦೧೪–೧೫ನೇ ಸಾಲಿನಲ್ಲಿ ಒದಗಿಸಲಾಗಿರುವ ಹಣ ಎಷ್ಟು; ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು)

## ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಬಸ್ ಸೌಕರ್ಯಗಳಿಲ್ಲದ ಗ್ರಾಮಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೫ (೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಎಲ್ಲಾ ಗ್ರಾಮಗಳಿಗೂ ಬಸ್ ಸೌಕರ್ಯ ಕಲ್ಪಿಸಲಾಗಿದೆಯೇ ;

(ಆ) ಬಸ್ ಸೌಕರ್ಯಗಳಿಂದ ವಂಚಿತವಾಗಿರುವ ಗ್ರಾಮಗಳೆಷ್ಟು; ಮತ್ತು ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಇ) ವಿದ್ಯಾರ್ಥಿಗಳ ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಆ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ಬಸ್ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದ ಗ್ರಾಮೀಣಾ ರಸ್ತೆ ನಿರ್ವಹಣೆ ಜವಾಬ್ದಾರಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೬ (೯೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶದಲ್ಲಿರುವ ರಸ್ತೆಗಳ ನಿರ್ವಹಣಾ ಜವಾಬ್ದಾರಿಯನ್ನು ಹಾಲಿ ಇರುವ ಜಿಲ್ಲಾ ಪಂಚಾಯತಿಯಿಂದ ವಾಪಸ್ ಪಡೆದು, ಕೇಂದ್ರ ಗ್ರಾಮೀಣಾ ರಸ್ತೆ ಅಭಿವೃದ್ಧಿ ಸಂಸ್ಥೆಗೆ ನೀಡಲಾಗಿದೆಯೇ ಅಥವಾ ನೀಡುವ ಉದ್ದೇಶ ಇದೆಯೇ ;

(ಆ) ಗ್ರಾಮಾಂತರ ರಸ್ತೆಗಳ ನಿರ್ವಹಣಾ ಜವಾಬ್ದಾರಿಯನ್ನು ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯನ್ವಯ ಸ್ಥಳೀಯ ಸಂಸ್ಥೆಗಳಿಗೆ ನೀಡಿದ್ದು, ಇದನ್ನು ಕೇಂದ್ರ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ನೀಡಿದರೆ ಸ್ಥಳಿಯ ಸಂಸ್ಥೆಗಳ ಅಧಿಕಾರ ಮೊಟಕುಗೊಳಿಸಿದಂತಾಗುವುದಿಲ್ಲವೇ ;

(ಇ) ಜಿಲ್ಲಾ ಪಂಚಾಯತಿಗಳಿಗೆ ಹೆಚ್ಚಿನ ಅನುದಾನ ನೀಡಿ ಗ್ರಾಮೀಣ ರಸ್ತೆ ನಿರ್ವಹಣಾ ಜವಾಬ್ದಾರಿಯನ್ನು ಅವರಿಗೆ ಮುಂದುವರೆಸಿ, ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲಾಗುವುದೇ; ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಗ್ರಾಮ ಪಂಚಾಯತಿ ಸದಸ್ಯರಿಗೆ ಗೌರವಧನ ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೭ (೫೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಹಾಸನ ಜಿಲ್ಲೆಯ ಗ್ರಾಮ ಪಂಚಾಯತಿಯ ಸದಸ್ಯರಿಗೆ ಗೌರವಧನ ನೀಡಲು ಬಿಡುಗಡೆಯಾಗಿರುವ ಹಣವೆಷ್ಟು ;

(ಆ) ಹಾಸನ ಜಿಲ್ಲೆ ಗ್ರಾಮ ಪಂಚಾಯತಿಯ ಸದಸ್ಯರಿಗೆ ಕ್ಲುಪ್ತ ಕಾಲದಲ್ಲಿ ಗೌರವಧನ ಸಂದಾಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗೌರವ ಧನ ಸಂದಾಯಕ್ಕೆ ಬಾಕಿ ಇರುವ ವಿವರ ನೀಡುವುದು ;

(ಇ) ಗ್ರಾಮ ಪಂಚಾಯತಿಯ ಸದಸ್ಯರಿಗೆ ಗೌರವಧನ ಹೆಚ್ಚು ಮಾಡಲು ಸರ್ಕಾರದ ಮಟ್ಟದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆಯೇ ?

## ಹೈದ್ರಾಬಾದ್‌–ಕರ್ನಾಟಕ ಪ್ರದೇಶಗಳಲ್ಲಿ ಸರ್ಕಾರದ ಸಾರಿಗೆ ಸುವ್ಯವಸ್ಥೆ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೮ (೫೨೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್‌–ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ಕೆ.ಎಸ್.ಆರ್.ಟಿ.ಸಿ ಯವರು ಸಮರ್ಪಕ ಸಾರಿಗೆ ವ್ಯವಸ್ಥೆಗಾಗಿ ಕೈಗೊಂಡ ಕ್ರಮಗಳು ಯಾವುವು ;

(ಆ) ಹೈದ್ರಾಬಾದ್‌–ಕರ್ನಾಟಕ ವಿಭಾಗದಲ್ಲಿರುವ ಕೆ.ಎಸ್.ಆರ್.ಟಿ.ಸಿ ಬಸ್ ಡಿಪೋಗಳ ಸಂಖ್ಯೆ ಮತ್ತು ಅವುಗಳ ಕಾರ್ಯಕ್ಷಮತೆ ಮತ್ತು ಹೊಂದಿರುವ ಸಮರ್ಪಕ ಮೂಲಸೌಕರ್ಯಗಳ ಕುರಿತ ವಿವರಗಳು ಯಾವುವು ;

(ಇ) ಜಿಲ್ಲಾ ಕೇಂದ್ರಗಳು, ತಾಲ್ಲೂಕು ಕೇಂದ್ರಗಳು ಮತ್ತು ಗ್ರಾಮಾಂತರ ಪ್ರದೇಶಗಳ ಸಂಚಾರ ವ್ಯವಸ್ಥೆಯ ಅಗತ್ಯತೆಯನ್ನು ಅನುಸರಿಸಿ ಬಸ್‌ಗಳನ್ನು ಒದಗಿಸಿಕೊಡುವ ಮತ್ತು ಡಿಪೋ ಕಾರ್ಯಾಚರಣೆಗೆ ಬೇಕಾಗುವ ಸಾಮಗ್ರಿಗಳನ್ನು ಮತ್ತು ಅರ್ಹ ಸಿಬ್ಬಂದಿ ವರ್ಗದವರನ್ನು ನೇಮಿಸುವ ಕುರಿತಾದ ಸರ್ಕಾರದ ಕ್ರಮಗಳೇನು ?

## ಬಳ್ಳಾರಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆಗಳ ಕುರಿತು.

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೯ (೧೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲಾ ವ್ಯಾಪ್ತಿಯಲ್ಲಿರುವ ಗ್ರಾಮೀಣ ರಸ್ತೆಗಳ ಸುಧಾರಣೆ, ದುರಸ್ತಿ, ನಿರ್ವಹಣೆಗೆ ೨೦೧೩–೧೪, ೨೦೧೪–೧೫, ಮತ್ತು ೨೦೧೫–೧೬ರಲ್ಲಿ ಹಂಚಿಕೆಯಾದ ಮತ್ತು ವೆಚ್ಚವಾದ ಅನುದಾನವೆಷ್ಟು ;

(ಆ) ಗ್ರಾಮೀಣ ರಸ್ತೆಗಳ ಸುಧಾರಣೆ, ದುರಸ್ತಿ, ನಿರ್ವಹಣೆಗೆ ಮೇಲ್ಕಂಡ ವರ್ಷಗಳಲ್ಲಿ ೨೦೧೬ರ ಜನವರಿ ಅಂತ್ಯದವರೆಗೆ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಹಂಚಿಕೆಯಾದ ಮತ್ತು ವೆಚ್ಚವಾದ ಅನುದಾನ ಎಷ್ಟು; (ತಾಲ್ಲೂಕುವಾರು, ರಸ್ತೆವಾರು ವಿವರ ನೀಡುವುದು)

(ಇ) ಜಿಲ್ಲೆಯ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಮತ್ತು ನೂತನ ಗ್ರಾಮೀಣ ರಸ್ತೆಗಳ ನಿರ್ಮಾಣಕ್ಕಾಗಿ ಇಲಾಖೆಯಿಂದ ರೂಪಿಸಿರುವ ಕ್ರಿಯಾ ಯೋಜನೆಗಳು ಯಾವುವು ?

## ಮೇಲ್ವಿಚಾರಕರ ಮುಂಬಡ್ತಿಯಲ್ಲಿ ರೋಸ್ಟರ್ ಬಿಂದುಗಳ ಅದಲು–ಬದಲು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೦ (೫೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದ ಮುದ್ರಣ, ಲೇಖನ ಸಾಮಗ್ರಿ ಹಾಗೂ ಪ್ರಕಟಣೆಗಳ ಇಲಾಖೆಯಲ್ಲಿ ಮೇಲ್ವಿಚಾರಕರ (ತಾಂತ್ರಿಕ) ಹುದ್ದೆಗಳಿಗೆ ಮುಂಬಡ್ತಿ ನೀಡುವಾಗ ಫೀಢರ್ ಕೇಡರ್ ಬದಲಾವಣೆ ಮಾಡಿಕೊಂಡು ಸರ್ಕಾರದಲ್ಲಿ ಆದೇಶ ಆಗದೆ ಉಪಬಂಧ ಕಲ್ಪಿಸದೆ ಮುಂಬಡ್ತಿ ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಇಲಾಖೆಯಲ್ಲಿನ ನೌಕರೊಬ್ಬರಿಗೆ ಮೇಲ್ವಿಚಾರಕರ ಹುದ್ದೆಗೆ ಮುಂಬಡ್ತಿ ನೀಡಿ ಆದೇಶ ಹೊರಡಿಸಿದ್ದು ರೋಸ್ಟರ್ ರಿಜಿಸ್ಟರ್‌ನಲ್ಲಿ ಎಂಟ್ರಿ ಹಾಕದೆ ರೋಸ್ಟರ್ ಬಿಂದುಗಳನ್ನು ಅದಲು ಬದಲು ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಫೀಡರ್ ಕೇಡರ್ ಅಲ್ಲದಿದ್ದರೂ ಮುಂಬಡ್ತಿಗೆ ಅನರ್ಹರಿದ್ದರೂ, ೨೦೦೬ರಲ್ಲಿ ಮುಂಬಡ್ತಿ ನೀಡಿ ಪುನಃ ೨೦೧೩ರಲ್ಲಿ ವಾಪಸ್ಸು ಪಡೆದುಕೊಂಡು ೬ ವರ್ಷಗಳ ಕಾಲ ಈ ರೋಸ್ಟರ್ ಬಿಂದುವನ್ನು ಬ್ಲಾಕ್ ಮಾಡಿ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) Cadre Strength ಗೆ ನಿಗಧಿಪಡಿಸಿರುವ ಮೀಸಲಾತಿ ಪ್ರಮಾಣಕ್ಕಿಂತ ಕೆಲವು ವರ್ಗಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಮುಂಬಡ್ತಿ ನೀಡಿ ಅನ್ಯಾಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದೇ ಕೇಡರ್‌ನಲ್ಲಿ ಸೇವಾ ಹಿರಿತನದಲ್ಲಿ ಹಿರಿಯರಾದವರನ್ನು ಕಡೆಗಣಿಸಿ ಕಿರಿಯರಾದವರಿಗೆ ಮುಂಬಡ್ತಿ ನೀಡಿ ರೋಸ್ಟರ್ ಬಿಂದುಗಳನ್ನು ವ್ಯತ್ಯಾಸ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೧ (೫೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಪ್ರಾಂಶುಪಾಲರ ಹುದ್ದೆಗಳು ಖಾಲಿ ಇವೆ;

(ಆ) ಎಷ್ಟು ಅವಧಿಯಿಂದ ಈ ಹುದ್ದೆಗಳು ಖಾಲಿ ಇವೆ ;

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ೨೦೦೮ ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ನೀಡುವ ಬಗ್ಗೆ.

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೨ (೫೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ನೀಡುವ ಬಗ್ಗೆ ಸರ್ಕಾರ ಆಲೋಚನೆ ಮಾಡಿದೆಯೇ ;

(ಆ) ಆಲೋಚಿಸಿದ್ದಲ್ಲಿ, ವಿಶೇಷ ಭತ್ಯೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ೨೦೧೩ನೇ ಸಾಲಿನಲ್ಲಿ ಆಯ್ಕೆಯಾದ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಪ್ರೊಬೆಷನರಿ ಅವಧಿ ಘೋಷಣೆ ಬಗ್ಗೆ.

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೩ (೫೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ನೇ ಸಾಲಿನಲ್ಲಿ ರಾಜ್ಯ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಆಯ್ಕೆಯಾದ ಉಪನ್ಯಾಸಕರ ಸಂಖ್ಯೆ ಎಷ್ಟು;

(ಆ) ಈ ಸಾಲಿನಲ್ಲಿ ಆಯ್ಕೆಯಾದ ಉಪನ್ಯಾಸಕರುಗಳಲ್ಲಿ B.Ed ಪದವಿ ಪೂರೈಸಿದ ಮತ್ತು B.Ed ಪದವಿಯನ್ನು ಪೂರೈಸದೆ ಇರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು;

(ಇ) B.Ed ಪದವಿ ಪೂರೈಸಿ ಪ್ರೊಬೆಷನರಿ ಅವಧಿಯನ್ನು ಮುಗಿಸಿರುವ ಉಪನ್ಯಾಸಕರುಗಳಿಗೆ ಪ್ರೊಬೆಷನರಿ ಅವಧಿಯನ್ನು ಘೋಷಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗಮನಕ್ಕೆ ಬಂದಿದ್ದಲ್ಲಿ, ಎಷ್ಟು ದಿನಗಳೊಳಗೆ ಪ್ರೊಬೆಷನರಿ ಅವಧಿಯನ್ನು ಘೋಷಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ; ಕೈಗೊಳ್ಳುವ ಕ್ರಮಗಳೇನು ;

(ಈ) ಸದರಿ ಸಾಲಿನಲ್ಲಿ ಆಯ್ಕೆಯಾಗಿ B.Ed ಪದವಿ ಪೂರೈಸದೆ ಇರುವ ಉಪನ್ಯಾಸಕರಿಗೆ ೨೦೦೯ರ ಮಾದರಿಯಂತೆ B.Ed ವ್ಯಾಸಂಗಕ್ಕೆ ಅನುಮತಿ ನೀಡುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ ;

(ಉ) ಆಲೋಚಿಸಿದ್ದಲ್ಲಿ, ಎಷ್ಟು ದಿನಗಳೊಳಗೆ ಸರ್ಕಾರ ಕ್ರಮ ವಹಿಸಲಾಗುವುದು ?

## ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೪ (೫೩೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಇವರಿಗೆ ನೀಡುತ್ತಿರುವ ವೇತನ ಎಷ್ಟು ;

(ಇ) ೨೦೦೯ಕ್ಕೆ ಮುನ್ನ M.Phil ಪದವಿ ಮಾಡಿದ ಅತಿಥಿ ಉಪನ್ಯಾಸಕರಿಗೆ ಎಷ್ಟು ವೇತನವನ್ನು ಪಾವತಿಸಲಾಗುತ್ತಿದೆ ;

(ಈ) ಈ ಅತಿಥಿ ಉಪನ್ಯಾಸಕರನ್ನು ಸೇವಾ ಹಿರಿತನದ ಮೇಲೆ ಖಾಯಂ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಪ್ರಾಥಮಿಕ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಸೃಷ್ಠಿಯಾಗಿರುವ ಹಾಗೂ ಖಾಲಿಯಾಗಿರುವ ದೈಹಿಕ ಶಿಕ್ಷಕರ ಹುದ್ದೆ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೪೬೫ (೫೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಸೃಷ್ಠಿಯಾಗಿರುವ ಹಾಗೂ ಖಾಲಿಯಾಗಿರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಅನೇಕ ವರ್ಷಗಳಿಂದ ತುಂಬದಿರಲು ಕಾರಣಗಳೇನು ;

(ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಓಲಾ, ಓಬರ್‌ನಂತಹ ಇಂಟರ್‌ನೆಟ್ ಆಧಾರಿತ ಬಾಡಿಗೆ ವಾಹನ ವ್ಯವಸ್ಥೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೬೬ (೫೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಓಲಾ, ಓಬರ್‌ನಂತಹ ಇಂಟರ್‌ನೆಟ್ ಆಧಾರಿತ ಬಾಡಿಗೆ ವಾಹನ ವ್ಯವಸ್ಥೆಯ ಕುರಿತಾಗಿ ಯಾವ ಕಾನೂನನ್ನು ರೂಪಿಸಲಾಗಿದೆ ;

(ಆ) ಈ ವ್ಯವಸ್ಥೆಯನ್ನು ಸರಿಯಾಗಿ ರೂಪಿಸಿ ಕನಿಷ್ಠ ದರವನ್ನು ನಿರ್ಣಯಿಸಿದಲ್ಲಿ ಮತ್ತು ಸ್ಥಳೀಯವಾಗಿ ಸೇವೆ ನೀಡುತ್ತಿರುವ ರಿಕ್ಷಾ ಹಾಗೂ ಖಾಸಗಿ ಟ್ಯಾಕ್ಸಿಗಳು ಸೇರಿದಂತೆ, ಇಂಟರ್‌ನೆಟ್ ಆಧಾರಿತ ಸೇವೆಯನ್ನು ಪರಿಣಾಮಕಾರಿಯಾಗಿ ಅಳವಡಿಸದಿದ್ದಲ್ಲಿ, ಬೆಂಗಳೂರು ಮಹಾನಗರದಂತಹ ವಾಹನ ದಟ್ಟಣೆಯಿರುವ ನಗರಗಳಲ್ಲಿ ನಗರದ ನಿವಾಸಿಗಳು ಖಾಸಗಿ ವಾಹನಗಳ ಬಳಕೆಯನ್ನು ಕಡಿಮೆ ಮಾಡಬಹುದೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುರಿತಾಗಿ ಸರ್ಕಾರದ ಯೋಜನೆ ಏನು ?

## R.T.E. ಕೋಟಾದಡಿಯಲ್ಲಿ ಪ್ರವೇಶಾತಿ ಪಡೆದ ಮಕ್ಕಳಿಗೆ ಶುಲ್ಕ ಸಂಗ್ರಹಿಸುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೬೭ (೫೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ ೨೦೦೯ರ ನಿಯಮಗಳಂತೆ ಉಚಿತ ಶಿಕ್ಷಣ ಸಮವಸ್ತ್ರ, ಪುಸ್ತಕ ಮತ್ತು ಯಾವುದೇ ರೀತಿಯ ಶುಲ್ಕಗಳನ್ನು ಸಂಗ್ರಹಿಸಬಾರದೆಂಬ ನಿಯಮವಿದ್ದರೂ ಖಾಸಗಿ ಶಿಕ್ಷಣ ಸಂಸ್ಥೆಗಳು R.T.E. ಕೋಟಾದಡಿಯಲ್ಲಿ ಪ್ರವೇಶಾತಿ ಪಡೆದ ಮಕ್ಕಳಿಗೆ ಪುಸ್ತಕ ಹಾಗೂ ಸಮವಸ್ತ್ರಗಳನ್ನು ಅವರೆ ತೆಗೆದುಕೊಂಡು ಬರಬೇಕೆಂದು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) R.T.E. ಕೋಟಾದಡಿಯಲ್ಲಿ ಪ್ರವೇಶಾತಿ ಪಡೆದ ಮಕ್ಕಳಿಗೆ ಪುಸ್ತಕ ಹಾಗೂ ಸಮವಸ್ತ್ರಗಳನ್ನು ಯಾರು ನೀಡುತ್ತಾರೆ ;

(ಇ) ಖಾಸಗಿ ಶಾಲೆಯಲ್ಲಿ ಮೇಲ್ಕಂಡ ಕೋಟಾದಡಿಯಲ್ಲಿ ಬಡಮಕ್ಕಳೇ ಪ್ರವೇಶಾತಿ ಪಡೆಯುವುದರಿಂದ, ಅವರಿಗೆ ಆಯಾ ಶಾಲೆಗಳ ಮಟ್ಟಕ್ಕೆ ತಕ್ಕಂತೆ ಪುಸ್ತಕ ಹಾಗೂ ಸಮವಸ್ತ್ರಗಳನ್ನು ಹೊಂದಿಸಿಕೊಳ್ಳುವುದು ಕಷ್ಟಸಾಧ್ಯವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮೈಸೂರಿನಿಂದ ಮಡಿಕೇರಿಗೆ ರೈಲು ಸಂಪರ್ಕ ಕಲ್ಪಿಸುವ ಯೋಜನೆಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೬೮ (೫೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಿಂದ ಮಡಿಕೇರಿಗೆ ರೈಲು ಸಂಪರ್ಕ ಕಲ್ಪಿಸುವ ಯೋಜನೆಯು ಯಾವ ಹಂತದಲ್ಲಿದೆ ;

(ಆ) ಸರ್ಕಾರದಿಂದ ದಿನಾಂಕ: ೨೪-೦೪-೨೦೧೫ರಂದು ಮಡಿಕೇರಿ ತಾಲ್ಲೂಕು, ಕರ್ಣಂಗೇರಿ ಗ್ರಾಮದ ಸರ್ವೆ ನಂ: ४೭೧/೧ಪಿ, ೧೬ರಲ್ಲಿ ಒಂದು ಎಕರೆ ಜಮೀನನ್ನು ದಕ್ಷಿಣ ನೈರುತ್ಯ ಇಲಾಖೆಗೆ ಮಂಜೂರು ಮಾಡಿರುವುದು ನಿಜವೇ ;

(ಇ) ಮಂಜೂರು ಆಗಿದ್ದಲ್ಲಿ, ಈ ಜಮೀನನ್ನು ಕೊಡಗು ಜಿಲ್ಲಾಧಿಕಾರಿಗಳು ರೈಲ್ವೆ ಇಲಾಖೆಗೆ ಹಸ್ತಾಂತರಿಸದೇ ಇರಲು ಕಾರಣಗಳೇನು ;

(ಈ) ಪ್ರಾಥಮಿಕ ಹಂತದಲ್ಲಿಯೇ ಇಷ್ಟೊಂದು ಕಠಿಣ ಧೋರಣೆ ತೋರಿದರೆ ಇನ್ನು ಯಾವ ಕಾಲಮಿತಿಯಲ್ಲಿ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು ?

## ರಾಜ್ಯದಲ್ಲಿ ಸಂಪೂರ್ಣವಾಗಿ ಮಕ್ಕಳ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ ಜಾರಿಗೆ ತರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

४೬೯ (೫४೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮಕ್ಕಳ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ ಸಂಪೂರ್ಣವಾಗಿ ಜಾರಿಯಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಈ ಮಕ್ಕಳನ್ನು ಶಾಲೆಗೆ ದಾಖಲಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಇ–ಸ್ವತ್ತು ತಂತ್ರಾಂಶದಿಂದ ಗೊಂದಲ ಮತ್ತು ನಿಯಮಾವಳಿ ಸರಳೀಕರಣಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೦ (೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್ ಮೂಲಕ ವಿತರಿಸುವ ನಮೂನೆ ೯,೧೧,೧೧ಬಿ, ಸಂಬಂಧ ಗೊಂದಲಗಳು ಮುಂದುವರೆದಿದ್ದು, ಸಾರ್ವಜನಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಬಂಧ ನಡೆದ ಸಭೆಗಳು ಎಷ್ಟು ; ಕೈಗೊಂಡ ಪ್ರಮುಖ ನಿರ್ಣಯಗಳೇನು ;

(ಆ) ಯಾವ ಯಾವ ಜಿಲ್ಲೆಗಳಿಗೆ ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡಲಾಗಿದೆ ; ವಿನಾಯಿತಿ ಮುಂದುವರೆದಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ;

(ಇ) ಕರಾವಳಿ ಜಿಲ್ಲೆಗಳಿಗೆ ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡುವ ಬದಲು, ನಮೂನೆ ೯ ಮತ್ತು ೧೧, ೧೧ಬಿ ವಿತರಿಸುವ ಸಂಬಂಧ ನಿಯಾಮಾವಳಿಗಳನ್ನು ಸರಳೀಕರಣಗೊಳಿಸುವುದರಿಂದ, ಸಮಸ್ಯೆ ಪರಿಹಾರ ಮಾಡಬಹುದೆನ್ನುವುದನ್ನು ಸರ್ಕಾರ ಗಮನಿಸಿಲ್ಲವೇ ;

(ಈ) ಕರಾವಳಿ ಜಿಲ್ಲೆಗಳಲ್ಲಿ ನಮೂನೆ ೯ ಮತ್ತು ೧೧ ನಿಯಾಮಾವಳಿ ಮತ್ತು ಸರಳೀಕರಣ ತುಂಡು ಭೂಮಿಯ ಭೌಗೋಳಿಕ ವ್ಯವಸ್ಥೆ ಹೊಂದಿರುವ ಈ ಪ್ರದೇಶದಲ್ಲಿ ೫೦ ಸೆಂಟ್ಸ್ ಮಿತಿಗೊಳಪಟ್ಟು, ವಿಭಜನೆಗೆ ಅವಕಾಶ ನೀಡುವ ಬಗ್ಗೆ ಸರ್ಕಾರದ ನಿಲುವೇನು ; ಈ ಎಲ್ಲಾ ಗೊಂದಲ ನಿವಾರಿಸಿ, ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಇಎಸ್.ಐ. ಪಿಎಫ್. ರಜಾ ಸೌಲಭ್ಯ ನೀಡದಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೧ (೫೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕರ ವಸೂಲಿಗಾರ ಗುಮಾಸ್ತ, ಪಂಪುಚಾಲಕ, ಕಂಪ್ಯೂಟರ್ ಆಪರೇಟರ್, ಅಟೆಂಡರ್ ಮತ್ತು ಜಾಡಮಾಲಿ ಮತ್ತು ಇತರೆ ನೌಕರರ ಸಂಖ್ಯೆ ಎಷ್ಟು ; ಖಾಯಂ ಮತ್ತು ಖಾಯಂಮಾತಿಗೆ ಬಾಕಿಯಿರುವವರ ಸಂಖ್ಯೆಯೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಹುದ್ದೆವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಪ್ರಸಕ್ತ ನೀಡುತ್ತಿರುವ ವೇತನವೆಷ್ಟು ; ಎಷ್ಟು ಸಿಬ್ಬಂದಿಗಳಿಗೆ ಇ.ಎಸ್‌ಐ. ಪಿಎಫ್, ಇಎಲ್ ರಜಾ ಸೌಲಭ್ಯ ಸೇರಿದಂತೆ ಮತ್ತು ಇತರೆ ಜೀವನ ಭದ್ರತೆ ಸೌಲಭ್ಯಗಳನ್ನು ಒದಗಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು. ಹುದ್ದೆವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನವು ಅತೀ ಕಡಿಮೆಯಾಗಿರುವುದು ಮತ್ತು ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಇಎಲ್ ರಜಾ ಸೌಲಭ್ಯ ಸೇರಿದಂತೆ ಇಎಸ್‌ಐ. ಪಿಎಫ್ ಮತ್ತು ಇತರೆ ಜೀವನ ಭದ್ರತೆ ಸೌಲಭ್ಯಗಳು ಇನ್ನೂ ಒದಗಿಸದೇ ಇರುವುದಕ್ಕೆ ತೊಡಕುಗಳೇನು ; (ವಿವರ ನೀಡುವುದು)

(ಈ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ವೇತನ ಹೆಚ್ಚಳವೂ ಸೇರಿದಂತೆ, ಸೇವಾ ಜೇಷ್ಠತೆಯ ಆಧಾರದ ಮೇಲೆ ವೇತನ ಶ್ರೇಣಿ ಇ.ಎಸ್.ಐ. ಪಿಎಫ್, ಎನ್.ಪಿ.ಎಸ್ ಮತ್ತು ಇತರ ಜೀವನ ಭದ್ರತೆ ಸೌಲಭ್ಯಗಳು ಶೀಘ್ರವಾಗಿ ನೀಡುವ ಬಗ್ಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಕರ್ನಾಟಕ ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಸ್ಥಾಪನೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೨ (೫೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಕರ್ನಾಟಕ ಪಂಚಾಯುತ್ ರಾಜ್ ವಿಶ್ವವಿದ್ಯಾಲಯು" ಸ್ಥಾಪನೆಯನ್ನು ಯಾವಾಗ ; ಎಲ್ಲಿ ಪ್ರಾರಂಭ ಮಾಡಲಾಗುವುದು ; ಎಂದು ಕಾರ್ಯಾರಂಭ ಮಾಡಲಾಗುವುದು ; ಉದ್ದೇಶ ಮತ್ತು ಅದರಲ್ಲಿ ಲಭ್ಯವಾಗುವ ಅವಕಾಶಗಳೇನು ;

(ಆ) "ಪಂಚಾಯುತ್ ರಾಜ್ ವಿಶ್ವ ವಿದ್ಯಾಲಯುದ" ಒಟ್ಟಾರೆ ಯೋಜನೆಗಳೇನು ; ಯೋಜನೆಗಾಗಿ ಕಾಯ್ದಿರಿಸಿದ ಅನುದಾನ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) "ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ" ಸಮಗ್ರ ಅನುಷ್ಠಾನಕ್ಕೆ ನಿಯೋಜಿಸಿರುವ ಅಧಿಕಾರಿಗಳು ಯಾರು ;

(ಈ) "ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ" ಮಾಹಿತಿಯು ಸಾರ್ವಜನಿಕರಿಗೆ ದೊರಕುವಂತೆ ಮಾಡಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ?

## ಮರಳುಗಾರಿಕೆ ರಾಜಧನ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಶೇ.೨೫ ರಾಜಧನ ಪಾವತಿಯಲ್ಲಿ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೩ (೫೭೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಮರಳುಗಾರಿಕೆಯಿಂದ ವಸೂಲಿ ಮಾಡಿದ ರಾಜಧನದ ಮೊತ್ತವೆಷ್ಟು ; (ತಾಲ್ಲೂಕು ಮತ್ತು ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಕರಾವಳಿಯ ೩ ಜಿಲ್ಲೆಗಳಲ್ಲಿ ಸಿಆರ್‌ಝೆಡ್ ವ್ಯಾಪ್ತಿಯ ಮರಳಿನ ದಿಬ್ಬ ತೆರವುಗೊಳಿಸುವ ಸಂದರ್ಭ ಸಂಗ್ರಹವಾದ ರಾಜಧನದ ಮೊತ್ತವೆಷ್ಟು ; (ತಾಲ್ಲೂಕು ಮತ್ತು ಜಿಲ್ಲಾವಾರು ವರ್ಷವಾರು ವಿವರ ನೀಡುವುದು)

(ಇ) ಹೀಗೆ ಸಂಗ್ರಹವಾದ ರಾಜಧನದಲ್ಲಿ ಶೇ.೨೫ರಷ್ಟು ಮೊತ್ತವನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಬಗ್ಗೆ ಆದೇಶ ಹೊರಡಿಸಲಾಗಿದೆಯೇ ; (ಆದೇಶ ಪ್ರತಿ ಒದಗಿಸುವುದು)

(ಈ) ಸ್ಥಳೀಯ ಸಂಸ್ಥೆಗಳಿಗೆ ರಾಜಧನ ಶೇ. ೨೫ರಷ್ಟು ಮೊತ್ತವನ್ನು ವರ್ಗಾಯಿಸುವ ಬಗ್ಗೆ ಜಿಲ್ಲಾ ಕಛೇರಿಗಳಿಂದ ಪ್ರಸ್ತಾವನೆ ಸ್ವೀಕೃತಗೊಂಡಿದ್ದರೂ, ಪಾವತಿಗೆ ಸರ್ಕಾರದ ಅನುಮತಿ ನೀಡದಿರುವುದು ನಿಜವೇ ; ಇದಕ್ಕಿರುವ ತೊಡಕುಗಳೇನು ;

(ಉ) ಕಳೆದ ೫ ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಪಾವತಿಗೆ ಇರುವ ಮೊತ್ತ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು ವಿವರ ಒದಗಿಸುವುದು)

(ಊ) ಮರಳುಗಾರಿಕೆಯಿಂದ ವಸೂಲಾದ ರಾಜಧನದ ಶೇ.೨೫ ರಷ್ಟು ಪಾಲನ್ನು ಶೀಘ್ರವಾಗಿ ಸ್ಥಳೀಯ ಸಂಸ್ಥೆಗಳಿಗೆ ಪಾವತಿಸುವ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಯಾವ ಯಾವ ಕ್ರಮ ಕೈಗೊಳ್ಳಲಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಋ) ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಿಗೆ ಪ್ರತ್ಯೇಕ ಮರಳುನೀತಿ ತರಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಪ್ರಸ್ತಾವನೆ ಯಾವ ಹಂತದಲ್ಲಿದೆ ; ಪ್ರಸ್ತಾವನೆಯ ಪ್ರಮುಖ ಅಂಶಗಳೇನು ; ಕರಾವಳಿ ಜಿಲ್ಲೆಗೆ ಪ್ರತ್ಯೇಕ ಮರಳು ನೀತಿ ಎಂದು ಜಾರಿಗೆ ತರಲಾಗುವುದು ?

## ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಇಲ್ಲದೆ ಕಾರ್ಯಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೪ (೬೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಸ್ಥಾಪಿಸಲ್ಪಟ್ಟ "ಶುದ್ಧ ಕುಡಿಯುವ ನೀರಿನ ಘಟಕಗಳು" ನಿರ್ವಹಣೆಯಿಲ್ಲದೇ ಕೆಟ್ಟು ನಿಂತು ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ;

(ಇ) ಪೂರ್ಣಗೊಂಡ ಘಟಕಗಳು ಎಷ್ಟು ; ಪ್ರಗತಿಯಲ್ಲಿರುವ ಘಟಕಗಳು ಎಷ್ಟು ;

(ಈ) ಜಿಲ್ಲೆಗೆ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಬಿಡುಗಡೆಯಾದ ಅನುದಾನವೆಷ್ಟು ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಬಳಕೆಯಾಗದೆ ಇರುವ ಅನುದನಾವೆಷ್ಟು ; (ವರ್ಷವಾರು ವಿವರ ನೀಡುವುದು)

(ಉ) ಸ್ಥಾಪಿಸಿರುವ ಘಟಕಗಳು ನಿರ್ವಹಣೆ ಕೊರತೆಯಿಂದ ಸಾರ್ವಜನಿಕರ ಉಪಯೋಗಕ್ಕೆ ಬಾರದಿರುವ ಘಟಕಗಳನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಘಟಕಗಳು ನಿರ್ವಹಣೆಯಿಲ್ಲದೆ ಕೆಟ್ಟು ನಿಂತಿವೆ ? (ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು ದಂಧೆ ತಡೆಯುವಲ್ಲಿ ವಿಫಲವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೫ (೬೭೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಅಕ್ರಮ ಮರಳು ದಂಧೆಯ ಸಾಗಣಿಯನ್ನು ತಡೆಗಟ್ಟಲು ಸರ್ಕಾರವು ವಿಫಲವಾಗಿರುವುದು ಹಾಗೂ ಕಲಬೆರಕೆ ಮರಳು ದಂಧೆಕೋರರ ಮೇಲೆ ಕೇಸು ದಾಖಲಿಸಲು ಗುಣಮಟ್ಟ ಪರೀಕ್ಷಾ ಮಂಡಳಿಯೂ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗುಣಮಟ್ಟ ಪರೀಕ್ಷೆಗೆ ಇರುವ ಮಾನದಂಡಗಳೇನು ; ಅನುಸರಿಸಲಾಗುತ್ತಿರುವ ಕ್ರಮಗಳೇನು ;

(ಇ) ಗುಣಮಟ್ಟ ಪರೀಕ್ಷೆಯಲ್ಲಿ ಮಣ್ಣು ಮಿಶ್ರೀತವಾಗಿದ್ದರೆ ಅದು ಮರಳಲ್ಲ, ಎಂಬ ಪದ ಬಳಕೆಯಿಂದ ಮರಳು ದಂಧೆಕೋರರು

ಆರೋಪದಿಂದ ಮುಕ್ತರಾಗುತ್ತಿರುವುದನ್ನು ಸರ್ಕಾರವು ಗಮನಿಸಿದೆಯೇ ; ಹಾಗಿದ್ದರೆ, ಇವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗುವುದು ;

(ಈ) ಕಳೆದ ೨೦೧೪-೧೫, ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿನಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ಮತ್ತು ಎಷ್ಟು ದಂಡ ವಸೂಲಿ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಲಕ್ಷಾಂತರ ಮಕ್ಕಳು ಶಾಲೆಯಿಂದ ಹೊರಗುಳಿದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೬ (೬೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೇಶದಲ್ಲಿ 'ಶಿಕ್ಷಣದ ಹಕ್ಕು' ಜಾರಿಯಾದರೂ ರಾಜ್ಯದಲ್ಲಿ ಇನ್ನೂ ಲಕ್ಷಾಂತರ ಮಕ್ಕಳು ಶಿಕ್ಷಣದಿಂದ ವಂಚಿತರಾಗಿ ಬೀದಿಯಲ್ಲಿಯೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಕ್ಕಳನ್ನು ಶಾಲೆಗೆ ಕರೆತರಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಶಾಲಾ ದಾಖಲಾತಿ ಹೆಚ್ಚಿಸಲು ಹಾಗೂ ಮಕ್ಕಳ ವಿದ್ಯಾಭ್ಯಾಸದ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರವು ಏನು ಕ್ರಮಗಳನ್ನು ಕೈಗೊಂಡಿದೆ ;

(ಇ) ರಾಜ್ಯದಲ್ಲಿ ನೂರಾರು ಸರ್ಕಾರಿ ಗ್ರಾಮೀಣ ಶಾಲಾ ಕಟ್ಟಡಗಳು ಕುಸಿಯುವ ಸ್ಥಿತಿ ತಲುಪಿರುವುದು ಹಾಗೂ ಕುಸಿದು ಬಿದ್ದು ಹಸು ಮಕ್ಕಳು ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಶಾಲೆಗಳು ದುರಸ್ತಿಗಾಗಿ ಕಾದಿವೆ ; ಎಷ್ಟು ಕಟ್ಟಡಗಳನ್ನು ನವೀಕರಿಸಲಾಗಿದೆ ; ಇನ್ನೂ ಎಷ್ಟು ಶಾಲಾ ಕಟ್ಟಡಗಳನ್ನು ನವೀಕರಿಸಲಾಗುವುದು ; ಯಾವ ಕಾಲ ಮಿತಿಯೊಳಗೆ ಇದನ್ನು ಪೂರ್ಣಗೊಳಿಸಲಾಗುವುದು ?

## ಬೆಳಗಾವಿ ಜಿಲ್ಲೆಯ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೭ (೬೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಪಟ್ಟಣದ ಸರ್ಕಾರಿ ಪದವಿ ಕಾಲೇಜು ಮತ್ತು ಜಿಲ್ಲೆಯಲ್ಲಿನ ಇತರೆ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆಯಿದ್ದು, ಬೋಧನಾ ಕೊಠಡಿಗಳ ಕೊರತೆಯೂ ಸೇರಿದಂತೆ ಮೂಲಭೂತ ಸೌಲಭ್ಯಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲೆಯ ಚಿಕ್ಕೋಡಿ ಪಟ್ಟಣದ ಸರ್ಕಾರಿ ಪದವಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಎಲ್ಲಾ ವಿಭಾಗಗಳ ವಿವರ ನೀಡುವುದು)

(ಇ) ಕಾಲೇಜಿನಲ್ಲಿರುವ ಒಟ್ಟು ಬೋಧನಾ ಕೊಠಡಿಗಳ ಸಂಖ್ಯೆ ಎಷ್ಟು ; ಮತ್ತು ಪ್ರಯೋಗಾಲಯ, ಆಟದ ಮೈದಾನ, ಗ್ರಂಥಾಲಯ, ಬಸ್ ಸೌಕರ್ಯದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ ;

(ಈ) ಕಾಲೇಜಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅದರಲ್ಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಎಲ್ಲ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ?

## ಶಾಧಿಭಾಗ್ಯ ಯೋಜನೆಯಡಿ ಅರ್ಹಫಲಾನುಭವಿಗಳಿಗೆ ಸಹಾಯಧನ ವಿತರಣೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೮ (೬೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಶಾಧಿಭಾಗ್ಯ ಯೋಜನೆಯಡಿ ಅರ್ಜಿ ಸಲ್ಲಿಸಿದವರಿಗೆ ನಿಗಧಿತ ಅವಧಿಯಲ್ಲಿ ಹಣ ಸಂದಾಯವಾಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಈ ಯೋಜನೆ ಜಾರಿಗೆ ಬಂದಾಗಿನಿಂದ ಎಷ್ಟು ಜನ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಎಷ್ಟು ಜನ ಫಲಾನುಭವಿಗಳು ಈ ಯೋಜನೆಯಡಿ ಸಹಾಯಧನ ಪಡೆದುಕೊಂಡಿದ್ದಾರೆ, ಬಾಕಿ ಇರುವ ಫಲಾನುಭವಿಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬಾಕಿ ಇರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಸಹಾಯಧನ ಬಿಡುಗಡೆ ಮಾಡಲಾಗುವುದು ?

## ರಾಜ್ಯದಲ್ಲಿ ಅಕ್ರಮ ಮರಳುಗಾರಿಕೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೪೭೯ (೭೧೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮರಳುಗಾರಿಕೆ ಮತ್ತು ಸಾಗಾಣಿಕೆ ಬಗ್ಗೆ ರಾಜ್ಯ ಸರ್ಕಾರ ಸ್ಪಷ್ಟವಾದ ನೀತಿಯನ್ನು ಪ್ರಕಟಿಸದೇ ಇರಲು ಕಾರಣವೇನು ;

(ಆ) ಅಕ್ರಮ ಮರಳು ಸಾಗಾಣಿ ಮತ್ತು ದಾಸ್ತಾನು ಮಾಡುತ್ತಿರುವುದರಿಂದ ಮರಳಿನ ದರದಲ್ಲಿ ಏರಳಿತ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅಕ್ರಮ ಮರಳುಗಾರಿಕೆ ಬಗ್ಗೆ ಕಳೆದ ೩ ವರ್ಷಗಳ ದಾಖಲಾದ ಪ್ರಕರಣಗಳು ಎಷ್ಟು ; ಅವು ಯಾವುವು ; ಎಲ್ಲೆಲ್ಲಿ ದಾಖಲಾಗಿವೆ ;

(ಈ) ಅಕ್ರಮ ಮರಳುಗಾರಿಕೆಯನ್ನು ತಡೆಯಲು ಇಲಾಖೆ ವಿಫಲವಾಗಿದೆಯೇ ; ಇಲಾಖೆಯಲ್ಲಿ ಅಧಿಕಾರಿಗಳ ಕೊರತೆಯಿಂದ ಕಾನೂನನ್ನು ಪಾಲಿಸಲು ಆಗುತ್ತಿಲ್ಲ ಎಂಬ ವಿಚಾರ ಸರ್ಕಾರದ ಗಮನದಲ್ಲಿದೆಯೇ ;

(ಉ) ಮರಳುಗಾರಿಕೆಯಲ್ಲಿ ಭ್ರಷ್ಟಾಚಾರ ಪ್ರಕರಣಗಳು ಹೆಚ್ಚಾಗಲು ಕಾರಣಗಳೇನು ; (ವಿವರ ನೀಡುವುದು)

(ಊ) ಭ್ರಷ್ಟಾಚಾರ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಉನ್ನತ ಶಿಕ್ಷಣದ ಯೋಜನೆಗಳ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೪೮೦ (೭೬೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಜಾರಿಯಲ್ಲಿರುವ ಯೋಜನೆಗಳು ಯಾವುವು ; ಹೊಸ ಯೋಜನೆ ಯಾವುದು ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ವಿಶ್ವವಿದ್ಯಾಲಯಗಳಿವೆ ; ಅವು ಯಾವುವು ಮತ್ತು ಎಲ್ಲೆಲ್ಲಿ ಸ್ಥಾಪಿಸಲಾಗಿದೆ ;

(ಇ) ಕೆಲವು ವಿಶ್ವವಿದ್ಯಾಲಯಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡಿರುವ ಕಾರಣವೇನು ; ಅವು ಯಾವುವು ;

(ಈ) ಕೆಲವು ವಿಶ್ವವಿದ್ಯಾಲಯಗಳ ಮೇಲೆ ಅನೇಕ ದೂರುಗಳು ಬಂದಿದ್ದರೂ, ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ; ಅವು ಯಾವುವು ? (ವಿವರ ನೀಡುವುದು)

## ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಹಣ ಬಿಡುಗಡೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೪೮೧ (೭೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖಾ ಮಕ್ಕಳಿಗೆ ಸಮವಸ್ತ್ರವನ್ನು ಯಾವ್ಯಾವ ನಿಗಮ ಸರಬರಾಜು ಮಾಡುತ್ತಿದೆ ;

(ಆ) ಹಲವಾರು ವರ್ಷಗಳಿಂದ ಸರ್ಕಾರಿ ಸಂಸ್ಥೆಯಾಗಿರುವ ಕೈಮಗ್ಗ ಅಭಿವೃದ್ಧಿ ನಿಗಮ, ಜವಳಿ ಅಭಿವೃದ್ಧಿ ನಿಗಮದಿಂದ ಪೂರೈಸುತ್ತಿದ್ದು, ಈ ವರ್ಷ ಕಡಿತಗೊಳಿಸಲು ಕಾರಣವೇನು ;

(ಇ) ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲೂ ಬಡ ನೇಕಾರರನ್ನು ಹೊಂದಿರುವ ಈ ನಿಗಮಗಳು ಹಲವಾರು ವರ್ಷದಿಂದ ಬಟ್ಟೆ ಪೂರೈಸಿಕೊಂಡು ಬಂದಿದ್ದು, ಉತ್ತಮ ಗುಣಮಟ್ಟದ ಬಟ್ಟೆ ಪೂರೈಕೆ ಮಾಡಿದ್ದರೂ ಕಡೆಗಣಿಸಲು ಕಾರಣವೇನು ;

(ಈ) ಮುಂದಿನ ಮೂರು ವರ್ಷಗಳಿಗೆ ಕರಾರು ಮಾಡಲಾಗಿದೆಯೇ ;

(ಉ) ಕರಾರು ಪ್ರಕಾರ ಈ ವರ್ಷದಲ್ಲಿ ಹಣ ಪಾವತಿಸಲು ಇರುವ ನಿಯಮಗಳೇನು ? (ವಿವರ ನೀಡುವುದು)

## ಕೆರೆಗಳ ನಿರ್ವಹಣೆ ಕುರಿತು

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೪೮೨ (೭೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ನಿರ್ವಹಣೆ ಮತ್ತು ದುರಸ್ತಿಯಲ್ಲಿ ಕಾಮಗಾರಿಗಳಿಗೆ ಸಾಕಷ್ಟು ಅನುದಾನ ಬಿಡುಗಡೆಯಾಗುತ್ತಿದ್ದರೂ ಅದು ಸದ್ಬಳಕೆಯಾಗುತ್ತಿಲ್ಲ ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾ ಪಂಚಾಯತಿ ಕೆರೆಗಳ ದುರಸ್ಥಿ, ನಿರ್ವಹಣೆಗೆ ಸರ್ಕಾರ ೨೦೧೩-೧೪ ರಿಂದ ೨೦೧೬-೧೭ನೇ ಸಾಲಿಗೆ ಹಂಚಿಕೆ ಮಾಡಿದ ವರ್ಷವಾರು ಅನುದಾನವೆಷ್ಟು ; ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಜಿಲ್ಲಾ ಪಂಚಾಯಿತಿ ಕೆರೆಗಳ ಜಿಲ್ಲಾವಾರು, ತಾಲ್ಲೂಕುವಾರು ಸಂಖ್ಯೆಯ ಸಮಗ್ರ ವಿವರ ನೀಡುವುದು ;

(ಇ) ರಾಜ್ಯದಲ್ಲಿನ ಜಿಲ್ಲಾ ಪಂಚಾಯತಿ ಕೆರೆಗಳ ಪ್ರತಿಯೊಂದು ಜಿಲ್ಲಾವಾರು, ತಾಲ್ಲೂಕುವಾರು ಕೆರೆವಾರು ವಿವರ, ೨೦೧೩- ೧೪ ರಿಂದ ೨೦೧೬ರ ಅಕ್ಟೋಬರ್ ಅಂತ್ಯದವರೆಗೆ ವಿವಿಧ ಕಾಮಗಾರಿಗಳಿಗೆ ವರ್ಷವಾರು, ಕೆರೆವಾರು ಬಳಕೆ/ವೆಚ್ಚ ಮಾಡಿದ ಅನುದಾನ ವಿವರ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತದ ವಿವರ ನೀಡುವುದು ?

## ಅನುದಾನ ಖರ್ಚಾಗದಿರುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೪೮೩ (೭೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಜಿಲ್ಲಾ ಪಂಚಾಯಿತಿಗಳು ಸರ್ಕಾರದ ಅನುದಾನವನ್ನು ಬಳಸಿಕೊಳ್ಳುವಲ್ಲಿ ವಿಳಂಬ ಮಾಡುತ್ತಿರುವುದರಿಂದ ರೈತಾಪಿ ವರ್ಗ ಸೇರಿದಂತೆ ಜನ ಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರದ ಪ್ರಯೋಜಕತ್ವ ಯೋಜನೆಗಳೂ ಸೇರಿದಂತೆ ಜಿಲ್ಲಾ ಪಂಚಾಯಿತಿಗಳಿಗೆ ೨೦೧೩-೧೪, ೧೪-೧೫, ೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಜಿಲ್ಲಾ ಪಂಚಾಯಿತಿವಾರು, ವರ್ಷವಾರು ಬಿಡುಗಡೆಯಾದ ಹಂಚಿಕೆಯಾದ ಮತ್ತು ವೆಚ್ಚವಾದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿನ ಜಿಲ್ಲಾ ಪಂಚಾಯಿತಿಗಳಿಗೆ ವಿವಿಧ ಶೀರ್ಷಿಕೆವಾರು ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಈ) ಈ ಜಿಲ್ಲಾ ಪಂಚಾಯಿತಿಗಳು ೨೦೧೬ರ ಸೆಪ್ಟೆಂಬರ್ ಅಂತ್ಯದವರೆಗೆ ರಸ್ತೆ ಕಾಮಗಾರಿ ಸೇರಿದಂತೆ ಜಾರಿಗೊಳಿಸಿದ ವಿವಿಧ ಕಾಮಗಾರಿಗಳು ಯಾವುವು ? (ಜಿಲ್ಲಾ ಪಂಚಾಯಿತಿವಾರು, ಕಾಮಗಾರಿವಾರು ವಿವರ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ, ವಿವರ ಕಾಮಗಾರಿಗಳ ಪ್ರಸಕ್ತ ಹಂತ ಮತ್ತು ಕಾಮಗಾರಿಗಳಿಗಾಗಿ ಇಲ್ಲಿಯವರೆಗೂ ಪಾವತಿಸಿದ ವರ್ಷವಾರು ಮೊತ್ತದ ಸಮಗ್ರ ವಿವರಗಳನ್ನು ಒದಗಿಸುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶಾಶ್ವತ ವರ್ಗಾವಣೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೪ (೫೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳು ಜಿಲ್ಲಾ ವೃಂದದ ಹುದ್ದೆಗಳಾಗಿದ್ದು, ಈ ವೃಂದದ ನೌಕರರುಗಳನ್ನು ಬೇರೊಂದು ಜಿಲ್ಲಾ ವೃಂದಕ್ಕೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು ೧೯೭೭ರ ಅನ್ವಯ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಪಡೆದು ಶಾಶ್ವತ ವರ್ಗಾವಣೆ ಮಾಡಬೇಕಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ನೌಕರರುಗಳನ್ನು ನಿಯಮಬಾಹಿರವಾಗಿ ವರ್ಗಾವಣೆ ಮಾಡಿದ್ದು, ಇದನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಹಾಗಿದ್ದಲ್ಲಿ, ಈ ರೀತಿ ನಿಯಮ ಬಾಹಿರವಾಗಿ ವರ್ಗಾವಣೆ ಮಾಡಲು ಕಾರಣರಾದ ಅಧಿಕಾರಿ ಮತ್ತು ನೌಕರರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ರಾಜ್ಯವನ್ನು ಗುಡಿಸಲು ಮುಕ್ತ ಎಂದು ಘೋಷಿಸಿರುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೫ (೫೫೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಕರ್ನಾಟಕ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನಾಗಿ ಘೋಷಿಸಿರುವುದು ನಿಜವೇ.

(ಆ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ನಿರ್ಮಿಸಿ ಬಡವರಿಗೆ ಹಂಚಿಕೆ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; ಈ ಯೋಜನೆಯಲ್ಲಿ ಎಷ್ಟು ಗುರಿಯನ್ನು ಹೊಂದಲಾಗಿತ್ತು ; ಹಾಗೂ ಈ ಯೋಜನೆಯ ಇತ್ತೀಚಿಗೆ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ?

## ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಮಯದಲ್ಲಿ ಕರ್ತವ್ಯ ಲೋಪದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೬ (೫೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯ ಮುಳಬಾಗಿಲು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕು ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಮಯದಲ್ಲಿ ಕರ್ತವ್ಯಲೋಪ ಮತ್ತು ಅನೇಕ ಅಕ್ರಮ ಅವ್ಯವಹಾರಗಳಿಗೆ ಕಾರಣರಾಗಿದ್ದವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಯಕಟ್ಟಿನ ಸ್ಥಳದಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ ಹುದ್ದೆಗೆ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಧಿಕಾರಿಯು ೨೦೧೬–೧೭ನೇ ಸಾಲಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿ/ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ನೌಕರರುಗಳ ವರ್ಗಾವಣೆಯಲ್ಲಿ ಭಾರಿ ಅಕ್ರಮ ಮತ್ತು ಅವ್ಯವಹಾರ ನಡೆಸಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇಂತಹ ಅಕ್ರಮ ಮತ್ತು ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಯ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; ಕ್ರಮ ಕೈಗೊಳ್ಳದಿದ್ದಲ್ಲಿ, ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಈ ಅಧಿಕಾರಿಯು ಈ ಹಿಂದೆ ಕಾರ್ಯನಿರ್ವಹಿಸಿರುವ ಸ್ಥಳದಲ್ಲಿ ನಡೆದಿದೆ ಎನ್ನಲಾದ ಅಕ್ರಮ ಅವ್ಯವಹಾರಗಳ ಬಗ್ಗೆ ತನಿಖೆ ನಡೆಸಲು ತನಿಖಾ ಸಮಿತಿಯನ್ನು ನೇಮಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ?

## ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೪೮೭ (೧೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಮಾಧ್ಯಮ ಶಿಕ್ಷಣ (ಆರ್‌ಎಂಎಸ್) ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯದಲ್ಲಿ ಎಷ್ಟು ಪ್ರೌಢ ಶಾಲೆಗಳನ್ನು ಆಯ್ಕೆ ಮಾಡಲಾಗಿದೆ ;

(ಆ) ಈವರೆಗೆ ಎಷ್ಟು ಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು ; ಆ ಪೈಕಿ ಖರ್ಚಾದ ಮೊತ್ತ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕೇಂದ್ರ ಸರ್ಕಾರದ ಈ ಮಹತ್ವವಾದ ಯೋಜನೆಯನ್ನು ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಅಳವಡಿಸಲು ಇರುವ ಅಡೆತಡೆಗಳು ಯಾವುವು ;

(ಉ) ಈ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳಲ್ಲಿರುವ ಅತಿಥಿ ಉಪನ್ಯಾಸಕರ ಹುದ್ದೆ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೪೮೮ (೧೪೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು ಉಪನ್ಯಾಸಕರ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಜನ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಒಟ್ಟು ಖಾಲಿ ಇರುವ ಹುದ್ದೆಗಳಲ್ಲಿ ಶೇ.೯೦ ರಷ್ಟು ಹುದ್ದೆಗಳನ್ನು ಅತಿಥಿ ಉಪನ್ಯಾಸಕರಿಂದ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಅತಿಥಿ ಉಪನ್ಯಾಸಕರಿಗೆ ಕೊಡುವ ಸಂಬಳವು ಬಹಳ ಹಿಂದೆ ನಿಗಧಿಯಾಗಿದ್ದು, ಇದು ಈಗಿನ ಕಾಲವಾನಕ್ಕೆ ಬಹಳ ಕಡಿಮೆಯಾಗಿದ್ದು, ಅದು ಕೂಡ ನಿಯಮಿತವಾಗಿ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ,ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಊ) ಈ ಎಲ್ಲಾ ಖಾಲಿ ಹುದ್ದೆಗಳಿಗೆ ಯಾವಾಗ ಶಾಶ್ವತವಾಗಿ ನೇಮಕ ಮಾಡಿಕೊಳ್ಳಲಾಗುವುದು ?

## ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ (ಶಿಕ್ಷಕರ ಕ್ಷೇತ್ರ) :–**

೪೮೯ (೫೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ಜಿಲ್ಲೆ, ದಕ್ಷಿಣ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ರಾಮನಗರ ಜಿಲ್ಲೆಗಳಲ್ಲಿರುವ ಅನುದಾನಿತ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಹೆಸರು, ವಿಳಾಸದೊಡನೆ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರಗಳೊಡನೆ)

(ಈ) ಸದರಿ ಹುದ್ದೆಗಳ ಖಾಲಿ ಇರುವುದರಿಂದ, ಸದರಿ ಶಾಲೆಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಾದರೆ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡುವುದೇ ; ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುವುದು ?

## ಯು.ಜಿ.ಸಿ. ಬಾಕಿ ವೇತನ ನೀಡುವ ಬಗ್ಗೆ

**ಶ್ರೀ ಪುಟ್ಟಣ (ಶಿಕ್ಷಕರ ಕ್ಷೇತ್ರ) :–**

೪೯೦ (೫೫೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಉಪನ್ಯಾಸಕರುಗಳಿಗೆ ಪರಿಷ್ಕೃತ ಯು.ಜಿ.ಸಿ ವೇತನ ಶ್ರೇಣಿಯನ್ನು ಎಂದಿನಿಂದ ಜಾರಿಗೊಳಿಸಲಾಗಿದೆ ;

(ಆ) ಪರಿಷ್ಕೃತ ಯು.ಜಿ.ಸಿ ವೇತನ ಸಂಬಂಧ ಸದರಿ ಉಪನ್ಯಾಸಕರಿಗೆ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು ;

(ಇ) ಯಾವ ಅವಧಿಗೆ ಬಾಕಿ ಮೊತ್ತವನ್ನು ನೀಡಬೇಕಾಗಿದೆ ; (ವಿವರ ನೀಡುವುದು)

(ಈ) ಪರಿಷ್ಕೃತ ಯು.ಜಿ.ಸಿ ವೇತನ ಸಂಬಂಧ ಬಾಕಿ ಮೊತ್ತ ನೀಡಬೇಕಾಗಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಉ) ಬಾಕಿ ಮೊತ್ತ ನೀಡುವಲ್ಲಿ ವಿಳಂಬ ಉಂಟಾಗಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಪಾವತಿಸಲಾಗುವುದು ?

## ೨೦೦೮ರ ನಂತರ ನೇಮಕಾತಿಯಾದ ಶಿಕ್ಷಕರಿಗೆ ವಿಶೇಷ ಭತ್ಯೆ ಮಂಜೂರು ಮಾಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ):–**

೪೯೧ (೫೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜಿನ ಬೋಧಕರಿಗೆ ಎಂದಿನಿಂದ ವಿಶೇಷ ಭತ್ಯೆಯನ್ನು (ಎಕ್ಸ್‌ಗ್ರೇಷಿಯಾ) ನೀಡಲಾಗುತ್ತಿದೆ ; ಯಾವ ಪ್ರಮಾಣದಲ್ಲಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ೨೦೦೮ನೇ ಸಾಲಿನ ನಂತರ ನೇಮಕಾತಿಗೊಂಡಿರುವ ಬೋಧಕರಿಗೆ ವಿಶೇಷ ಭತ್ಯೆ, ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿ ಬೋಧಕರಿಗೆ ವಿಶೇಷ ಭತ್ಯೆ ನೀಡಲು ಸರ್ಕಾರದ ನಿರ್ಧಾರವೇನು ; (ವಿವರ ನೀಡುವುದು)

(ಇ) ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ವಿಶೇಷ ಭತ್ಯೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವರಿಗೆ ವಿಶೇಷ ಭತ್ಯೆ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಸದರಿ ವಿಶೇಷ ಭತ್ಯೆ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

## ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರಿಗೆ ಸ್ಥಾನೀಕರಣ ಬಡ್ತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ):–**

೪೯೨ (೫೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಪ್ರೀಂ ಕೋರ್ಟ್, ಹೈಕೋರ್ಟ್ ಹಾಗೂ ಕೆ.ಎ.ಟಿ ಆದೇಶದಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸಿ ಖಾಯಂಗೊಂಡ ಉಪನ್ಯಾಸಕರು ಹಾಗೂ ಪ್ರಾಂಶುಪಾಲರಿಗೆ ಸ್ಥಾನೀಕರಣ ಸೌಲಭ್ಯ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ಸುಪ್ರೀಂ ಕೋರ್ಟ್, ಹೈಕೋರ್ಟ್ ಹಾಗೂ ಕೆ.ಎ.ಟಿ. ಆದೇಶದಂತೆ ಸರ್ಕಾರಿ ಪದವಿ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದಲ್ಲಿ ಖಾಯಂಗೊಂಡ ಉಪನ್ಯಾಸಕರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸ್ಥಾನೀಕರಣ ಸೌಲಭ್ಯ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸ್ಥಾನೀಕರಣ ಸೌಲಭ್ಯ ನೀಡಲು ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದ್ದು ಸರ್ಕಾರಿ ಪದವಿ ಕಾಲೇಜುಗಳಿಗೆ ವಿಸ್ತರಿಸಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರಿಗೆ ವಿಸ್ತರಿಸಲು ಇರುವ ಸಮಸ್ಯೆಗಳೇನು ;

(ಈ) ಸದರಿ ಉಪನ್ಯಾಸಕರಿಗೆ ಸ್ಥಾನೀಕರಣ ಸೌಲಭ್ಯವನ್ನು ನೀಡಲಾಗುವುದೇ ; ಯಾವ ಕಾಲಮಿತಿಯಲ್ಲಿ ಸೌಲಭ್ಯ ನೀಡಲಾಗುವುದು ? (ವಿವರ ನೀಡುವುದು)

## ಪಂಚತಂತ್ರ ದಾಖಲೆಗಳನ್ನು ಬಲಪಡಿಸುವ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೩ (೫೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚತಂತ್ರ ದಾಖಲೆಗಳನ್ನು ಬಲಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸೃಜಿಸಲಾದ ಉದ್ಯೋಗಗಳನ್ನು ಪಂಚತಂತ್ರ ವ್ಯವಸ್ಥೆಗೆ ಅಳವಡಿಸದೇ ಇರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಆಸ್ತಿಗಳ ದಾಖಲೆ, ಮಾಲೀಕರ ಹೆಸರು, ನೀರು ಸಂಪರ್ಕ ಮಾಸ್ಟರ್, ನೀರಿನ ಶುಲ್ಕ ಮತ್ತು ಬೇಡಿಕೆಗಳನ್ನು ಪಂಚತಂತ್ರದಲ್ಲಿ ನಮೂದಿಸಲಾಗಿದೆಯೇ ; ನಮೂದಿಸಿದ್ದಲ್ಲಿ, ಗ್ರಾಮ ಪಂಚಾಯಿತಿಗಳವಾರು ವಿವರ ನೀಡುವುದು ; ಇಲ್ಲವಾದಲ್ಲಿ ಕಾರಣಗಳನ್ನು ತಿಳಿಸುವುದು ;

(ಈ) ಪ್ರಸ್ತುತ ಪಂಚತಂತ್ರದಲ್ಲಿ ತೆರಿಗೆಯು ದಾಖಲೆಗಳನ್ನು ನಿರ್ವಹಿಸಲಾಗಿದೆಯೇ ; ಪಂಚತಂತ್ರದಿಂದ ಆಸ್ತಿ ತೆರಿಗೆ ವಸೂಲಾತಿಯನ್ನು ಕ್ರಮಬದ್ಧಗೊಳಿಸಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ವಸತಿ ರಹಿತರ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೪ (೫೭೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ವಸತಿ ರಹಿತ ಹಾಗೂ ನಿವೇಶನ ರಹಿತರ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮತ್ತು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ವಸತಿ ರಹಿತ ಮತ್ತು ನಿವೇಶನ ರಹಿತರಿಗೆ ವಸತಿ ಹಾಗೂ ನಿವೇಶನ ಒದಗಿಸಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿಯೇನು ;

(ಇ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಫಲಾನುಭವಿಗಳಿಗೆ ವಸತಿ ಮತ್ತು ನಿವೇಶನ ಕಲ್ಪಿಸಲಾಗಿದೆ; (ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು, ಫಲಾನುಭವಿಗಳವಾರು ವಿವರ ನೀಡುವುದು)

(ಈ) ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ವಸತಿ ಮತ್ತು ನಿವೇಶನ ಕಲ್ಪಿಸಲಾಗುವುದು ? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಿ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೫ (೫೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತಿಗಳಿಂದ ವಸೂಲಿ ಮಾಡಲಾಗುತ್ತಿರುವ ತೆರಿಗೆ ಕುಂಠಿತವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ ; ಪ್ರತಿಯೊಂದು ಗ್ರಾಮ ಪಂಚಾಯತಿಯಿಂದ ಕಳೆದ ಮೂರು ವರ್ಷಗಳಲ್ಲಿ ವಸೂಲಿ ಮಾಡಲಾದ ತೆರಿಗೆ ಎಷ್ಟು ; ಬಾಕಿ ಉಳಿದಿರುವ ತೆರಿಗೆ ಪ್ರಮಾಣವೆಷ್ಟು ; ಪ್ರಸ್ತುತವಿರುವ ಸ್ಥಿತಿಗತಿ ಏನು ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮ ಪಂಚಾಯಿತಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಗ್ರಾಮ ಪಂಚಾಯತಿಗಳಿಂದ ಯಾವ ಯಾವ ರೀತಿ ತೆರಿಗೆ ವಸೂಲಿ ಮಾಡಲಾಗುತ್ತಿದೆ ; ಸದರಿ ವಸೂಲಿಯಾದ ತೆರಿಗೆಯಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಸ್ವಂತ ಖರ್ಚಿಗೆ ಶೇ. ಎಷ್ಟು ಹಣ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರಿಯಾಗಿ ತೆರಿಗೆ ವಸೂಲಿ ಮಾಡಲು ಸರ್ಕಾರ ವಿಶೇಷವಾಗಿ ಏನು ಕ್ರಮ ಕೈಗೊಂಡಿದೆ ; ಕೆಲವು ಅಧಿಕಾರಿಗಳಿಂದ ತೆರಿಗೆ ವಸೂಲಿ ಮಾಡುವಲ್ಲಿ ಬೇಜವಾಬ್ದಾರಿ ಕಂಡುಬಂದಿದ್ದು, ಈವರೆಗೆ ಇಂತಹ ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಪ್ರೌಢ ಶಾಲೆಗಳ ಮಂಜೂರಾತಿಯ ಪ್ರಸ್ತಾವನೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೬ (೬೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಮಂಜೂರಾತಿ ನೀಡಿದ ಹೊಸ ಪ್ರೌಢಶಾಲೆಗಳ ಸಂಖ್ಯೆ ಎಷ್ಟು; ಹೊಸದಾಗಿ ಮಂಜೂರಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಜಿಲ್ಲೆಯಲ್ಲಿ ಆರ್.ಎಂ.ಎಸ್. ನಲ್ಲಿ ಮಂಜೂರಾದ ಪ್ರೌಢಶಾಲೆಗಳನ್ನು ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸದೇ ಇದ್ದಲ್ಲಿ, ಕಾರಣವೇನು ; ಪೂರ್ಣಗೊಳಿಸಲು ಇರುವ ಕಾಲಮಿತಿ ಯಾವುದು ; ಪೂರ್ಣಗೊಂಡ ಮತ್ತು ಪೂರ್ಣಗೊಳ್ಳದ ಶಾಲೆಗಳ ಮಾಹಿತಿಯನ್ನು ಒದಗಿಸುವುದು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸರ್ಕಾರಿ ನಿವೇಶನಗಳಿಗೆ ಮೂಲಭೂತ ಸೌಕರ್ಯ ಒದಗಿಸುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೭ (೬೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದಿಂದ ನಿವೇಶನರಹಿತರಿಗೆ ನೀಡುವ ಜಮೀನುಗಳಿಗೆ ಮೂಲ ಸೌಕರ್ಯಗಳಾದ ಕುಡಿಯುವ ನೀರು, ಚರಂಡಿ, ಬೀದಿದೀಪ ರಸ್ತೆಯನ್ನು ಒದಗಿಸದೇ ಇರುವುದರಿಂದ, ಫಲಾನುಭವಿಗಳು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೫ ವರ್ಷಗಳಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಂಚಿಕೆ ಮಾಡಿದ ನಿವೇಶನಗಳು ಎಷ್ಟು; ಅವುಗಳ ವಿಸ್ತೀರ್ಣ ಎಷ್ಟು ; ಈ ನಿವೇಶನಗಳಲ್ಲಿ ಹಂಚಿಕೆ ಮಾಡಿದ ಫಲಾನುಭವಿಗಳ

ಸಂಖ್ಯೆ ಎಷ್ಟು; ಈ ನಿವೇಶನಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದಿಂದ ಬಿಡುಗಡೆಗೊಳಿಸಿದ ಅನುದಾನವೆಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು ವಿವರ ಒದಗಿಸುವುದು)

(ಇ) ಕಳೆದ ೫ ವರ್ಷಗಳಲ್ಲಿ ನಿವೇಶನರಹಿತರಿಗೆ ಹಂಚಿಕೆ ಮಾಡಿದ ನಿವೇಶನಗಳಲ್ಲಿ ಮನೆ ನಿರ್ಮಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆ ಸಂಬಂಧ ಬಾಕಿ ಅನುದಾನ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೮ (೬೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಪೂರೈಕೆ ಮಾಡಿದ ಸಂಬಂಧ ಗ್ರಾಮ ಪಂಚಾಯತಿಗಳಿಂದ ಸಲ್ಲಿಸಿದ ಬಿಲ್ಲಿನ ಮೊತ್ತವೆಷ್ಟು; ಪಾವತಿಸಿದ ಮೊತ್ತವೆಷ್ಟು; ಗ್ರಾಮ ಪಂಚಾಯತಿಗಳಿಗೆ ಪಾವತಿಸಬೇಕಾದ ಬಾಕಿ ಮೊತ್ತವೆಷ್ಟು; (ಗ್ರಾಮ ಪಂಚಾಯತಿವಾರು ವಿವರ ನೀಡುವುದು) ಈ ಬಾಕಿಯಿಂದ ಗ್ರಾಮ ಪಂಚಾಯತಿಗಳು ಬೇಸಿಗೆಯಲ್ಲಿ ಕುಡಿಯುವ ನೀರು ವಿತರಣೆಗೆ ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಉಡುಪಿ ಜಿಲ್ಲೆಯಲ್ಲಿ ಸರ್ಕಾರದ ಕೊಳವೆ ಬಾವಿ ಕೊರೆಯುವಿಕೆ ನಿಷೇಧದಿಂದ ಸಾರ್ವಜನಿಕರು ಕುಡಿಯುವ ನೀರು ಪೂರೈಕೆಯ ಕಾಮಗಾರಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಗ್ರಾಮ ಪಂಚಾಯತಿಗಳಲ್ಲಿ ಆನ್‌ಲೈನ್ ಮೂಲಕ ಖಾತೆ ಬದಲಾವಣೆಯಾಗದಿರುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೯ (೬೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಬೂಪರಿವರ್ತನೆಗೊಂಡ ಎಲ್ಲಾ ಜಮೀನುಗಳ ಮಾಹಿತಿಯನ್ನು ಕಂದಾಯ ಇಲಾಖೆಯಿಂದ ಪಡೆಯಲಾಗಿದೆಯೇ ; ಇಲ್ಲವಾದಲ್ಲಿ, ಈ ಜಮೀನುಗಳ ಭೂ ಕಂದಾಯವನ್ನು ವಸೂಲಾತಿ ಮಾಡಲು ಕಡತಗಳ ಹಸ್ತಾಂತರಕ್ಕೆ ಕೈಗೊಂಡ ಕ್ರಮವೇನು ;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇ–ಸ್ವತ್ತು ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶದ ಸಂಪರ್ಕವನ್ನು ತಪ್ಪಿಸಿರುವುದರಿಂದ, ಗ್ರಾಮ ಪಂಚಾಯತಿಯಲ್ಲಿ ಖಾತಾ ಬದಲಾವಣೆಯಾಗದೇ ಉಳಿದಿರುವ ಕಡತಗಳು ಎಷ್ಟು; (ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು) ಇದರಿಂದ ಗ್ರಾಮೀಣ ಜನಸಾಮಾನ್ಯರಿಗೆ ಮನೆ ನಿರ್ಮಾಣಕ್ಕೆ ಬ್ಯಾಂಕ್‌ನಿಂದ ಸಾಲ ಪಡೆಯುಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಈ ಬಗ್ಗೆ ಸರ್ಕಾರದ ತುರ್ತು ಕ್ರಮವೇನು)

## ಗ್ರಾಮ ಪಂಚಾಯತಿಗಳಲ್ಲಿ ತೆರಿಗೆ ಸಂಗ್ರಹಿಸಿದ ಪ್ರಮಾಣದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೦ (೫೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಿಂದ ಡಿಮ್ಯಾಂಡ್ ಪುಸ್ತಕದನ್ವಯ ಗ್ರಾಮ ಪಂಚಾಯತಿಗಳವಾರು ಇಲ್ಲಿಯವರೆಗೆ ವಸೂಲಾತಿಯಾಗಬೇಕಿರುವ ಬಾಕಿ ತೆರಿಗೆಯ ಮೊತ್ತ ಎಷ್ಟು; ಜಿಲ್ಲೆಯಲ್ಲಿ ತೆರಿಗೆ ಪಾವತಿಯ ದರವನ್ನು ಯಾವ ಮಾನದಂಡದ ಆಧಾರದ ಮೇಲೆ ನಿಗಧಿಪಡಿಸಲಾಗುತ್ತಿದೆ ; ಈ ನಿಟ್ಟಿನಲ್ಲಿ ತೆರಿಗೆ ವಸೂಲಿ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಏಕರೂಪ ತೆರಿಗೆ ದರ ಇದೆಯೇ ; ಇದ್ದಲ್ಲಿ, ಮಾರ್ಗವಾರು ತೆರಿಗೆಯ ವಿವರಗಳನ್ನು ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ ತೆರಿಗೆ ಸಂಗ್ರಹಿಸಿದ ಪ್ರಮಾಣ ಎಷ್ಟು; ಪ್ರತಿ ಗ್ರಾಮ ಪಂಚಾಯತ್‌ವಾರು, ತಾಲ್ಲೂಕುವಾರು ಮಾಹಿತಿ ನೀಡುವುದು ?

## ವಿವಿಧ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೧ (೫೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ವಿವಿಧ ಭಾಗ್ಯಗಳ ಯೋಜನೆಯಂತೆ ಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರ ಹಾಗೂ ಷೂಭಾಗ್ಯವನ್ನು ಒದಗಿಸಿದೆಯೇ ; (ವಿವರ ನೀಡುವುದು)

(ಆ) ಇದು ಸಮರ್ಪಕವಾಗಿ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಷೂಭಾಗ್ಯಕ್ಕಾಗಿ ರಾಜ್ಯ ಸರ್ಕಾರ ನಿಗಧಿಪಡಿಸಿದ್ದ ಅನುದಾನ ಎಷ್ಟು; ಈಗಾಗಲೇ ಎಷ್ಟು ಮೊತ್ತ ಖರ್ಚು ಮಾಡಲಾಗಿದೆ ;

(ಇ) ಜಿಲ್ಲಾವಾರು ನಿಗಧಿಪಡಿಸಿರುವ ಅನುದಾನ ಮೊತ್ತವೆಷ್ಟು; ಈ ಬಾಬ್ತು ಎಷ್ಟು ಜಿಲ್ಲೆಗಳಿಗೆ ಷೂಭಾಗ್ಯ ವಿತರಣೆಗೆ ಬಾಕಿ ಇದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಯಾವ ಯಾವ ಕಂಪನಿಗಳಿಗೆ ಸರಬರಾಜು ಮಾಡಲು ತಿಳಿಸಲಾಗಿದೆ ಷೂ ಮತ್ತು ಸಮವಸ್ತ್ರದ ದರವೆಷ್ಟು ? (ವಿವರವಾದ ಮಾಹಿತಿ ಒದಗಿಸುವುದು)

## ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ಖಾಸಗಿ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೨ (೫೧೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಸಗಿ ವಿಶ್ವವಿದ್ಯಾಲಯಗಳು ಎಷ್ಟು; ವಿಶ್ವವಿದ್ಯಾಲಯವಾರು, ಸ್ಥಾಪನೆ ದಿನಾಂಕ ಸಹಿತ ಪೂರ್ಣ ಮಾಹಿತಿ ನೀಡುವುದು ;

(ಆ) ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಬೇಕಾದ ಕನಿಷ್ಠ ಅರ್ಹತೆ ಅಥವಾ ಮಾನದಂಡಗಳೇನು ; ಈ ಕುರಿತು ಆದೇಶ ಪ್ರತಿಯನ್ನು ಹಾಗೂ ಪೂರ್ಣ ವಿವರ ನೀಡುವುದು ;

(ಇ) ಮುಂಬೈ–ಕರ್ನಾಟಕ ಹಾಗೂ ಹೈದಾರಾಬಾದ್ ಕರ್ನಾಟಕ ಪ್ರದೇಶವನ್ನೊಳಗೊಂಡ ಉತ್ತರ ಕರ್ನಾಟದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯವಾರು, ಸ್ಥಾಪನೆ ದಿನಾಂಕವಾರು ಹಾಗೂ ಸ್ಥಾಪಿಸಿದ ಸಂಸ್ಥೆವಾರು ಪೂರ್ಣ ವಿವರ ನೀಡುವುದು ?

## ಉಪನ್ಯಾಸಕರನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೩ (೫೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಜ್ಞಾನ ವಿಭಾಗದಲ್ಲಿ ಬರುವ ಎಲ್ಲಾ ಐಚ್ಛಿಕ ವಿಷಯಗಳನ್ನು (ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ, ಎಲೆಕ್ಟ್ರಾನಿಕ್ಸ್ ಹಾಗೂ ಗಣಕ ವಿಜ್ಞಾನ) ಪರಿಗಣಿಸಿ ೫೭ ಉಪನ್ಯಾಸಕರ ಹುದ್ದೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಿದ್ದು, ಉಳಿದ ಕೇವಲ ೧೨ ಗಣಿತ ಉಪನ್ಯಾಸಕರನ್ನು ಪರಿಗಣಿಸದಿರುವುದಕ್ಕೆ ಕಾರಣಗಳೇನು ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಆ) ಗಣಿತ ವಿಷಯವು ವಿಜ್ಞಾನ ವಿಭಾಗಕ್ಕೆ ಸಂಬಂಧಿಸಿದೆಯೇ ಅಥವಾ ಇಲ್ಲವೇ ಎಂಬುದನ್ನು ವಿವರವಾಗಿ ಸ್ಪಷ್ಟಪಡಿಸುವುದು ;

(ಇ) ಸರ್ಕಾರವು ಈ ೧೨ ಉಪನ್ಯಾಸಕರನ್ನು ವೇತನ ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯನ್ನು ಪುನಃ ಪರಿಗಣಿಸುವುದೇ ; ಈ ಪರಿಗಣನೆಗೆ ತೆಗೆದುಕೊಳ್ಳುಲು ನಿಗಧಿಪಡಿಸುವ ಕಾಲಮಿತಿ ಏನು ?

## ಜಗಳೂರು ಮತ್ತು ಆನೆಗೋಡು ಹೆದ್ದಾರಿ ಬಳಿಯಲ್ಲಿನ (KIADB) ಯ ಕೈಗಾರಿಕಾ ಅಭಿವೃದ್ಧಿ ಕಾರ್ಯ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೦೪ (೫೬೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಗಳೂರು ಹಾಗೂ ಆನೆಗೋಡು ರಾಷ್ಟ್ರೀಯ ಹೆದ್ದಾರಿ ಸಮೀಪವಿರುವ ಜಮೀನಿನಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ನಿಗಮವು (KIADB) ಸರ್ವೆ ನಡೆಸಿ ಕೈಗಾರಿಕೆಯನ್ನು ಅಭಿವೃದ್ಧಿಪಡಿಸಲು ಕೆಲವು ಯೋಜನೆಗಳೊಂದಿಗೆ ಮುಂದಾಗಿರುವುದು ನಿಜವೇ ; (ವಿವರ ನೀಡುವುದು)

(ಆ) ಸದರಿ ಯೋಜನೆಯು ಯಾವ ಹಂತದಲ್ಲಿದೆ ;

(ಇ) ಸದರಿ ಸ್ಥಳದಲ್ಲಿನ ಕೈಗಾರಿಕಾ ಅಭಿವೃದ್ಧಿಯ ಅನುಷ್ಠಾನ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಈ) ತ್ವರಿತಗತಿಯಲ್ಲಿ ಅಭಿವೃದ್ಧಿಪಡಿಸಲು ಯಾವ ರೀತಿಯ ವಿಶೇಷ ಕ್ರಮಗಳನ್ನು ಅನುಸರಿಸಲಾಗುವುದು ?

## ಸರ್ಕಾರಿ ಪದವಿ ಕಾಲೇಜುಗಳ ಉಪನ್ಯಾಸಕರುಗಳಿಗೆ ೨೦೦೬ – ೨೦೦೯ರವರೆಗೆ ಯುಜಿಸಿ ವೇತನ ಪಾವತಿಯಾಗಿಲ್ಲದಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೦೫ (೫೬೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಕಾಲೇಜುಗಳ ಉಪನ್ಯಾಸಕರುಗಳಿಗೆ ೨೦೦೬ ರಿಂದ ೨೦೦೯ ರವರೆಗೆ ಯುಜಿಸಿ ವೇತನ ಪಾವತಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಸಮಸ್ಯೆ ಉಂಟಾಗಲು ಕಾರಣವೇನು ; (ವಿವರ ನೀಡುವುದು)

(ಇ) ಸರ್ಕಾರಿ ಪದವಿ ಕಾಲೇಜುಗಳ ಉಪನ್ಯಾಸಕರುಗಳಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ, ಈ ಸಮಸ್ಯೆಯನ್ನು ಹೇಗೆ ಪರಿಹರಿಸಲಾಗುವುದು ?

## ಶಾಲಾ ಮಕ್ಕಳ ಪುಸ್ತಕದ ಭಾರವನ್ನು ಕಡಿಮೆ ಮಾಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೦೬ (೫೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೬ ಮಕ್ಕಳ ಶಾಲಾ ಚೀಲ ಕಾಯ್ದೆ ಯಾವಾಗ ಜಾರಿಗೆ ತರಲಾಯಿತು ಸದರಿ ಕಾಯಿದೆ ಕುರಿತು ವಿವರ ನೀಡುವುದು ;

(ಆ) ಶಾಲಾ ಚೀಲದ ತೂಕವು ಮಕ್ಕಳ ತೂಕದ ಶೇಕಡಾ ೧೦ ರಷ್ಟನ್ನು ಮೀರಿರಬಾರದು ಎಂದು ನಿಯಮವಿರುವುದು ನಿಜವೇ ;

(ಇ) ಈಗಿನ ಪ್ರಾಥಮಿಕ ಶಿಕ್ಷಣ ಪಡೆಯುತ್ತಿರುವ ಶಾಲಾ ಮಕ್ಕಳು ತಮ್ಮ ತೂಕದ ಶೇಕಡಾ ೪೫ ರಷ್ಟು ಭಾರದ ಪುಸ್ತಕಗಳನ್ನು ಹೊರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದರಿಂದಾಗಿ ಮಕ್ಕಳಲ್ಲಿ ಬೆನ್ನು ನೋವು ಮತ್ತು ಗೂನು ಬೆನ್ನಿನ ಸಮಸ್ಯೆ ಕಂಡು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮಕ್ಕಳ ಪುಸ್ತಕದ ಭಾರವನ್ನು ಕಡಿಮೆ ಮಾಡುವ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ೨೦೧೫–೧೬ನೇ ಸಾಲಿನಲ್ಲಿ ಹೈಸ್ಕೂಲ್ ವಿದ್ಯಾರ್ಥಿಗಳಿಗೆ ನೀಡಲಾಗುವ ಉಚಿತ ಸೈಕಲ್ ಖರೀದಿಯಲ್ಲಿ ಹೆಚ್ಚುವರಿ ದರ ನೀಡಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೦೭ (೫೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಹೈಸ್ಕೂಲು ವಿದ್ಯಾಭ್ಯಾಸ ನಡೆಸುವ ಬಡ ಮಕ್ಕಳಿಗೆ ನೀಡಲಾಗುವ ಉಚಿತ ಸೈಕಲ್ ಖರೀದಿಯಲ್ಲಿ ಪ್ರತಿ ಸೈಕಲ್ಲಿಗೆ ನೀಡಲಾದ ಮೊತ್ತವೆಷ್ಟು; ಎಷ್ಟು ಸೈಕಲ್ಲುಗಳನ್ನು ಸದರಿ ವರ್ಷದಲ್ಲಿ ಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಅದೇ ಅವಧಿಯಲ್ಲಿ ಹರಿಯಾಣ, ರಾಜಸ್ಥಾನ, ಮೊದಲಾದ ಕಡೆ ಕರ್ನಾಟಕ ಸರ್ಕಾರವು ಖರೀದಿ ಮಾಡಿದ್ದಕ್ಕಿಂತ, ಪ್ರತಿ ಸೈಕಲ್ಲಿಗೆ ೧,೫೦೦ ರೂಪಾಯಿ ಕಡಿಮೆ ಬೆಲೆಯ ಖರೀದಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಷ್ಟೊಂದು ಹೆಚ್ಚು ಹಣ ನೀಡಿ ಸೈಕಲ್ಲುಗಳನ್ನು ಕೊಳ್ಳಲು ಕಾರಣವೇನು ; ಈ ಕುರಿತು ಪೂರ್ಣ ಪರಿಶೀಲನೆ ನಡೆಸಲಾಗಿದೆಯೇ ; (ವಿವರ ನೀಡುವುದು)

(ಈ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಮನಾಯಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮೂಲಭೂತ ಸೌಕರ್ಯ ಕೊರತೆಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೦೮ (೫೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಮನಾಯಿ ಕಿರಿಯ ಪ್ರಾಥಮಿಕ ಶಾಲೆಗೆ ಕಟ್ಟಡವೇ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಬ್ಬ ಶಿಕ್ಷಕರಿಂದಲೇ ನಾಲ್ಕೂ ತರಗತಿಗಳಿಗೆ ಪಾಠ ನಡೆಯುತ್ತಿರುವುದು ನಿಜವೇ ;

(ಇ) ಇಲ್ಲಿ ಉತ್ತಮ ಮೂಲಭೂತ ಸೌಕರ್ಯ ನೀಡಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ರಾಜ್ಯಕ್ಕೆ ಅನ್ವಯವಾಗುವಂತೆ "Area Schedule" ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೯ (೧೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರವು ಇಡೀ ರಾಜ್ಯಕ್ಕೆ ಅನ್ವಯವಾಗುವಂತೆ "Area Schedule" ಮಾಡಲು ಪೂರ್ವಭಾವಿ ಅಧಿಸೂಚನೆಯನ್ನು ಹೊರಡಿಸಲಾಗಿದೆಯೇ ; ಹಾಗಿದ್ದಲ್ಲಿ, ಅದರ ಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಈ ಯೋಜನೆಗೆ ಸಾರ್ವಜನಿಕರು ಮತ್ತು ಖಾಸಗಿ ಬಸ್ ಮಾಲೀಕರ ವಿರೋಧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಖಾಸಗಿ ಬಸ್‌ಗಳು ಗ್ರಾಮೀಣ ಪ್ರದೇಶದಲ್ಲಿ ಅದರಲ್ಲೂ ವಿಶೇಷವಾಗಿ ಕೊಡಗು ಜಿಲ್ಲೆಯಂತಹ ಗುಡ್ಡಗಾಡು ಪ್ರದೇಶದಲ್ಲಿ ಚಲಿಸುತ್ತಿದ್ದು, ಈ ಯೋಜನೆ ಜಾರಿಯಾದಲ್ಲಿ ಗ್ರಾಮೀಣ ಪ್ರದೇಶದ

ಜನರಿಗೆ ಹಾಗೂ ಖಾಸಗಿ ಬಸ್ ಮಾಲೀಕರಿಗೆ ತೊಂದರೆ ಉಂಟಾಗಲಿರುವ ಬಗ್ಗೆ ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳಲಾಗುವುದು ? (ವಿವರಗಳನ್ನು ನೀಡುವುದು)

## ರಾಜ್ಯದ ವಕ್ಫ್ ಬೋರ್ಡ್‌ಗೆ ನೀಡಲಾಗುವ ಅನುದಾನದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೦ (೧೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ವಕ್ಫ್ ಬೋರ್ಡ್‌ಗೆ ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನವೆಷ್ಟು ;

(ಆ) ಯಾವ ಯಾವ ಉದ್ದೇಶಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ ;

(ಇ) ಕೊಡಗು ಜಿಲ್ಲೆಯಲ್ಲಿ ವಕ್ಫ್ ಬೋರ್ಡ್ ವತಿಯಿಂದ ಕಳೆದ ಮೂರು ವರ್ಷಗಳಿಂದ ಯಾವ ಯಾವ ಉದ್ದೇಶಗಳಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ? (ಕಾಮಗಾರಿವಾರು ಪ್ರತ್ಯೇಕ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ತಲುಪದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೧ (೧೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿನ ಅಲ್ಪಸಂಖ್ಯಾತ ಮಕ್ಕಳಿಗೆ ವಿದ್ಯಾರ್ಥಿವೇತನ ನೀಡಲು ಬಿಡುಗಡೆ ಮಾಡಲಾದ ಅನುದಾನ ಎಷ್ಟು ;

(ಆ) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; ಸಲ್ಲಿಸಿದ ಎಲ್ಲಾ ಮಕ್ಕಳಿಗೆ ವಿದ್ಯಾರ್ಥಿ ವೇತನ ವಿತರಿಸಲಾಗಿದೆಯೇ ; ಇಲ್ಲವಾದಲ್ಲಿ, ಕಾರಣವೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಸಲ್ಲಿಸಿದ ಅರ್ಜಿಗಳೆಷ್ಟು ? (ವಿದ್ಯಾರ್ಥಿ ವೇತನ ವಿತರಿಸಿದ ಸಂಖ್ಯೆ, ಕಾಲೇಜುವಾರು ಪ್ರತ್ಯೇಕ ವಿವರ ನೀಡುವುದು)

## ಮಹಾತ್ಮಾ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೨ (೬೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಮಹಾತ್ಮಾಗಾಂಧಿ ಉದ್ಯೋಗ ಖಾತ್ರಿ ಯೋಜನೆಗೆ ಬಿಡುಗಡೆಗೊಳಿಸಬೇಕಾದಂತಹ ಕೂಲಿ ಅನುದಾನ ಹಾಗೂ ಸಲಕರಣೆಗಳ ಅನುದಾನದ ಕುರಿತು ಜಿಲ್ಲಾವಾರು ಮಾಹಿತಿಯನ್ನು ನೀಡುವುದು ;

(ಆ) ಅನುದಾನ ಬಿಡುಗಡೆಗೊಳಿಸದಿರಲು ಕಾರಣವೇನು ;

(ಇ) ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಗ್ರಾಮಾಂತರ ಪ್ರದೇಶದಲ್ಲಿ ರಸ್ತೆ ದುರಸ್ಥಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೩ (೬೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಳ್ಳಿಗಳಲ್ಲಿ ಸಾರ್ವಜನಿಕರು ರಸ್ತೆಗಳ ಸಮಸ್ಯೆಯಿಂದಾಗಿ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜನರಿಗೆ ಉಂಟಾಗಿರುವ ಈ ಸಮಸ್ಯೆಗಳಿಗೆ ಕಾರಣಗಳೇನು ;

(ಇ) ರಾಜ್ಯದ ಹಾಗೂ ಹಳ್ಳಿಗಳಲ್ಲಿ ಸುವ್ಯವಸ್ಥಿತ ರಸ್ತೆಗಳನ್ನು ನಿರ್ಮಾಣ ಮಾಡುವಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗೂ ಈಗಾಗಲೇ ಕೈಗೊಂಡಂತಹ ರಸ್ತೆ ಅಭಿವೃದ್ಧಿಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

## ನೂತನವಾಗಿ ರಚನೆಗೊಂಡ ಗ್ರಾಮ ಪಂಚಾಯತಿಗಳಿಗೆ ಮೂಲ ಸೌಕರ್ಯ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೪ (೫೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನವಾಗಿ ರಚನೆಗೊಂಡಂತಹ ಗ್ರಾಮ ಪಂಚಾಯತಿಗಳಿಗೆ ಸೂಕ್ತ ಕಟ್ಟಡ, ಅನುದಾನಗಳು ಹಾಗೂ ಸಿಬ್ಬಂದಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ ;

(ಆ) ಇಲ್ಲಿಯವರೆಗೆ ನೂತನ ಗ್ರಾಮ ಪಂಚಾಯತಿಗಳಿಗೆ ಈ ಮೇಲಿನ ವ್ಯವಸ್ಥೆಗಳನ್ನು ಕಲ್ಪಿಸಲು ಸಾಧ್ಯವಾಗಿಲ್ಲವಾದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಇ) ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಉದ್ಯೋಗ ಖಾತ್ರಿ ಮತ್ತು ನರೇಗಾ ಯೋಜನೆಯಲ್ಲಿನ ಅಕ್ರಮಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೫೧೫ (೧೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಭಾಗದ ಬಡವರಿಗೆ ಉದ್ಯೋಗ ಒದಗಿಸುವ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ / ಅಕ್ರಮಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಿಂದ ಯಾವ ಯಾವ ಜಿಲ್ಲೆಗಳಲ್ಲಿ ಅವ್ಯವಹಾರ ಪ್ರಕರಣಗಳು ದಾಖಲಾಗಿವೆ, ಇವುಗಳ ತನಿಖೆ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಾಗಿದೆಯೇ ; ಇವುಗಳಲ್ಲಿ ಸಾಬೀತಾಗಿರುವ ಪ್ರಕರಣಗಳೆಷ್ಟು ;

(ಇ) ನರೇಗಾ ಅಕ್ರಮಕ್ಕೆ ಸಂಬಂಧಪಟ್ಟಂತೆ ಕಳೆದ ೩ ವರ್ಷಗಳಿಂದ ಯಾವ ಜಿಲ್ಲೆಯಿಂದ ಎಷ್ಟು ವಸೂಲಿ ಮಾಡಲಾಗಿದೆ, ವಸೂಲಿಗೆ ಬಾಕಿ ಇರುವ ಪ್ರಕರಣಗಳೆಷ್ಟು ;

(ಈ) ಇವುಗಳಲ್ಲಿ ಕಾಮಗಾರಿ ನಡೆಸದೇ ಹಣ ಮಂಜೂರಾತಿ ಹಾಗೂ ಕಾಮಗಾರಿ ಮೊತ್ತಕ್ಕಿಂತ ಹೆಚ್ಚು ಹಣ ಬಳಕೆ ಮಾಡಿರುವ ಪ್ರಕರಣಗಳೆಷ್ಟು ; ಜಿಲ್ಲಾವಾರು ವಿವರ ಒದಗಿಸುವುದು ಈ ರೀತಿಯ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿಕ್ಷಣ ಇಲಾಖೆಯಲ್ಲಿ ವಿವಿಧ ಶೀರ್ಷಿಕೆಯಲ್ಲಿ ಬಂದಿರುವ ಅನುದಾನ ಕುರಿತು

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೬ (೭೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ (ಶಿರಸಿ / ಕಾರವಾರ ಶೈಕ್ಷಣಿಕ) ಶಿಕ್ಷಣ ಇಲಾಖೆಯಲ್ಲಿ ೨೦೧೨–೧೩ನೇ ಸಾಲಿನಿಂದ ವಿವಿಧ ಶೀರ್ಷಿಕೆಯಡಿಯಲ್ಲಿ ಬಂದಿರುವ ಅನುದಾನವನ್ನು ಸರಿಯಾಗಿ ಬಳಕೆ ಮಾಡದೇ ದುರ್ಬಳಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ವಿವಿಧ ಶೀರ್ಷಿಕೆಯಡಿಯಲ್ಲಿ ೨೦೧೨–೧೩ನೇ ಸಾಲಿನಿಂದ ೨೦೧೫–೧೬ನೇ ಸಾಲಿನವರೆಗೆ ವಿವಿಧ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೨–೧೩ನೇ ಸಾಲಿನಿಂದ ವಿವಿಧ ಶೀರ್ಷಿಕೆಯಡಿಯಲ್ಲಿ ಯಾವ ಯಾವ ಶಾಲೆಗಳಿಗೆ ಪೀಠೋಪಕರಣ / ಸಲಕರಣೆ ಮುಂತಾದ ಸಾಮಗ್ರಿಗಳನ್ನು ಖರೀದಿ ಮಾಡಲಾಗಿದೆ ಯಾರಿಂದ ಖರೀದಿಸಲಾಗಿದೆ ? (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮ ಪಂಚಾಯತಿಗಳ ವ್ಯಾಪ್ತಿಗಳ ಸಕಾಲದಲ್ಲಿ ಸಾರ್ವಜನಿಕರಿಗೆ ಸೌಲಭ್ಯಗಳ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೧೭ (೬೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿಯೆ ಸಾರ್ವಜನಿಕ ಸೇವೆಗೆ ಅನುವು ಮಾಡಿಕೊಡುವ ಉದ್ದೇಶದಿಂದ ತಾಲ್ಲೂಕು ಗ್ರಾಮ ಮಟ್ಟದಲ್ಲೇ ಸಕಾಲದಲ್ಲಿ ಸೇವೆಗಳು ಲಭ್ಯವಾಗುವಂತೆ ಯಾವ ಬದಲಾವಣೆಗಳನ್ನು ಮಾಡಲಾಗಿದೆ ;

(ಆ) ಇದರ ನಿರ್ವಹಣೆಯನ್ನು ಯಾವ ಇಲಾಖೆಯ ವ್ಯಾಪ್ತಿಗೆ ತರಲಾಗುವುದು ; ಈ ನಿಟ್ಟಿನಲ್ಲಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಇಲಾಖೆ ಸಿದ್ದವಾಗಿದೆಯೇ ; ಹಾಗಿದ್ದಲ್ಲಿ, ಜಾರಿಗೆ ತರುವುದು ಯಾವಾಗ ;

(ಈ) ಹೆಚ್ಚುವರಿ ಸಿಬ್ಬಂದಿಗಳ ನೇಮಕವನ್ನು ಯಾರಿಗೆ ವಹಿಸಲಾಗುತ್ತದೆ; ಅಥವಾ ಈ ಸೇವೆಗಳ ಅನುಕೂಲವನ್ನು ಖಾಸಗಿ ಕಂಪನಿಗಳಿಗೆ ಗುತ್ತಿಗೆ ನೀಡಲು ಸರ್ಕಾರ ಮುಂದಾಗಿದೆಯೇ ? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿನ ನಮ್ಮ ಗ್ರಾಮ ರಸ್ತೆಗಳ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೧೮ (೬೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯು ಅಸಮರ್ಪಕವಾಗಿ ಜಾರಿಗೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ; ಮತ್ತು ಕಳೆದ ಮೂರು ವರ್ಷಗಳಲ್ಲಿ ಇದಕ್ಕೆ ಬಂದ ಅನುದಾನವೆಷ್ಟು ಮತ್ತು ಬಳಕೆಯಾದ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಈ ಯೋಜನೆಯಡಿಯಲ್ಲಿ ಯಾವ ಯಾವ ಗ್ರಾಮಗಳಿಗೆ ಎಷ್ಟು ಕಿಲೋಮೀಟರ್ ರಸ್ತೆ ನಿರ್ಮಾಣವಾಗಿದೆ ; ಮತ್ತು ಎಲ್ಲಿಂದ ಎಲ್ಲಿಯವರೆಗೆ ಆಗಿರುತ್ತದೆ ; ಇದಕ್ಕೆ ತಗಲಿರುವ ವೆಚ್ಚ ಎಷ್ಟು ? (ತಾಲ್ಲೂಕುವಾರು, ಗ್ರಾಮವಾರು, ವರ್ಷವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ಸಾರಿಗೆ ಬಸ್ ಘಟಕಗಳ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೯೯ (೬೬೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಾರಿಗೆ ಬಸ್ ಘಟಕಗಳು (ಡಿಪೋಗಳು) ಇವೆ ; (ಜಿಲ್ಲಾವಾರು, ತಾಲ್ಲೂಕುವಾರು, ಡಿಪೋವಾರು ಘಟಕ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಎಲ್ಲಾ ಬಸ್ ಘಟಕ (ಡಿಪೋ)ಗಳಲ್ಲಿನ ಬಸ್‌ಗಳು (ವಾಹನ) ಸ್ವಚ್ಛತೆಗಾಗಿ ಅಂದರೆ ತಿಗಣೆ, ಜಿರಳೆ ಇದಕ್ಕಾಗಿ ಹಾಗೂ ಇನ್ನಿತರೆ ಕೆಲಸಗಳಿಗಾಗಿ ಸರ್ಕಾರ ಮಾಡಿದ ಖರ್ಚು ಎಷ್ಟು ; ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಬಂದ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಡಿಪೋಗಳವಾರು ವರ್ಷವಾರು ಖರ್ಚುಗಳ ಮಾಹಿತಿ ನೀಡುವುದು)

## ಕಾರ್ಮಿಕರ ಭವಿಷ್ಯ ನಿಧಿ ಸಾರಿಗೆ ಅಡಿಯಲ್ಲಿ ಕಾರ್ಮಿಕರ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೫೨೦ (೫೮೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ತನ್ನ ಸಿಬ್ಬಂದಿಯ ವೇತನದಿಂದ ಮುರಿದುಕೊಂಡ ಭವಿಷ್ಯ ನಿಧಿ ಮೊತ್ತವನ್ನು ಭವಿಷ್ಯ ನಿಧಿ ಮಂಡಳಿಗೆ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಕರ್ತರು ಯಾರು ; ಅವರ ಮೇಲೆ ಕೈಗೊಂಡಿರುವ ಕ್ರಮಗಳೇನು ;

(ಇ) ಸಕಾಲಕ್ಕೆ ಪಾವತಿ ಮಾಡದಿರುವುದರಿಂದ ಸಂಸ್ಥೆಗೆ ಆರ್ಥಿಕ ಹೊರೆ ಉಂಟಾಗಿರುವುದು ನಿಜವೇ ;

(ಈ) ನೌಕರರ ಭವಿಷ್ಯ ನಿಧಿ ಮೊತ್ತವನ್ನು ಬೇರೆ ಇನ್ನಿತರೆ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆಯೇ ; ಬಳಸಿಕೊಂಡಿದ್ದಲ್ಲಿ ಯಾವ್ಯಾವ ಬಾಬ್ತುಗಳಿಗೆ ಅದನ್ನು ಬಳಸಿಕೊಳ್ಳಲಾಗಿದೆ ; ಇದಕ್ಕೆ ಸಕ್ಷಮ ಪ್ರಾಧಿಕಾರದ ಅನುಮತಿಗಳನ್ನು ಪಡೆಯಲಾಗಿದೆಯೇ ; ಪಡೆಯದಿದ್ದಲ್ಲಿ, ಇದಕ್ಕೆ ಕಾರಣಕರ್ತರಾದವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಗ್ರಾಮೀಣ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅನುದಾನ ಅವ್ಯವಹಾರ ಆಗಿರುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೫೨೧ (೫೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದಲ್ಲಿ ಕೆಲವೊಂದು ಮೊತ್ತ ನಾಪತ್ತೆಯಾಗಿರುವುದು ನಿಜವೇ ;

(ಆ) ನಿಜವಿದ್ದಲ್ಲಿ, ಸದರಿ ಮೊತ್ತವೆಷ್ಟು ; ಇದಕ್ಕೆ ಕಾರಣಕರ್ತರು ಯಾರು; ಅವರ ಮೇಲೆ ಏನು ಕ್ರಮ ಕೈಗೊಂಡಿದೆ ;

(ಇ) ಈ ದಿಸೆಯಲ್ಲಿ ಸರ್ಕಾರವು ಪುನಟಿ ಶ್ರೀಧರ್ ಮತ್ತು ಶಿವರುದ್ರಪ್ಪನವರ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ನೇಮಕ ಮಾಡಿದ್ದು ನಿಜವೇ ;

(ಈ) ಮೇಲ್ಕಂಡ ಎರಡು ಸಮಿತಿಗಳು ನೀಡಿದ ವರದಿಯಲ್ಲಿನ ಅಂಶಗಳೇನು ; ಈ ಸಮಿತಿಗಳು ಮಾಡಿರುವ ಶಿಫಾರಸ್ಸುಗಳೇನು; ಅವುಗಳ ಅನುಷ್ಠಾನಕ್ಕೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಉ) ಈ ಹಗರಣ ಸಂಬಂಧ ಸಮಗ್ರ ತನಿಖೆಗೆ ಸರ್ಕಾರ ಆದೇಶಿಸುವುದೇ ?

## ರಾಜ್ಯದ ಪ್ರಯಾಣಿಕರ ಅನುಕೂಲಕ್ಕಾಗಿ ಬಸ್ ಸಂಚಾರ ಕಲ್ಪಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೫೨೨ (೫೫೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಯಾವ್ಯಾವ ಮಾರ್ಗಗಳಲ್ಲಿ ಎಷ್ಟು ಬಸ್ಸುಗಳನ್ನು ಓಡಿಸಲು ಯಾವ್ಯಾವ ಖಾಸಗಿಯವರಿಗೆ ಪರವಾನಗಿ ನೀಡಲಾಗಿದೆ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ರೀತಿ ಬಸ್ಸುಗಳನ್ನು ಓಡಿಸಲು ಅನುಮತಿ ಪಡೆದ ಖಾಸಗಿಯವರು ಅನುಮತಿ ಪಡೆದಷ್ಟು ಸಂಖ್ಯೆಯ ಬಸ್ಸುಗಳನ್ನು ಮಾತ್ರ ಓಡಿಸುತ್ತಿದ್ದಾರೆಯೇ ; ಇಲ್ಲದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಇ) ಒಂದೇ ನೋಂದಣಿ ಸಂಖ್ಯೆ ಹೊಂದಿರುವ ಹಲವಾರು ಖಾಸಗಿ ಬಸ್ಸುಗಳು ನಿರ್ದಿಷ್ಟ ಮಾರ್ಗಗಳಲ್ಲಿ ಓಡಾಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಪ್ರಯಾಣಿಕರ ಓಡಾಟಕ್ಕೆ ಮೀಸಲಾದ ಖಾಸಗಿ ಬಸ್ಸುಗಳಲ್ಲಿ ಹೆಚ್ಚಿನ ಪ್ರಮಾಣದ ಲಗೇಜುಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಸಾಗಾಣಿಕೆ ನಡೆಸಿ ರಾಜ್ಯದ ಬೊಕ್ಕಸಕ್ಕೆ ಕೋಟ್ಯಾಂತರ ತೆರಿಗೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮಹಿಳಾ ಕಾರ್ಮಿಕರಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೨೩ (೫೭೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಎಷ್ಟು ವಿಭಾಗಗಳಿವೆ; ಅವು ಯಾವುವು ;

(ಆ) ಆ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಸ್ ಡಿಪೋಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ವಿಭಾಗವಾರು ಮಾಹಿತಿ ನೀಡುವುದು)

(ಇ) ಆ ಬಸ್ ಡಿಪೋಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರ ಸಂಖ್ಯೆ ಎಷ್ಟು ; (ಡಿಪೋವಾರು, ವೃಂದವಾರು ಮಾಹಿತಿ ನೀಡುವುದು)

(ಈ) ಈ ಮಹಿಳಾ ಕಾರ್ಮಿಕರಿಗೆ ಎಲ್ಲಾ ಡಿಪೋಗಳಲ್ಲಿ ಪ್ರತ್ಯೇಕವಾಗಿ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಉ) ಮೇಲ್ಕಂಡ ಎಲ್ಲಾ ವಿಭಾಗಗಳಲ್ಲಿ ಮಹಿಳಾ ಕಾರ್ಮಿಕರ ಸಮಸ್ಯೆಗಳನ್ನು ಆಲಿಸಲು ದೂರು ಸಮಿತಿ ಮತ್ತು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಯಾವಾಗ ರಚಿಸಲಾಗುವುದು ? (ಮಾಹಿತಿ ನೀಡುವುದು)

## ಮಾತೃ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೨೪ (೫೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ರೀತ್ಯಾ ಮಕ್ಕಳಿಗೆ ಪ್ರಾಥಮಿಕ ಶಿಕ್ಷಣವನ್ನು ಯಾವ ಭಾಷೆಯಲ್ಲಿ ಬೋಧಿಸಬೇಕಾಗುತ್ತದೆ ;

(ಆ) ರಾಜ್ಯದ ಪ್ರಸಕ್ತ ಎಷ್ಟು ಮಕ್ಕಳು ಮಾತೃ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣವನ್ನು ಪಡೆಯುತ್ತಿದ್ದಾರೆ ;

(ಇ) ರಾಜ್ಯದಲ್ಲಿ ಎಷ್ಟು ಮಕ್ಕಳು ಮಾತೃ ಭಾಷೆಯಲ್ಲದ ಆಂಗ್ಲ, ಹಿಂದಿ ಇನ್ನಿತರ ಭಾಷೆಗಳಲ್ಲಿ ಪ್ರಾಥಮಿಕ ಶಿಕ್ಷಣವನ್ನು ಪಡೆಯುತ್ತಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿ ಆಂಗ್ಲ ಭಾಷೆಯಲ್ಲಿ ಕಲಿಕೆಯನ್ನು ಕಡ್ಡಾಯಗೊಳಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಕುಡಚಿ–ಬಾಗಲಕೋಟೆ ರೈಲು ಮಾರ್ಗ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

*೫೨೫ (೫೭೫)* ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಡಚಿ–ಬಾಗಲಕೋಟೆ ರೈಲು ಮಾರ್ಗದ ಒಟ್ಟು ಅಂತರವೆಷ್ಟು; ಈ ರೈಲು ಮಾರ್ಗಕ್ಕೆ ಎಷ್ಟು ಜಮೀನಿನ ಅಗತ್ಯವಿದೆ ;

(ಆ) ಆ ಪೈಕಿ ಸರ್ಕಾರಕ್ಕೆ ಎಷ್ಟು ವಿಸ್ತೀರ್ಣದ ಜಮೀನು ಒಳಪಟ್ಟಿರುತ್ತದೆ; ಭೂಸ್ವಾಧೀನ ಮಾಡಿಕೊಳ್ಳಬೇಕಾದ ಜಮೀನಿನ ವಿಸ್ತೀರ್ಣವೆಷ್ಟು;

(ಇ) ಇಲ್ಲಿಯವರೆಗೂ ಎಷ್ಟು ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಅದಕ್ಕೆ ನೀಡಲಾದ ಪರಿಹಾರದ ಮೊಬಲಗು ಎಷ್ಟು ; ಬಾಕಿ ನೀಡಬೇಕಾದ ಪರಿಹಾರ ಮೊಬಲಗು ಎಷ್ಟು ;

(ಈ) ಈ ಮಾರ್ಗದ ರೈಲು ಯೋಜನೆಯ ಅಂದಾಜು ವೆಚ್ಚವೆಷ್ಟು ; ಆ ವೆಚ್ಚದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಅನುಕ್ರಮವಾಗಿ ಭರಿಸಬೇಕಾದ ಪಾಲು ಎಷ್ಟು ;

(ಉ) ಎಷ್ಟು ಅವಧಿಯಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಮೀನು ಮಂಜೂರಾತಿ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೬ (೫೮೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳಿಗೆ ಮಂಜೂರು ಮಾಡಲಾದ ನಿವೇಶನ ಜಮೀನುಗಳಿಗೆ ಅರ್ಧ ಭಾಗದಷ್ಟು ಸಹಾಯಧನ ನೀಡುವ ಕಾರ್ಯಕ್ರಮ ಇದೆಯೇ ;

(ಆ) ಈ ರಿಯಾಯಿತಿಯನ್ನು ಯಾವ ದಿನಾಂಕದಿಂದ ನೀಡಲಾಗುತ್ತಿದೆ; ಇದುವರೆವಿಗೂ ರಿಯಾಯಿತಿ ಪಡೆದಿರುವವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ನೀಡಬೇಕಾದ ಸಹಾಯಧನ ಬಾಕಿ ಮೊತ್ತ ಎಷ್ಟು ; ಯಾವ ಯಾವ ಫಲಾನುಭವಿಗಳಿಗೆ ರಿಯಾಯಿತಿ ನೀಡಲು ಬಾಕಿ ಇದೆ?

## ವಸತಿ ಯೋಜನೆ ಅಡಿಯಲ್ಲಿ ಹಂಚಿಕೆ ಮಾಡಲಾದ ಮನೆಗಳ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೭ (೫೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ನೇ ಸಾಲಿನಿಂದ ಮಾರ್ಚ್ – ೨೦೧೬ರವರೆಗೆ ೯.೦೦ ಲಕ್ಷ ಮನೆಗಳ ನಿರ್ಮಾಣದ ಗುರಿಯನ್ನು ಆಯವ್ಯಯ ಭಾಷಣದಲ್ಲಿ ಮಂಡಿಸಲಾಗಿದ್ದು, ಈ ಸಂಖ್ಯೆಯಲ್ಲಿ ೮,೪೯,೪೧೪

ಮನೆಗಳನ್ನು ಪೂರ್ಣಗೊಳಿಸಲಾಗಿದೆ. ೪,೬೨,೦೯೬ ಮನೆಗಳು ಮುಕ್ತಾಯ ಹಂತದ ಪ್ರಗತಿಯಲ್ಲಿವೆ ಎಂದು ಸರ್ಕಾರದ ಪತ್ರ ದಿನಾಂಕ: ೦೧.೦೯.೨೦೧೬ರಲ್ಲಿ ಹೇಳಲಾಗಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಈ ಸಂಖ್ಯೆಯಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಮನೆಗಳನ್ನು ವಸತಿ ಯೋಜನೆಗಳ ಅಡಿಯಲ್ಲಿ ಹಂಚಲಾಗಿದೆ;

(ಇ) ೨೦೧೭–೧೮ನೇ ಸಾಲಿನಲ್ಲಿ ೬.೦೦ ಲಕ್ಷಗಳ ಹೊಸ ಮನೆ ಗುರಿಯನ್ನು ನಿಗಧಿಪಡಿಸಿದ ಆದೇಶ ಹೊರಡಿಸಲಾಗಿದೆಯೇ ;

(ಈ) ವಸತಿ ಯೋಜನೆಗಳ ಅಡಿಯಲ್ಲಿ ಗುರಿ ೬.೦೦ ಲಕ್ಷ ಮನೆಗಳಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಮನೆಗಳನ್ನು ಹಂಚಲು ಕ್ರಿಯಾ ಯೋಜನೆ ಮಾಡಲಾಗಿದೆ ;

(ಉ) ಗುರಿ ಸಾಧಿಸುವಲ್ಲಿ ಪ್ರಗತಿ ಏನು ; ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಮನೆಗಳನ್ನು ಹಂಚಲಾಗಿದೆ ;

(ಊ) ೨೦೧೬–೧೭ನೇ ಸಾಲಿನಲ್ಲಿ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮೀಣ ಅಭಿವೃದ್ಧಿ ಇಲಾಖೆಯಲ್ಲಿ ಕಾಗದ ರಹಿತ ಆಡಳಿತ ನಡೆಸುವ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೮ (೫೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಡಳಿತ ಸುಧಾರಣೆ ಪಾರದರ್ಶಕ ವ್ಯವಸ್ಥೆ ಹಾಗೂ ಅನಗತ್ಯ ವಿಳಂಬ ತಪ್ಪಿಸುವ ಉದ್ದೇಶದಿಂದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಾಗದ ರಹಿತ ಆಡಳಿತ ನಡೆಸುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದೇ ;

(ಆ) ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಎಂದಿನಿಂದ ಜಾರಿಗೆ ತರಲಾಗುವುದು ;

(ಇ) ಕಾಗದ ರಹಿತ ಆಡಳಿತ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರ ನಿಗಧಿಪಡಿಸಿರುವ ಹಣ ಎಷ್ಟು ?

## ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಕೇಂದ್ರ ಪ್ರಾರಂಭಿಸುವ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೯ (೫೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಿಂದ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಕೇಂದ್ರವನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಈ ಕೇಂದ್ರ ಸ್ಥಾಪನೆಗೆ ಈಗಾಗಲೇ ಸಮಿತಿ ರಚಿಸಲಾಗಿದೆಯೇ; ರಚಿಸಿದ್ದಲ್ಲಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ ; ಹಾಗೂ ಈ ಸಮಿತಿಯಲ್ಲಿ ಯಾರ್‍ಯಾರು ಇರುತ್ತಾರೆ ;

(ಇ) ಹಾಗಿದ್ದಲ್ಲಿ, ಈ ಕೇಂದ್ರವನ್ನು ಯಾವ ವಿಶ್ವವಿದ್ಯಾಲಯದಲ್ಲಿ ಪ್ರಾರಂಭಿಸಲಾಗುವುದು ;

(ಈ) ಈ ಕೇಂದ್ರವನ್ನು ಪ್ರಾರಂಭಿಸಲು ಎಷ್ಟು ಕೋಟಿ ಹಣ ಮಂಜೂರು ಮಾಡಲಾಗಿದೆ ? (ಮಾಹಿತಿ ಒದಗಿಸುವುದು)

## ವಸತಿ ಯೋಜನೆ ಅಡಿಯಲ್ಲಿ ನಿವೇಶನ ಹಂಚಿಕೆ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೦ (೫೮೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ಇಲಾಖೆಯ ಅಡಿಯಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಬಡವರಿಗಾಗಿ ನಿವೇಶನ ನೀಡುವ ಯೋಜನೆಗಳು ಯಾವುವು ;

(ಆ) ಈ ಯೋಜನೆಗಳ ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಎಲ್ಲೆಲ್ಲಿ, ಎಷ್ಟೆಷ್ಟು ನಿವೇಶನಗಳನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಮೀಸಲಿಟ್ಟಿರುವ ಶೇಕಡಾವಾರು ಸಂಖ್ಯೆ ಎಷ್ಟು ; ಎಷ್ಟು ಮಂದಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಈ ಅವಧಿಯಲ್ಲಿ ನಿವೇಶನಗಳನ್ನು ನೀಡಲಾಗಿದೆ ?

## ಹೈದರಾಬಾದ್ – ಕರ್ನಾಟಕದ ಶಾಲೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೧ (೬೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ ಗಡಿ ಭಾಗದ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳ ಅಭಿವೃದ್ಧಿಗಾಗಿ ಕೈಗೊಂಡ ಕ್ರಮಗಳೇನು ;

(ಆ) ಈ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸದರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯಲ್ಲಿ ಆಶ್ರಯ ಯೋಜನೆ ಮನೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೨ (೬೬೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಆಶ್ರಯ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ನೂತನವಾಗಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಆಶ್ರಯ ಯೋಜನೆ ಅಡಿಯಲ್ಲಿ ಫಲಾನುಭವಿಗಳಿಗೆ ಮನೆ ನೀಡುವಾಗ ಯಾವ ಮಾನದಂಡವನ್ನು ಅನುಸರಿಸಲಾಗುವುದು;

(ಈ) ಕಳೆದ ಎರಡು ವರ್ಷಗಳಿಂದ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ? (ಇಲಾಖಾವಾರು ವಿವರ ನೀಡುವುದು)

## ನಿರ್ಮಲ ಭಾರತ ಅಭಿಯಾನ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೩ (೬೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಒದಗಿಸಲಾಗಿದೆ ;

(ಆ) ಇದರಲ್ಲಿ ಶಿಕ್ಷಣ ಇಲಾಖೆ ಸೇರಿದಂತೆ ಯಾವ ಯಾವ ಇಲಾಖೆಗಳಿಗೆ ಎಷ್ಟು ಅನುದಾನ ಒದಗಿಸಲಾಗಿದೆ ; ಅನುದಾನ ಉಪಯೋಗಿಸಲಾದ ವಿವರಗಳನ್ನು ನೀಡುವುದು ;

(ಇ) ಐ.ಇ.ಸಿ. ಕಾರ್ಯಕ್ರಮಗಳನ್ನು ಯಾವ ತಾಲ್ಲೂಕುಗಳಲ್ಲಿ ಹಮ್ಮಿಕೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೪ (೬೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಇನ್ನೊಂದು ಶಾಲೆ ಹೊಂದಾಣಿಕೆ (ಮರ್ಜ್) ಮಾಡಲಾಗಿದೆ ;

(ಆ) ಈ ರೀತಿ ಹೊಂದಾಣಿಕೆ (ಮರ್ಜ್) ಮಾಡಲು ಕಾರಣಗಳೇನು;

(ಇ) ಶಾಲೆ ಮಕ್ಕಳ ಸಂಖ್ಯೆ ಕಡಿಮೆಯಾದಲ್ಲಿ ಮಕ್ಕಳ ಸಂಖ್ಯೆ ವೃದ್ಧಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಈ ರೀತಿ ಶಾಲೆಗಳು ಬೇರೆ ಶಾಲೆಗಳಿಗೆ ಮರ್ಜ್ ಮಾಡುವುದರಿಂದ ಖಾಸಗಿ ಶಾಲೆಗಳಿಗೆ ಪ್ರೋತ್ಸಾಹ ನೀಡಿದಂತಾಗುತ್ತಿಲ್ಲವೇ ;

(ಉ) ಈ ಬಗ್ಗೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ?

## ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಕೈಗಾರಿಕಾ ವಸಹಾತು ಕೇಂದ್ರಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೫ (೫೨೬) ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಕೈಗಾರಿಕಾ ವಸಾಹತು ಕೇಂದ್ರಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ; ಇಲ್ಲಿ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಕೈಗಾರಿಕಾ ವಸಾಹತುಗಳು ರಸ್ತೆ, ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲ ಸೌಕರ್ಯ ಒದಗಿಸುವುದಕ್ಕಾಗಿ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು; ಇದುವರೆಗೂ ಖರ್ಚಾಗಿರುವ ಹಣವೆಷ್ಟು ? (ಸಮಗ್ರ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೬ (೫೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡ ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರತಿ ಗ್ರಾಮ ಪಂಚಾಯತಿಗೆ ಸರ್ಕಾರ ನಿಗಧಿಪಡಿಸಿರುವ ಅನುದಾನ ಎಷ್ಟು ; (ಪಂಚಾಯಿತಿವಾರು ಮಾಹಿತಿ ನೀಡುವುದು)

(ಇ) ಸದರಿ ಗ್ರಾಮ ಪಂಚಾಯತಿಗಳಿಗೆ ರಾಜ್ಯ ಸರ್ಕಾರ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ಪಂಚಾಯತಿವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೭ (೫೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪಂಚಾಯತಿಗಳಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಪಂಚಾಯತಿ ಸದಸ್ಯರಿಗೆ ಮಾಹಿತಿ ನೀಡುವುದಕ್ಕಾಗಿ ಕಾರ್ಯಕ್ರಮ ರೂಪಿಸಲಾಗಿದೆಯೇ;ರೂಪಿಸಿದ್ದರೆ, ಸಮಗ್ರ ಮಾಹಿತಿ ನೀಡುವುದು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ದಾಲ್ ಮಿಲ್‌ಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೮ (೫೨೫) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ದಾಲ್ ಮಿಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ದಾಲ್ ಮಿಲ್‌ಗಳಲ್ಲಿ ಎಷ್ಟು ಮಿಲ್‌ಗಳು ಕಾರ್ಯ ನಿರ್ವಹಿಸುತ್ತಿವೆ ; ಹಾಗೂ ಎಷ್ಟು ಮಿಲ್‌ಗಳು ಮುಚ್ಚಿವೆ ; ಅವು ಮುಚ್ಚಲು ಕಾರಣವೇನು ; (ಸಮಗ್ರ ಮಾಹಿತಿ ನೀಡುವುದು)

(ಇ) ಮುಚ್ಚಿರುವ ದಾಲ್ ಮಿಲ್‌ಗಳ ಪುನಶ್ಚೇತನಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಕಂದಾಯ ವಿಭಾಗದಲ್ಲಿ ಸ್ಥಾಪಿಸಿರುವ ಶುದ್ಧ ನೀರಿನ ಘಟಕಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೯ (೫೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಕಂದಾಯ ವಿಭಾಗದ ಆರೂ ಜಿಲ್ಲೆಗಳಲ್ಲಿ ಇದುವರೆವಿಗೂ ಸ್ಥಾಪಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಸ್ಥಾಪಿಸಲಾಗುತ್ತಿರುವ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಘಟಕಗಳಲ್ಲಿ ಅನೇಕ ಘಟಕಗಳು ನಿಷ್ಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳನ್ನು ತಿಳಿಸುವುದು ?

## ಚಾಮರಾಜನಗರದಲ್ಲಿ ಹೈಟೆಕ್ ಬಸ್ ನಿಲ್ದಾಣ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೦ (೫೩೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಹೈಟೆಕ್ ಬಸ್ ನಿಲ್ದಾಣವನ್ನು ನಿರ್ಮಿಸಲು ಉದ್ದೇಶಿಸಲಾಗಿದೆಯೇ; ಇದನ್ನು ಎಲ್ಲಿ ನಿರ್ಮಿಸಲಾಗುವುದು ; ಇದಕ್ಕೆ ಅಗತ್ಯವಾದ ಭೂಮಿಯನ್ನು ಗುರುತಿಸಿ ವಶಪಡಿಸಿಕೊಳ್ಳಲಾಗಿದೆಯೇ ; ಈ ನಿಲ್ದಾಣ ನಿರ್ಮಾಣಕ್ಕೆ ಅಗತ್ಯವಾದ ಅಂದಾಜು ವೆಚ್ಚ ಎಷ್ಟು ; ಒದಗಿಸಿರುವ ಅನುದಾನ ಎಷ್ಟು ; (ಯೋಜನೆಯ ವಿವರಗಳನ್ನು ಒದಗಿಸುವುದು)

(ಆ) ಚಾಮರಾಜನಗರ ಕೊಳ್ಳೇಗಾಲ ಮತ್ತು ಹೆಗ್ಗಡದೇವನಕೋಟೆ ಬಸ್ ಡಿಪೋಗಳಲ್ಲಿರುವ ಬಸ್‌ಗಳ ಸಂಖ್ಯೆ ಎಷ್ಟು ; ಈ ವರ್ಷ ಹೊಸದಾಗಿ ಎಷ್ಟು ಬಸ್‌ಗಳನ್ನು ಈ ಡಿಪೋಗಳಿಗೆ ಒದಗಿಸಲಾಗುವುದು ; ಹಾಗೂ ಹೊಸದಾಗಿ ಎಷ್ಟು ಗ್ರಾಮೀಣ ಮಾರ್ಗಗಳನ್ನು ಈ ಡಿಪೋಗಳಿಂದ ಗುರುತಿಸಿ, ಬಸ್ ಸಂಚಾರ ಪ್ರಾರಂಭಿಸಲಾಗುವುದು ? (ವಿವರ ಒದಗಿಸುವುದು)

## ಮೈಸೂರು ನಗರದಲ್ಲಿ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಕಾರ್ಖಾನೆಗೆ ಸೇರಿದ ಭೂಮಿ ರಕ್ಷಣೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

ೞಳ೧ (ೞಙಳ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಕಾರ್ಖಾನೆಗೆ ಸೇರಿರುವ ಜಾಗ ಎಷ್ಟು ; (ಸ್ಥಳ, ಸರ್ವೇ ನಂಬರ್, ವಿಸ್ತೀರ್ಣ ಇವುಗಳ ವಿವರ ನೀಡುವುದು)

(ಆ) ಅರಣ್ಯ ಇಲಾಖೆಗೆ ನೀಡಬೇಕಾಗಿದ್ದ ಗಂಧದ ಮರದ ಮೌಲ್ಯದ ಬಾಕಿಗೆ ಬದಲಾಗಿ ಅರಣ್ಯ ಇಲಾಖೆಗೆ ನೀಡಿದ್ದ ಜಾಗ ಎಷ್ಟು ; ಎನ್.ಐ.ಇ. ಗೆ ನೀಡಿದ್ದ ಜಾಗ ಎಷ್ಟು; ಅರಣ್ಯ ಇಲಾಖೆಯಿಂದ ಜಾಗವನ್ನು ವಾಪಸ್ಸು ಪಡೆದು ಕಾರ್ಖಾನೆಗೆ ಹಸ್ತಾಂತರಿಸಲು, ಉಳಿದ ಜಾಗವನ್ನು ಯಾವುದೇ ಕಾರಣಕ್ಕೂ ಖಾಸಗಿಯವರಿಗೆ ನೀಡದೇ ಸಂರಕ್ಷಿಸಲು ಕ್ರಮಜರುಗಿಸಲಾಗುವುದೇ ;

(ಇ) ಕಾರ್ಖಾನೆಯ ಶತಮಾನೋತ್ಸವ ಸಂದರ್ಭದಲ್ಲಿ, ಸದರಿ ಖಾಲಿ ನಿವೇಶನದಲ್ಲಿ ಕಾರ್ಖಾನೆಯ ವಿಸ್ತರಣೆ, ಗೋಡೌನ್, ಶತಮಾನೋತ್ಸವ ಭವನ, ಕಾರ್ಮಿಕರ ವಸತಿ ಗೃಹಗಳು ಇವುಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ? (ವಿವರ ಒದಗಿಸುವುದು)

## ಚಾಮರಾಜನಗರ ಜಿಲ್ಲೆಯಲ್ಲಿ ಪ್ರಾಥಮಿಕ ಶಾಲಾ ಕೊಠಡಿಗಳ ಕೊರತೆ ಬಗ್ಗೆ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೨ (೫೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಿಗೆ ಅಗತ್ಯವಾಗಿರುವ ಹೆಚ್ಚುವರಿ ಕೊಠಡಿಗಳ ಸಂಖ್ಯೆ ಎಷ್ಟು ; ದುರಸ್ಥಿ ಆಗಬೇಕಾಗಿರುವ ಕೊಠಡಿಗಳ ಸಂಖ್ಯೆ ಎಷ್ಟು ; ಈ ಬಗ್ಗೆ ಸಮೀಕ್ಷೆ ಮಾಡಿ ಅಂಕಿ ಅಂಶಗಳನ್ನು ಸಂಗ್ರಹಿಸಲಾಗಿದೆಯೇ ; ಹೆಚ್ಚುವರಿ ಹೊಸ ಕೊಠಡಿಗಳ ನಿರ್ಮಾಣಕ್ಕೆ ಮತ್ತು ಕೊಠಡಿಗಳ ದುರಸ್ಥಿಗೆ ಪ್ರಸಕ್ತ ವರ್ಷ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ;

(ಆ) ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ; ಅಥವಾ ಸಮೀಪದ ಶಾಲೆಗೆ ವಿಲೀನಗೊಳಿಸಲಾಗಿದೆ ; ಜಿಲ್ಲೆಯಲ್ಲಿ ಮಂಜೂರಾಗಿರುವ

ಪ್ರಾಥಮಿಕ ಶಾಲಾ ಉಪಾಧ್ಯಾಯರ ಸಂಖ್ಯೆ ಎಷ್ಟು ; ಹಾಲಿ ಸೇವೆ ಸಲ್ಲಿಸುತ್ತಿರುವ ಉಪಾಧ್ಯಾಯರ ಸಂಖ್ಯೆ ಎಷ್ಟು ; ಕೊರತೆ ಇರುವ ಉಪಾಧ್ಯಾಯರುಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು;

(ಇ) ಚಾಮರಾಜನಗರ ತಾಲ್ಲೂಕು ಮಸಗಾಪುರ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಇದ್ದ ಎರಡು ಕೊಠಡಿಗಳ ಪೈಕಿ ಒಂದು ಕೊಠಡಿ ಬಿದ್ದು ಹೋಗುವ ಸ್ಥಿತಿಯಲ್ಲಿದ್ದು ಒಂದೇ ಕೊಠಡಿಯಲ್ಲಿ ಮತ್ತು ಮರದ ಕೆಳಗೆ ಐದು ತರಗತಿಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೂಡಲೇ ಈ ಶಾಲೆಗೆ ತಾತ್ಕಾಲಿಕವಾಗಿ ಕೊಠಡಿಗಳನ್ನು ಒದಗಿಸಿಕೊಡಲು ಕ್ರಮ ಜರುಗಿಸುವಂತೆ ಸಾರ್ವಜನಿಕರು ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ಕೆಂಗೇರಿ–ಕನಕಪುರ–ಚಾಮರಾಜನಗರ ರೈಲ್ವೆ ಮಾರ್ಗ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೩ (೫೩೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಂಗೇರಿ–ಕನಕಪುರ–ಕೊಳ್ಳೇಗಾಲ–ಚಾಮರಾಜನಗರ ರೈಲ್ವೆ ಮಾರ್ಗ ನಿರ್ಮಾಣ ಯೋಜನೆಗೆ ಕೇಂದ್ರ ರೈಲ್ವೆ ಮಂತ್ರಾಲಯದಿಂದ ಯಾವಾಗ ಮಂಜೂರಾತಿ ದೊರಕಿದೆ ; ಈ ಮಾರ್ಗದ ಸರ್ವೆ ಕಾರ್ಯ ಪೂರ್ಣಗೊಂಡಿದ್ದು ಯಾವಾಗ ;

(ಆ) ಈ ಮಾರ್ಗ ನಿರ್ಮಾಣದ ಅಂದಾಜು ವೆಚ್ಚ ಎಷ್ಟು ; ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲು ಎಷ್ಟು ; ಇದುವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆ ಆಗಿರುವ ಹಣ ಎಷ್ಟು ; ಯಾವ ಯಾವ ಕಾಮಗಾರಿಗಳು ಆಗಿವೆ ;

(ಇ) ಈ ಮಾರ್ಗ ನಿರ್ಮಾಣಕ್ಕೆ ಅಗತ್ಯವಾದ ಭೂಸ್ವಾಧೀನ ಕಾರ್ಯವನ್ನು ಕೈಗೊಳ್ಳಲಾಗಿದೆಯೇ ; ಸಾಧ್ಯವಾದಷ್ಟು ತ್ವರಿತಗತಿಯಲ್ಲಿ ಈ ಮಾರ್ಗವನ್ನು ನಿರ್ಮಿಸುವ ಬಗ್ಗೆ ರಾಜ್ಯ ಸರ್ಕಾರ ಕ್ರಮ ಜರುಗಿಸುವುದೇ ?

## ವಕ್ಫ್ ಸಂಸ್ಥೆಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೫೪೪ (೬೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ ವಿವಿಧ ಲೆಕ್ಕಶೀರ್ಷಿಕೆಯಡಿ ಬಿಡುಗಡೆ ಆಗಿರುವ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ವಕ್ಫ್ ಸಂಸ್ಥೆಗಳಿಗೆ ಅನುದಾನ ನೀಡಲು ಇರುವ ನಿಯಮಗಳೇನು; ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗಿದೆಯೇ; ಪಾಲಿಸದಿದ್ದಲ್ಲಿ, ಕಾರಣಗಳೇನು ;

(ಇ) ರಾಜ್ಯದಲ್ಲಿ ವಕ್ಫ್ ಸಂಸ್ಥೆಗೆ ಸೇರಿದ ಆಸ್ತಿಯ ಜಮೀನುಗಳ ಸರ್ವೆ ಕಾರ್ಯವನ್ನು ಯಾವ ವರ್ಷದಿಂದ ಪ್ರಾರಂಭಿಸಲಾಗಿದೆ ; ಹಾಗಿದ್ದಲ್ಲಿ, ಈವರೆಗೆ, ಎಷ್ಟು ವಕ್ಫ್ ಸಂಸ್ಥೆ ಆಸ್ತಿಗಳ ಸರ್ವೆ ಕಾರ್ಯ ಮುಗಿದು ಗೆಜೆಟ್ ಹೊರಡಿಸಲಾಗಿದೆ ; (ಜಿಲ್ಲಾವಾರು, ವರ್ಷವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಈ) ಹೊಸ ನಿಯಮಾವಳಿಗಳ ಪ್ರಕಾರ ಒಂದು ವರ್ಷದಲ್ಲಿ ಸರ್ವೆ ಕಾರ್ಯವನ್ನು ಸರ್ಕಾರ ಪೂರ್ಣಗೊಳಿಸಬೇಕೆಂದಿದ್ದರೂ ಸಹ ಇದುವರೆವಿಗೂ ಸರ್ವೆ ಕಾರ್ಯ ಪೂರ್ಣಗೊಂಡಿರುವುದಿಲ್ಲ, ಇದಕ್ಕೆ ಕಾರಣಗಳೇನು; ಇದಕ್ಕೆ ಸಂಬಂಧಪಟ್ಟಂತೆ ಇತ್ತೀಚೆಗೆ ಹೊರಡಿಸಿರುವ ಸುತ್ತೋಲೆ ಪ್ರತಿ ನೀಡುವುದು ;

(ಉ) ಕಳೆದ ೩ ವರ್ಷಗಳಿಂದ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ "ಡಿ" ಗ್ರೂಪ್ ನೌಕರರ ನೇರ ನೇಮಕಾತಿಯ ಸಂಪೂರ್ಣ ವಿವರಗಳನ್ನು ನೀಡುವುದು ?

## ರಾಮನಗರ ಜಿಲ್ಲೆಯಲ್ಲಿನ ಮರಳು ಗಣಿಗಾರಿಕೆ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೫೪೫ (೬೮೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಯನ್ನು ನಡೆಸಲು ಅನುಮತಿ ನೀಡಿರುವ ಸ್ಥಳಗಳೆಷ್ಟು ; ಸದರಿ ಸ್ಥಳಗಳಿಂದ ಲಭ್ಯವಾಗುತ್ತಿರುವ ಮರಳಿನ ಪ್ರಮಾಣವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆಯಲ್ಲಿ ಸರ್ಕಾರಿ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕರ ಕಾಮಗಾರಿಗಳಿಗೆ ಇರುವ ಮರಳಿನ ಬೇಡಿಕೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ರಾಮನಗರ ಜಿಲ್ಲೆಯಲ್ಲಿ ಮರಳಿನ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮರಳಿನ ಕೊರತೆ ನೀಗಿಸಲು ಹೆಚ್ಚುವರಿಯಾಗಿ ಎಂ ಸ್ಯಾಂಡ್ ಉತ್ಪಾದನೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ರಾಮನಗರ ಜಿಲ್ಲೆಯಲ್ಲಿ ಕ್ರಷರ್‌ನಲ್ಲಿ ಎಂ ಸ್ಯಾಂಡ್ ಉತ್ಪಾದಿಸಲು ಬಂದಿರುವ ಕೋರಿಕಾ ಅರ್ಜಿಗಳೆಷ್ಟು ; ವಿಲೇ ಆಗಿರುವ ಅರ್ಜಿಗಳೆಷ್ಟು ; ಬಾಕಿ ಇರುವ ಅರ್ಜಿಗಳೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನಾಗಿ ಮಾಡುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೫೪೬ (೫೭೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನಾಗಿ ಸರ್ಕಾರ ಘೋಷಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ನಿರ್ಮಿಸಿ ಬಡವರಿಗೆ ಹಂಚಿಕೆ ಮಾಡಲಾಗಿದೆ, ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು ;

(ಇ) ಈ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; ಈ ಯೋಜನೆಯಲ್ಲಿ ಎಷ್ಟು ಗುರಿಯನ್ನು ಹೊಂದಲಾಗಿತ್ತು ಹಾಗೂ ಈ ಯೋಜನೆಯ ಇತ್ತೀಚಿನ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಕ್ಕೆ ಕಾಯ್ದಿರಿಸಿರುವ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೭ (೬೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಲ್ಲಿ ೧೩ನೇ ಮತ್ತು ೧೪ನೇ ಹಣಕಾಸು ಮತ್ತು ಶಾಸನ ಬದ್ಧ ಅನುದಾನದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಜನಾಂಗದವರಿಗೆ ಕಾಯ್ದಿರಿಸಿದ ಅನುದಾನದಲ್ಲಿ ಖರ್ಚಾಗಿರುವ ಹಣ ಎಷ್ಟು ; ಬಾಕಿ ಉಳಿದ ಹಣ ಎಷ್ಟು ; (ತಾಲ್ಲೂಕುವಾರು ಹಾಗೂ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ? (ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

## ನರೇಗಾ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೮ (೬೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಯೋಜನೆಯ ಫಲಾನುಭವಿಗಳಿಗೆ ನರೇಗಾ ಯೋಜನೆ ಅಡಿಯಲ್ಲಿ ಮಾನವ ೯೦ ದಿನಗಳ ಕೂಲಿ ಕೆಲಸ ನೀಡಬೇಕೆಂದು ನಿಯಮವಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಇದ್ದಲ್ಲಿ ಈ ಯೋಜನೆಯು ಧಾರವಾಡ, ಹಾವೇರಿ, ಗದಗ ಜಿಲ್ಲೆಗಳ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಸಮರ್ಪಕವಾಗಿ ಅನುಷ್ಠಾನವಾಗುತ್ತಿದೆಯೇ ; ಸರ್ಕಾರ ಏನು ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ನರೇಗಾ ಯೋಜನೆಯ ಮುಖ್ಯಮಂತ್ರಿಗಳ ೨೧ ಅಂಶಗಳ ಕಾರ್ಯಕ್ರಮ ಅಡಿಯಲ್ಲಿ ಅನುಷ್ಠಾನವಾಗುತ್ತಿರುವ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು?

## ಗ್ರಾಮ ಪಂಚಾಯತಿಗಳ ನಗರೀಕರಣ ಮತ್ತು ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೯ (೬೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಬರುತ್ತವೆ; ಅವುಗಳು ಯಾವುವು; (ತಾಲ್ಲೂಕುವಾರು, ಪಂಚಾಯತಿವಾರು ಪೂರ್ಣ ವಿವರ ನೀಡುವುದು)

(ಆ) ಇವುಗಳಲ್ಲಿ ನಗರೀಕರಣಗೊಳ್ಳುತ್ತಿರುವ ಪಂಚಾಯತಿಗಳು ಯಾವುವು; (ಪೂರ್ಣ ವಿವರ ನೀಡುವುದು)

(ಇ) ಈ ೩ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಈ ಪೈಕಿ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ, ಯಾವ ಯಾವ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಪಂಚಾಯಿತಿವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವೇತನಕ್ಕೆ ಎಷ್ಟು ಅನುದಾನದ ಅವಶ್ಯಕತೆ ಇದೆ ; ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟು ಅನುದಾನದ ಅವಶ್ಯಕತೆ ಇದೆ ? (ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

## ಗ್ರಂಥಾಲಯ ಇಲಾಖೆಯ ಸೆಸ್ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೦ (೬೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಗ್ರಂಥಾಲಯ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಸಂದಾಯವಾದ ಸೆಸ್ ಹಣವೆಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಗ್ರಂಥಾಲಯ ಇಲಾಖೆಯು ಪಡೆದ ಈ ಸೆಸ್ ಹಣವನ್ನು ಯಾವ ಯಾವ ಕಾರ್ಯಗಳಿಗೆ ವ್ಯಯಿಸಿದೆ ; ಈ ಸೆಸ್ ಹಣವನ್ನು ಗ್ರಾಮ ಪಂಚಾಯಿತಿಗಳಿಗೆ ಹಂಚಿಕೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಗ್ರಾಮ ಪಂಚಾಯಿತಿಗಳವಾರು ಸಂಪೂರ್ಣ ವಿವರ ನೀಡುವುದು ;

(ಇ) ಈ ಮೂರು ಜಿಲ್ಲೆಗಳಲ್ಲಿ ಗ್ರಂಥಾಲಯ ಇಲಾಖೆಯು ಕಳೆದ ಮೂರು ವರ್ಷಗಳಲ್ಲಿ ಖರೀದಿಸಿರುವ ಪೀಠೋಪಕರಣಗಳು ಎಷ್ಟು; ಇದಕ್ಕಾಗಿ ವ್ಯಯಿಸಿದ ಹಣವೆಷ್ಟು ; ನೇರವಾಗಿ ಪಡೆಯಲಾಗಿದೆಯೇ ಅಥವಾ ಗುತ್ತಿಗೆದಾರರಿಂದ ಪಡೆಯಲಾಗಿದೆಯೇ ; (ತಾಲ್ಲೂಕುವಾರು ಗುತ್ತಿಗೆದಾರರ ಹೆಸರು ಸಹಿತ ಮಾಹಿತಿ ನೀಡುವುದು)

## ವಸತಿ ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೧ (೬೮೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯ ಎಲ್ಲಾ ತಾಲ್ಲೂಕುಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಯಡಿ ವಿವಿಧ ವರ್ಗಗಳಿಗೆ ಕಳೆದ ಮೂರು ವರ್ಷಗಳಲ್ಲಿ ಮಂಜೂರಾಗಿರುವ ಮನೆಗಳು ಎಷ್ಟು ; (ವಿವಿಧ ಯೋಜನೆಗಳವಾರು, ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಮೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶದ ಕಡು ಬಡವರಿಗೆ ಮನೆಗಳನ್ನು ವಿತರಿಸಲಾಗಿದೆಯೇ; ವಿತರಿಸಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ವಿತರಣೆಯಾಗಿದೆ ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿವಾರು ಈ ಮನೆಗಳನ್ನು ವಿತರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಇದು ಯಾವಾಗಿನಿಂದ ಜಾರಿಗೊಳ್ಳುತ್ತದೆ ? (ಪೂರ್ಣ ಮಾಹಿತಿ ನೀಡುವುದು)

## ಶಾಲೆಯ ಸಮವಸ್ತ್ರ ಖರೀದಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೨ (೭೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಪ್ರಸಕ್ತ ಸಾಲಿನ ೨ನೇ ಹಂತದ ಶಾಲಾ ಸಮವಸ್ತ್ರ ವಿತರಣೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಅಂದಾಜು ೧ ಕೋಟಿಗೂ ಹೆಚ್ಚು ಅವ್ಯವಹಾರವಾಗಿದೆ ಎಂದು ಸಾಮಾಜಿಕ ಸೇವಾ ಸಂಘಟನೆ ಸೇಫ್ ಆರ್ಗ್‌ನೈಜೇಷನ್‌ನ ಅಧ್ಯಕ್ಷ ಆರೋಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸರ್ಕಾರದ ಸುತ್ತೋಲೆ ಪ್ರಕಾರ ನಿಗದಿಪಡಿಸಿದ ನಿಯಮಾವಳಿಗಳನ್ನು ಗಾಳಿಗೆ ತೂರಿ ತಮಗೆ ಬೇಕಾದವರಿಂದ ಕಳಪೆ ಗುಣಮಟ್ಟದ ಸಮವಸ್ತ್ರಗಳನ್ನು ಖರೀದಿಸಲಾಗಿದ್ದು; ಇದರಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳ ನೇರ ಕೈವಾಡ ಇರುವುದರ ಬಗ್ಗೆ ತನಿಖೆ ಮಾಡುವುದೇ; (ವಿವರ ನೀಡುವುದು)

(ಇ) ಈ ಸಮವಸ್ತ್ರ ಕುರಿತಾದ ಟೆಂಡರ್‌ಗೆ ನಿಯಮಾವಳಿಗಳ ಪ್ರಕಾರ ಪತ್ರಿಕಾ ಪ್ರಕಟಣೆ ನೀಡಲಾಗಿತ್ತೆ; ಟೆಂಡರ್‌ನಲ್ಲಿ ಭಾಗವಹಿಸಿರುವ ಟೆಂಡರ್‌ದಾರರು ಯಾರು ? (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

## ಗ್ರಾಮ ಸ್ವರಾಜ್ಯ ಯೋಜನೆಯಡಿ ಗ್ರಾಮ ಪಂಚಾಯತಿಗಳಿಗೆ ಖರೀದಿಸಿರುವ ಕಂಪ್ಯೂಟರ್ ಹಾಗೂ ಪರಿಕರಗಳ ಬಗ್ಗೆ

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೩ (೭೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಗ್ರಾಮ ಸ್ವರಾಜ್ಯ ಯೋಜನೆಯಡಿ ಗ್ರಾಮ ಪಂಚಾಯತಿಗಳಿಗೆ ಖರೀದಿಸಿರುವ ಕಂಪ್ಯೂಟರ್ ಹಾಗೂ ಪರಿಕರಗಳ ಖರೀದಿಗೆ ಸಂಬಂಧಿಸಿದಂತೆ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಕಂಪ್ಯೂಟರ್ ಖರೀದಿಗೆ ಇರುವ ಮಾನದಂಡಗಳೇನು; ಪಂಚಾಯತ್‌ಗಳಿಗೆ ಸರಬರಾಜು ಮಾಡಲು ಗಣಕಯಂತ್ರ ಮತ್ತು ಅದರ ಪರಿಕರಗಳ ಗುಣಮಟ್ಟ ಟೆಂಡರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ತನಿಖೆ ನಡೆಸಲು ತನಿಖಾ ಸಮಿತಿ ರಚಿಸಲಾಗಿದೆಯೆ ? (ವಿವರ ನೀಡುವುದು)

## ಶಾಲಾ ಕಟ್ಟಡಕ್ಕೆ ಬಂದಿರುವ ಅನುದಾನದಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೪ (೭೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆಗೆ ಸಂಬಂಧಿಸಿದಂತೆ ೨೦೧೦ನೇ ಸಾಲಿನಿಂದ ೨೦೧೫ನೇ ಸಾಲಿನವರೆಗೆ ಶಾಲಾ ಕಟ್ಟಡಕ್ಕೆ ಬಂದಿರುವ ಅನುದಾನದಲ್ಲಿ ಅವ್ಯವಹಾರ ಆಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕಾರವಾರ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆಗೆ ಸಂಬಂಧಿಸಿದಂತೆ ೨೦೧೦ನೇ ಸಾಲಿನಿಂದ ೨೦೧೫ನೇ ಸಾಲಿನವರೆಗೆ ಯಾವ ಯಾವ ಶಾಲೆಗಳಿಗೆ ಎಷ್ಟು ಹೊಸ ಕಟ್ಟಡ ಕಟ್ಟಲು ಅನುದಾನ ಮಂಜೂರಾಗಿರುತ್ತದೆ ; (ವಿವರ ನೀಡುವುದು)

(ಇ) ಇದರಲ್ಲಿ ಹಳೆಯ ಕಟ್ಟಡವೆಷ್ಟು ; ಅವು ಎಷ್ಟು ವರ್ಷಗಳ ಹಳೆಯದಾಗಿದ ಕಟ್ಟಡವಾಗಿರುತ್ತದೆ; ಈ ಕಟ್ಟಡ ಕೆಡವಲು ಸರ್ಕಾರದಿಂದ ಅನುಮತಿ ಪಡೆಯುಲಾಗಿದೆಯೇ ; (ತಾಲ್ಲೂಕುವಾರು / ಜಿಲ್ಲಾವಾರು ವಿವರ ನೀಡುವುದು)

(ಈ) ಯಾವ ಯಾವ ಶಾಲೆಗೆ ಈ ಕಟ್ಟಡಗಳು ಮಂಜೂರಾಗಿರುತ್ತದೆ. ಈ ಶಾಲೆಗಳ ಒಟ್ಟು ವಿಸ್ತೀರ್ಣ ಎಷ್ಟು ;

(ಉ) ಹಳೆಯ ಕಟ್ಟಡಗಳನ್ನು ಕೆಡವಲು (ಹಾಳಾದಿದ್ದರೆ) ಸರ್ಕಾರದಿಂದ ಅನುಮತಿ ಪಡೆದಿರುವ ಆದೇಶದ ನಕಲು ಹಾಗೂ ಹಳೆಯ ಕಟ್ಟಡ ಕೆಡವುದರ ಪೂರ್ವದಲ್ಲಿ ಆದೇಶದಂತೆ ಇಟ್ಟುಕೊಂಡ ಪೋಟೋ ಪ್ರತಿ ಹಾಗೂ ಯಾರು ಒದಗಿಸುವರು ? (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0198/700 ಪ್ರತಿಗಳು/16–11–2016